ಸಂಪುಟ: 14 Volume | ಸಂಚಿಕೆ: 62 Issue | ಪುಟಗಳು 08 Pages | ಬುಧವಾರ 10 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ರೂಪ ಕಣ್ಣುಗಳಿಗೆ ಸೀಮಿತ. ಗುಣ, ಆತ್ಮದವರೆಗೆ ತಲುಪುವ ಸಾಧನ.

–ತ್ರಿವೇಣಿ



ಪುದುಚೇರಿ ಮಾಜಿ ಸಿಎಂ ನಾರಾಯಣಸ್ವಾಮಿ ಅವರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ವಿಧಾನಸೌಧದ ಅವರ ಕಚೇರಿಯಲ್ಲಿ ಮಂಗಳವಾರ ಭೇಟಿ ಮಾಡಿ ಅಭಿನಂದಿಸಿದರು.



ಗದಗ ಜಿಲ್ಲಾ ಪಂಚಾಯತ ಕಾರ್ಯಾಲಯದ ಸಭಾಂಗಣದಲ್ಲಿ ಏರ್ಪಡಿಸಿದ ಜಿಲ್ಲಾ ಮಟ್ಟದ ಬ್ಯಾಂಕುಗಳ ಪ್ರಗತಿ ಪರಿಶೀಲನಾ ಸಭೆ ಹಾಗೂ ಜಿಲ್ಲಾ ಮಟ್ಟದ ಬ್ಯಾಂಕುಗಳ ಸಲಹಾ ಸಮಿತಿ ಸಭೆಯನ್ನು ಕರ್ನಾಟಕ ಸರ್ಕಾರದ ಮಾಜಿ ಮುಖ್ಯಮಂತ್ರಿಗಳು ಹಾಗೂ ಗದಗ–ಹಾವೇರಿ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಬಸವರಾಜ ಬೊಮ್ಮಾಯಿರವರು ನಡೆಸಿದರು.

## ರೈತರಿಗೆ ಬೆಳೆ ವಿಮೆ ಪರಿಹಾರ

**ಬೆಂಗಳೂರು:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಮತ್ತು ಸಂಸತ್ ಸದಸ್ಯ ಸಾಗರ್ ಖಂಡ್ರೆ ಅವರ ಪ್ರಯತ್ನದ ಫಲವಾಗಿ 2025ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಬೆಳೆ ಹಾನಿಗೆ ಒಳಗಾದ ಜಿಲ್ಲೆಯ ರೈತರಿಗೆ 246.9 ಕೋಟಿ ರೂ. ಅತ್ಯಧಿಕ ಬೆಳೆ ವಿಮಾ ಪರಿಹಾರ ಲಭಿಸಿದೆ. ಜಿಲ್ಲೆಯಲ್ಲಿ ಒಟ್ಟಾರೆ 202091 ರೈತರು ಬೆಳೆ ವಿಮೆಗೆ ನೋಂದಾಯಿಸಿಕೊಂಡಿದ್ದು, 121077 ಹೆಕ್ಟೇರ್ ಪ್ರದೇಶ ವಿಮಾ ವ್ಯಾಪ್ತಿಗೆ ಒಳಪಟ್ಟಿತ್ತು. ಮುಂಗಾರು ಹಂಗಾಮಿನಲ್ಲಿ 24690.25 ಕ್ಲೇಮ್ ಗಳು ಬಂದಿದ್ದು, 11052 ಕ್ಲೇಮ್ ಗಳನ್ನು ಇತ್ಯರ್ಥಪಡಿಸಿರುವ ವಿಮಾ ಕಂಪನಿ 110 ಕೋಟಿ ರೂ. ಮೊತ್ತದ ಕ್ಲೇಮ್ ಹಣವನ್ನು ಈಗಾಗಲೇ ಪಾವತಿ ಮಾಡಿತ್ತು. ಇದರ ಹೊರತಾಗಿ 13638.21 ಕೋಟಿ ರೂ.ಗಳ ಕ್ಲೇಮ್ ವಿವಿಧ ಹಂತದಲ್ಲಿ ಬಾಕಿ ಉಳಿದಿತ್ತು. ಈ ಬಾಕಿಯನ್ನು ತ್ವರಿತವಾಗಿ ರೈತರಿಗೆ ನೀಡುವಂತೆ ಈಶ್ವರ ಖಂಡ್ರೆ ಮತ್ತು ಸಾಗರ್ ಖಂಡ್ರೆ ಅವರು ಕಂಪನಿಯೊಂದಿಗೆ ನಡೆಸಿದ ಸತತ ಸಭೆಯ ಹಿನ್ನೆಲೆಯಲ್ಲಿ ತೊಗರಿ, ಸೋಯಾಬಿನ್ ಉದ್ದು, ಹೆಸರು ಮತ್ತಿತರೆ ಬಿತ್ತನೆ ಮಾಡಿ, ಪ್ರಕೃತಿ ವಿಕೋಪದಿಂದ ನಷ್ಟಕ್ಕೆ ಒಳಗಾಗಿದ್ದ ಜಿಲ್ಲೆಯ ರೈತರಿಗೆ ವಿಮೆ ಪರಿಹಾರ ಜಮಾ ಪ್ರಕ್ರಿಯೆ ಆರಂಭಗೊಂಡಿದೆ. ಉಳಿದ ಸುಮಾರು 85 ಕೋಟಿ ರೂ. ಹಣವೂ ಶೀಘ್ರವೇ ಬಿಡುಗಡೆಯಾಗಲಿದೆ.




ತಮಿಳುನಾಡು ಕಾಂಗ್ರೆಸ್ ಸಂಸದರಾದ ಜ್ಯೋತಿಮಣಿ, ಸುಧಾ ಹಾಗೂ ಹಾಸನ ಸಂಸದ ಶ್ರೇಯಸ್ ಪಟೇಲ್ ಅವರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ವಿಧಾನಸೌಧದ ಅವರ ಕಚೇರಿಯಲ್ಲಿ ಮಂಗಳವಾರ ಭೇಟಿ ಮಾಡಿ ಅಭಿನಂದಿಸಿದರು.

## ಹೊಚಕನಳ್ಳಿ ರೈತರಿಗೆ ರಸ್ತೆ ನಿರ್ಮಾಣಕ್ಕೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ತಾಲೂಕಿನ ಹೊಚಕನಳ್ಳಿ ಗ್ರಾಮದ ರೈತರಿಗೆ ಹೊಲಗಳಿಗೆ ತೆರಳಲು ಸೂಕ್ತ ರಸ್ತೆ ಇಲ್ಲದ ಕಾರಣ ತೀವ್ರ ತೆ–ೂಂದರೆ ಉಂಟಾಗುತ್ತಿದೆ. ಈ ಹಿನ್ನೆಲೆಯಲ್ಲಿ ರೈತರಿಗೆ ಅನುಕೂಲವಾಗುವಂತೆ ಹೊಲದ ರಸ್ತೆ ನಿರ್ಮಾಣ ಮಾಡಿಕೊಡುವಂತೆ ಕಾರಂಜಾ ಮುಳುಗಡೆ ಸಂತ್ರಸ್ತರ ಹಿತರಕ್ಷಣಾ ಸಮಿತಿ ಹಾಗೂ ಬೀದರ ಜಿಲ್ಲಾ ಸಮಗ್ರ ಅಭಿವೃದ್ಧಿ ಜಂಟಿ ಕ್ರಿಯಾ ಸಮಿತಿ ವತಿಯಿಂದ ತಹಸೀಲ್ದಾರ ರವೀಂದ್ರ ದಾಮಾ ಅವರಿಗೆ ಮನವಿ ಸಲ್ಲಿಸಲಾಯಿತು.

ರೈತರ ಕೃಷಿ ಚಟುವಟಿಕೆಗಳಿಗೆ ರಸ್ತೆ ಕೊರತೆ ಅಡ್ಡಿಯಾಗುತ್ತಿದ್ದು, ಶೀಘ್ರವೇ ರಸ್ತೆ ನಿರ್ಮಾಣ ಕಾಮಗಾರಿ ಕೈಗೊಳ್ಳುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ ಒಂದು ವಾರದೊಳಗೆ ವೇಳೆ ರಸ್ತೆ ನಿರ್ಮಾಣ ಕಾಮಗಾರಿ ಕೈಗೊಳ್ಳದಿದ್ದರೆ ತಹಸೀಲ್ ಕಚೇರಿ ಮುಂದೆ ಧರಣಿ



ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ. ಈ ಸಂದರ್ಭದಲ್ಲಿ ಕಾರಂಜಾ ಮುಳುಗಡೆ ಸಮಿತಿ ಅಧ್ಯಕ್ಷ ಚಂದ್ರಶೇಖರ ಪಾಟೀಲ, ರಾಜಪ್ಪಾ ಖೇಣಿರಂಜೋಳ, ತುಕಾರಾಮ ಕೋಲಿ, ವೀರಭದ್ರಪ್ಪ ಸುತಾರ, ಚಂದ್ರಶೆಟ್ಟಿ ಪಾಟೀಲ, ಪುಂಡಲಿಕ ಸುತಾರ, ಪಂಡರಿನಾಥ ಸುತಾರ ಸೇರಿದಂತೆ ಹಲವು ರೈತರು ಉಪಸ್ಥಿತರಿದ್ದರು.

## ಬಸ್ಸಿನ ಆಕ್ಸೆಲ್ ಕಟ್ಟಾಗಿ ತಪ್ಪಿದ ಭಾರಿ ಅನಾಹುತ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ

ಚಾಲಕನ ಸಮಯಪ್ರಜ್ಞೆ ಹಾಗೂ ಜಾಣ್ಮೆಯಿಂದಾಗಿ ಬಾರಿ ಬಸ್ ಅನಾಹುತ ಒಂದು ಕೂದಲೆಳೆಯ ಅಂತರದಿಂದ ತಪ್ಪಿದ್ದು. 45ಕ್ಕೂ ಹೆಚ್ಚು ಪ್ರಯಾಣಿಕರು ಪ್ರಾಣಪಾಯದಿಂದ ಪಾರದ ಘಟನೆಯು ತಾಲೂಕಿನ ಮೋರ್ಗೆರಿ ಕ್ರಾಸ್ ಬಳಿ ಮಂಗಳವಾರ ಬೆಳಿಗ್ಗೆ ಸಂಭವಿಸಿದೆ.

ಹಡಗಲಿಯಿಂದ ಬೆಳಿಗ್ಗೆ 6–45 ಕ್ಕೆ / 7:00 ಗಂಟೆ ಸರಿಸುಮಾರು ಹಗರಿಬೊಮ್ಮನಹಳ್ಳಿ ಕಡೆಗೆ ಬರುತ್ತಿದ್ದ ಕೆಎಸ್ಆರ್‌ಟಿಸಿ ಬಸ್ಸಿನ ಆಕ್ಸಲ್ ತುಂಡಾಗಿದೆ.

ಒಂದು ರೀತಿಯಲ್ಲಿ ಹೇಳುವಂತಾದರೆ ಚಾಲಕನ ಸಮಯ ಪ್ರಜ್ಞೆಯು ಅಥವಾ ಬುದ್ದಿವಂತಿಕೆಯು 45ಕ್ಕೆ ಹೆಚ್ಚು ಪ್ರಯಾಣಿಕರನ್ನು ಯಾವುದೇ ಗಂಭೀರ ಗಾಯಗಳಾಗದಂತೆ ಆಕ್ಸೆಲ್ ಕಟ್ಟಾದರು ಸಹ ಅಕ್ಕಪಕ್ಕದ ರಸ್ತೆ ಬದಿಯಲ್ಲಿ ಯಾವುದೇ ಅನಾಹುತಗಳು ಸಂಭವಿಸಂದಂತೆ ಮರಕ್ಕೆ ವಾಲಿಸಿ ನಿಲ್ಲಿಸುವಲ್ಲಿ ಯಶಸ್ವಿಯಾಗಿದ್ದಾರೆ. ಒಂದು



ವೇಳೆ ಚಾಲಕನ ನಿಯಂತ್ರಣ ತಪ್ಪಿದ್ದರೆ ಪ್ರತಿನಿತ್ಯ ಸಂಚರಿಸುತ್ತಿದ್ದಂತಹ ಶಾಲಾ ಕಾಲೇಜು ವಿದ್ಯಾರ್ಥಿಗಳು ಶಿಕ್ಷಕರು ಹಾಗೂ ದೈನಂದಿನ ಪ್ರಯಕರು ಸೇರಿದಂತೆ ಹೆಚ್ಚು ಜನರಿಗೆ ಗಂಭೀರ ಗಳಾಗುವಂತ ಸ್ಥಿತಿ ಕಂಡು ಬರುತ್ತಿತ್ತು. ಆದರೆ ಯಾವುದೇ ದುರಾದೃಷ್ಟ ತೊಂದರೆಯಾಗಿಲ್ಲ ಎಂದು ಕಂಡು ಬರುತ್ತದೆ. ನಾಲ್ಕರಿಂದ ಐದು ಜನಕ್ಕೆ ಸಣ್ಣಪುಟ್ಟ ಗಾಯಗಳಾಗಿದ್ದು ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿರುತ್ತದೆ. ಎಂದು ಬಸ್ ಡಿಪೋ ಅಧಿಕಾರಿಗಳಾದ ಸಂತೋಷ ಅವರು ತಿಳಿಸಿದ್ದಾರೆ.

# ಗೌಡ್ರ ಟಿಕೆಟ್ ಜಟಾಪಟಿ

## ಮಾಜಿ ಪ್ರಧಾನಿಗೆ ಸಿಗದ ರಾಜ್ಯಸಭೆಯ ಅವಕಾಶ | ಕಾಂಗ್ರೆಸ್ ಟೀಕೆ | ಮೈತ್ರಿ ತಿರುಗೇಟು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರಿಗೆ ರಾಜ್ಯಸಭೆ ಟಿಕೆಟ್ ತಪ್ಪಿದ್ದು ರಾಜಕೀಯ ಜಟಾಪಟಿ ಜೋರಾಗಿದೆ. ಕರ್ನಾಟಕದ ಕಾಂಗ್ರೆಸ್ ಪಕ್ಷದ ಉಸ್ತುವಾರಿ ಸುರ್ಜೇವಾಲ ಹಾಗೂ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಈ ಕುರಿತಾದ ಹೇಳಿಕೆಗೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ತಿರುಗೇಟು ನೀಡಿದ್ದು, ಮೊಸಳೆ ಕಣ್ಣೀರು ಸುರಿಸಬೇಡಿ ಎಂದು ತಿರುಗೇಟು ನೀಡಿದ್ದಾರೆ.

**ಹೆಮ್ಮೆಯ ಪ್ರಧಾನಿ:** ದೇಶದ ಅತ್ಯುನ್ನತ ಪ್ರಧಾನ ಮಂತ್ರಿ ಸ್ಥಾನವನ್ನು ಅಲಂಕರಿಸಿ, ಹೆಮ್ಮೆಯ ಕನ್ನಡಿಗ ಎನಿಸಿಕೊಂಡಿದ್ದ ಎಚ್.ಡಿ. ದೇವೇಗೌಡರನ್ನು ಪ್ರಧಾನಿ ಪದವಿಯಿಂದ ಕೆಳಗಿಳಿಸಿದ ಕುಖ್ಯಾತಿ ಕಾಂಗ್ರೆಸ್ ಪಕ್ಷದ ಮೇಲಿರುವುದನ್ನು ಕಾಂಗ್ರೆಸ್ ಮುಂದಾಳುಗಳು ಮರೆತಂತಿದೆ ಎಂದು ವಿಜಯೇಂದ್ರ ಟೀಕಿಸಿದ್ದಾರೆ.

**ಗೌಡ್ರು ಅರ್ಜಿ ಹಾಕಿರಲಿಲ್ಲ:** ಮಾಜಿ ಪ್ರಧಾನಿ ದೇವೇಗೌಡರಿಗೆ ಬಿಜೆಪಿಯು, ರಾಜ್ಯಸಭಾ ಟಿಕೆಟ್ ಕೊಡದಿರುವ ವಿಚಾರಕ್ಕೆ ಪ್ರತಿಕ್ರಿಯಿಸಿರುವ ಕೇಂದ್ರ ಸಚಿವ ಎಚ್. ಡಿ. ಕುಮಾರಸ್ವಾಮಿ, ಅಸಲಿಗೆ ದೇವೇಗೌಡ್ರು, ರಾಜ್ಯಸಭಾ ಸ್ಥಾನಕ್ಕೆ ಅರ್ಜಿಯನ್ನೇ ಹಾಕಿರಲಿಲ್ಲ ಎಂದು ಹೇಳಿದ್ದಾರೆ.



### ಮೈತ್ರಿಯಿಂದ ನಡುಕ..!

ಪಾಪ..ಕಾಂಗ್ರೆಸಿಗರಿಗೆ ಈಗ ದೇವೇಗೌಡರ ಮೇಲೆ ಪ್ರೀತಿ, ಅನುಕಂಪ ಉಕ್ಕಿ ಬರುತ್ತಿದೆ. ಎಪ್ಪತ್ತು ವರ್ಷದ ನಮ್ಮ ತಂದೆಯವರ ರಾಜಕೀಯ ಜೀವನದಲ್ಲಿ ಅವರನ್ನು ಹೇಗೇಗೆ ಕಾಂಗ್ರೆಸ್ ನಡೆಸಿಕೊಂಡು ಬಂದಿದೆ ಎನ್ನುವುದು ಗೊತ್ತಿರುವ ವಿಚಾರ. ಕಾಂಗ್ರೆಸ್ಸಿನವರಿಗೆ, ಅನುಕಂಪಕ್ಕಿಂತ ಜಾಸ್ತಿ, ಜೆಡಿಎಸ್–ಬಿಜೆಪಿ ಮೈತ್ರಿ ನಡುಕ ಹುಟ್ಟಿಸಿದೆ ಎಂದು ಕುಮಾರಸ್ವಾಮಿ ಕುಟುಕಿದ್ದಾರೆ.

### ವೈಫಲ್ಯ ಮರೆಮಾಚಲು..!

ಆಗುತ್ತಿರುವ ಬೆಳವಣಿಗೆ, ವೈಫಲ್ಯಗಳನ್ನು ಮುಚ್ಚಿಟ್ಟುಕೊಳ್ಳಲು ಕಾಂಗ್ರೆಸ್ ಪಕ್ಷವು ದೇವೇಗೌಡರನ್ನು ನೆಪ ಮಾಡಿಕೊಂಡು ರಾಜಕೀಯ ಮಾಡುತ್ತಿದೆ. ದೇವೇಗೌಡರದ್ದು ಹೋರಾಟದ ಬದುಕು. ಅಧಿಕಾರಕ್ಕಾಗಿ ಹಪಾಹಪಿಸಿದವರಲ್ಲ. ಸ್ವಾಭಿಮಾನಕ್ಕೆ ಧ–ಕ್ಕೆಯಾದಾಗ ಪ್ರಧಾನಿ ಸ್ಥಾನವನ್ನೇ ಬಿಟ್ಟು ಬಂದರು. ಅದೆಲ್ಲವೂ ಕಾಂಗ್ರೆಸ್ ಪಕ್ಷಕ್ಕೆ ಗೊತ್ತಿಲ್ಲವೇ ಎಂದು ಕುಮಾರಸ್ವಾಮಿ, ಕಾಂಗ್ರೆಸ್ ನಾಯಕರ ಬಗ್ಗೆ ವ್ಯಂಗ್ಯವಾಡಿದ್ದಾರೆ.

### 18ಶಾಸಕರನ್ನು ಇಟ್ಕೊಂಡು

ನಮ್ಮಲ್ಲಿರುವುದು 18 ಶಾಸಕರು, ಈ ನಂಬರ್ ಇಟ್ಟುಕೊಂಡು, ರಾಜ್ಯಸಭೆಯ ಟಿಕೆಟ್ ಕೇಳುವುದು ಸರಿಯಲ್ಲ. ದೇವೇಗೌಡರು, ರಾಜ್ಯಸಭೆಯ ಆಕಾಂಕ್ಷಿಯೂ ಅಲ್ಲ. ರಾಜ್ಯದಲ್ಲಿ ಒಕ್ಕಲಿಗ ಮುಖ್ಯಮಂತ್ರಿಯೇ ಇರಬೇಕಾದರೆ ರಾಜ್ಯಸಭೆ ತಗೊಂಡು ಏನ್ಮಾಡ್ತೀರಾ? ಎರಡು ತಿಂಗಳು ಕಾದು ನೋಡೋಣ ಎಂದು ಸಿಎಂ ಡಿಕೆ ಶಿವಕುಮಾರ್ ಬಗ್ಗೆ ಕುಮಾರಸ್ವಾಮಿ ಮಾರ್ಮಿಕವಾಗಿ ನುಡಿದಿದ್ದಾರೆ.

### ಕಪಟ ಮಾತು, ನೊ ಕಾಮೆಂಟ್ಸ್

ಮಾಜಿ ಪ್ರಧಾನಿ ದೇವೇಗೌಡರ ಬಗ್ಗೆ ಇದ್ದಕ್ಕಿದ್ದಂತೆ ಕಾಂಗ್ರೆಸ್ ನವರಿಗೆ ಪ್ರೀತಿ ಉಕ್ಕಿ ಬಂದಿದೆ. ಅವರು ಇತಿಹಾಸ ತಿರುವಿ ಹಾಕವುದು ಒಳಿತು. ಯಾ–ಕೆಂದರೆ ಇತಿಹಾಸದುದ್ದಕ್ಕೂ ಅವರು ಗೌಡರಿಗೆ ಏನೇನು ಮಾಡಿದ್ದಾರೆ ಎನ್ನುವುದು ಇತಿಹಾಸವೇ ಸಾರುತ್ತದೆ.

## ರಾಜಶೇಖರ ಪಾಟೀಲರ ಸೇವೆಯನ್ನು ಪರಿಗಣಿಸಿ ಅವರ ಕುಟುಂಬಕ್ಕೆ ಮಂತ್ರಿ ಸ್ಥಾನ ಕೊಡಿ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ರಾಜ್ಯ ರಾಜಕೀಯ ವಲಯದಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ ಅವರ ದೀರ್ಘಕಾಲದ ಸೇವೆ ಮತ್ತು ಜನಪರ ಕಾರ್ಯಗಳನ್ನು ಗಮನಿಸಿ, ಅವರ ಸಹೋದರರಿಗೆ ಗೌರವಪೂರ್ವಕವಾಗಿ ಸಚಿವ ಸ್ಥಾನ ನೀಡಬೇಕೆಂಬ ಒತ್ತಾಯಗಳು ಹೆಚ್ಚುತ್ತಿವೆ.

ರಾಜಕೀಯ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಹಲವು ವರ್ಷಗಳಿಂದ ಸಕ್ರಿಯರಾಗಿ ರಾಜಶೇಖರ ಪಾಟೀಲ ಅವರು ತಮ್ಮ ಅವಧಿಯಲ್ಲಿ ಜನಸೇವೆ,



ಅಭಿವೃದ್ಧಿ ಕಾರ್ಯಗಳು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣಕ್ಕಾಗಿ ನಿರಂತರವಾಗಿ ಶ್ರಮಿಸಿದ್ದಾರೆ. ಅವರ ನಾಯಕತ್ವದಲ್ಲಿ ಹಲವಾರು ಕ್ಷೇತ್ರಗಳಲ್ಲಿ ಅಭಿವೃದ್ಧಿ ಕಾರ್ಯಗಳು ನಡೆದಿರುವುದಾಗಿ ಸ್ಥಳೀಯರು ಸ್ಮರಿಸುತ್ತಿದ್ದಾರೆ.

ಸ್ಥಳೀಯ ಮುಖಂಡರು ಹಾಗೂ ಬೆಂಬಲಿಗರು, "ಅನುಭವ, ಸೇವೆ ಮತ್ತು ಜನಬೆಂಬಲ ಹೊಂದಿರುವ ರಾಜಶೇಖರ ಪಾಟೀಲ ಅವರ ಮನೆತನಕ್ಕೆ ಸಚಿವ ಸ್ಥಾನ ನೀಡಿದರೆ ರಾಜ್ಯದ ಆಡಳಿತಕ್ಕೆ ಇನ್ನಷ್ಟು ಬಲ ಸಿಗುತ್ತದೆ" ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಸಾಮಾಜಿಕ ನ್ಯಾಯ, ಗ್ರಾಮೀಣ ಅಭಿವೃದ್ಧಿ ಮತ್ತು ರೈತರ ಹಿತಾಸಕ್ತಿಗಳ ಪರವಾಗಿ ಸದಾ ಧ್ವನಿ ಎತ್ತಿರುವ ಅವರ ಸೇವೆಯನ್ನು ಪರಿಗಣಿಸಿ, ಸರ್ಕಾರ ಸೂಕ್ತ ತೀರ್ಮಾನ ಕೈಗೊಳ್ಳಬೇಕು ಎಂಬ ಒತ್ತಾಯವೂ ಕೇಳಿಬರುತ್ತಿದೆ.

ರಾಜಕೀಯ ವಲಯದಲ್ಲಿ ಈ ಬೇಡಿಕೆ ಇದೀಗ ಚರ್ಚೆಗೆ ಕಾರಣವಾಗಿದ್ದು, ಮುಂದಿನ ದಿನಗಳಲ್ಲಿ ಸರ್ಕಾರದ ನಿರ್ಧಾರ ಗಮನ ಸೆಳೆಯಲಿದೆ.

## ಕಪ್ಪುಹೊಗೆ, ಕಬ್ಬಿಣದ ಧೂಳು ಜನರ ಬದುಕು ಹಾಳು..!

• ಜಂಬುನಾಥ, ಬಳ್ಳಾರಿ

ಜಿಲ್ಲೆಯ ಹಲಕುಂದಿ ಗ್ರಾಮ ಪಂಚಾಯತಿಯಲಿ ಸ್ಪಂಜ್ ಐರನ್ ಫ್ಯಾಕ್ಟ–ರಿಯ ಕಪ್ಪು ಹೊಗೆ ಮತ್ತು ಕಬ್ಬಿಣದ ಧೂಳು ಸದ್ದು ಮಾಡತೊಡಗಿದೆ. ಇದರಿಂದ ಸಾರ್ವಜನಿಕರು ಸಾಕಷ್ಟು ಸಮಸ್ಯೆಗಳನ್ನು ಎದುರಿಸುವಂತಾಗಿದೆ.

**ರಾಸಾಯನಿಕ ಕಣ ಹಾವಳಿ:** ಜಿಲ್ಲೆಯು ಕೈಗಾರಿಕಾ ಅಭಿವೃದ್ಧಿಯಲ್ಲಿ ವೇಗವಾಗಿ ಮುನ್ನಡೆಯುತ್ತಿದ್ದರೂ, ಹಲಕುಂದಿ ಗ್ರಾ.ಪಂ. ವ್ಯಾಪ್ತಿಯ ಜನರು ಇಂದು ಮೂಲಭೂತ ಸೌಕರ್ಯಗಳ ಕೊರತೆ ಮತ್ತು ಕೈಗಾರಿಕಾ ಮಾಲಿನ್ಯದ ಮಧ್ಯೆ ಬದುಕು ಸಾಗಿಸುವ ಪರಿಸ್ಥಿತಿ ಎದುರಿಸುತ್ತಿದ್ದಾರೆ. ವಿಶೇಷವಾಗಿ ಈ ಭಾಗದಲ್ಲಿರುವ ಸ್ಪಂಜ್ ಐರನ್ ಫ್ಯಾಕ್ಟರಿಗಳಿಂದ ಹೊರಬರುವ ಹೊಗೆ, ಧೂಳು ಹಾಗೂ ರಾಸಾಯನಿಕ ಕಣಗಳಿಂದ ಸಾರ್ವಜನಿಕರ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ ಎಂದು ಗ್ರಾಮಸ್ಥರು ಆರೋಪಿಸುತ್ತಿದ್ದಾರೆ.

**ಬೆಳೆ ಉತ್ಪಾದನೆ ಕುಸಿತ:** ರಾತ್ರಿ ವೇಳೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಹೊಗೆ ಹೊರಬಿಡಲಾಗುತ್ತಿದೆ. ಬೆಳಿಗ್ಗೆ ಮನೆಗಳ ಮೇಲ್ಚಾವಣಿ, ನೀರಿನ ಟ್ಯಾಂಕ್ಗಳು ಮತ್ತು ಮರಗಳ ಎಲೆಗಳ ಮೇಲೆ ಕಪ್ಪು ಧೂಳು ಕಾಣಿಸಿಕೊಳ್ಳುತ್ತದೆ. ರೈತರು ಕೂಡ ಫ್ಯಾಕ್ಟರಿಗಳ ಧೂಳಿನಿಂದ ಬೆಳೆಗಳ ಉತ್ಪಾದನೆ ಕುಸಿಯುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.ಹಲವೆಡೆ ಸರಿಯಾದ ರಸ್ತೆ ವ್ಯವಸ್ಥೆ ಇಲ್ಲದೆ ಜನರು ತೊಂದರೆ, ಮಳೆಯ ಸಮಯದಲ್ಲಿ ರಸ್ತೆಗಳು ಕೆಸರುಗದ್ದೆಯಾಗುತ್ತವೆ. ಒಳಚರಂಡಿ ವ್ಯವಸ್ಥೆ ಸಮರ್ಪಕವಾಗಿಲ್ಲದ ಕಾರಣ ದುರ್ವಾಸನೆ ಹಾಗೂ ಸೊಳ್ಳೆಗಳ ಸಮಸ್ಯೆ ಹೆಚ್ಚಾಗಿದೆ. ಅತ್ಯಂತ ಗಂಭೀರ ಸಮಸ್ಯೆಯೆಂದರೆ ಶುದ್ಧ ಕುಡಿಯುವ ನೀರಿನ ಕೊರತೆ.



### ಜನರು ಕೇಳುತ್ತಿರುವ ಪ್ರಮುಖ ಬೇಡಿಕೆಗಳೇನು?

- ಶುದ್ಧ ಕುಡಿಯುವ ನೀರಿನ ಸಮರ್ಪಕ ವ್ಯವಸ್ಥೆ
- ಗ್ರಾಮದಲ್ಲಿ ಉತ್ತಮ ರಸ್ತೆ, ಡ್ರೈನೇಜ್ ನಿರ್ಮಾಣ
- ಸ್ಪಂಜ್ ಐರನ್ ಫ್ಯಾಕ್ಟರಿಗಳ ಮಾಲಿನ್ಯ ನಿಯಂತ್ರಣ
- ಆರೋಗ್ಯ ತಪಾಸಣೆ ಶಿಬಿರಗಳ ಆಯೋಜನೆ
- ಧೂಳು ತಡೆಗೆ ನೀರು ಸಿಂಪಡಣೆ, ಗ್ರೀನ್ ಬೆಲ್ಟ್ ಅಭಿವೃದ್ಧಿ
- ಪರಿಸರ ನಿಯಮ ಉಲ್ಲಂಘಿಸುವ ಕೈಗಾರಿಕೆಗಳ ವಿರುದ್ಧ ಕ್ರಮ

### ಬೋರ್ವೆಲ್ ನೀರೆ ಗತಿ

ಗ್ರಾಮದಲ್ಲಿನ ಅನೇಕ ಕುಟುಂಬಗಳಿಗೆ ಸುರಕ್ಷಿತ ಕುಡಿಯುವ ನೀರು ಲಭ್ಯವಿಲ್ಲ. ಸಾರ್ವಜನಿಕರು ಟ್ಯಾಂಕರ್ ನೀರು ಅಥವಾ ಬೋರ್ವೆಲ್ ನೇರೇ ಗತಿ. ಗ್ರಾಮಸ್ಥರು ಜಿಲ್ಲಾಡಳಿತ, ಗ್ರಾ.ಪಂ. ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ, ಸಮಸ್ಯೆಗೆ ಶಾಶ್ವತ ಪರಿಹಾರ ಸಿಗಲಿಲ್ಲ ಎಂದು ಆರೋಪಿಸಿದ್ದಾರೆ.



### ಮನೆ, ಕೃಷಿ ಭೂಮಿಯ ಮೇಲೆ ಮಾಲಿನ್ಯ

ಫ್ಯಾಕ್ಟರಿಗಳಿಂದ ದಿನಪೂರ್ತಿ ಹೊರಬರುವ ಕಪ್ಪು ಹೊಗೆ ಮತ್ತು ಕಬ್ಬಿಣದ ಧೂಳು ಮನೆಗಳ ಮೇಲೆ, ರಸ್ತೆಗಳಲ್ಲಿ ಹಾಗೂ ಕೃಷಿ ಭೂಮಿಗಳ ಮೇಲೆ ಬೀಳುತ್ತಿದೆ. ಇದ–ರಿಂದ ವಾತಾವರಣ ಸಂಪೂರ್ಣವಾಗಿ ಮಾಲಿನ್ಯಗೊಂಡಿದ್ದು, ಉಸಿರಾಟದ ಸಮಸ್ಯೆಗಳು ಹೆಚ್ಚಾಗಿವೆ. ಮಕ್ಕಳು, ಹಿರಿಯರು ಮತ್ತು ಮಹಿಳೆಯರಲ್ಲಿ ದಮ್ಮು, ಅಲರ್ಜಿ, ಕೆಮ್ಮು, ಕಣ್ಣಿನ ಉರಿ ಸಮಸ್ಯೆಗಳು ಸಾಮಾನ್ಯವಾಗಿವೆ ಎಂದು ಸಾರ್ವಜನಿಕರು ದೂರಿದ್ದಾರೆ.



ಕಾರ್ಖಾನೆಗಳ ಮಾಲಿನ್ಯದಿಂದ ನಮ್ಮ ಭೂಮಿಯಲ್ಲಿ ಯಾವುದೇ ಬೆಳೆ ಬೆಳೆಸಿದರು ಇಳುವರಿ ಕಡಿಮೆ ಬರುತ್ತದೆ. ಬೆಳಗ್ಗೆ ಎದ್ದು ತಕ್ಷಣ ನಮ್ಮ ಭೂಮಿಯಲ್ಲಿ ಹೋದರೆ ಬೆಳೆಸಿದ ಬೆಳೆಯ ಮೇಲೆ ಕಾರ್ಖಾನೆಗಳ ಮಾಲಿನ್ಯದಿಂದ ಕೂಡಿದ ಕಪ್ಪು ಬಣ್ಣ ನೋಡಬೇಕಾಗುತ್ತದೆ. ಈ ಕಾರ್ಖಾನೆಗಳ ಮಾಲಿನ್ಯ ಸಮಸ್ಯೆ ಬಗ್ಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಮನವಿ ಕೊಟ್ಟರೂ ಪ್ರಯೋಜನ ಇಲ್ಲ.

–ಶಿವರಾಮ್, ಮಾಜಿ ಗ್ರಾಮ ಪಂಚಾಯತಿ ಸದಸ್ಯ

## ಮೋದಿ ಸರ್ಕಾರಕ್ಕೆ 12 ವರ್ಷ: ಬಡವರ ಕಲ್ಯಾಣವೇ ನಮ್ಮ ಆಡಳಿತದ ಮೂಲಮಂತ್ರ: ನರೇಂದ್ರ ಮೋದಿ, ಪ್ರಧಾನಿ

# ಆಡಳಿತ ಯಂತ್ರ ಸುಧಾರಣೆಯಾಗಲಿ

ರಾಜ್ಯದ ವಿವಿಧ ತಾಲೂಕು ಹಾಗೂ ಜಿಲ್ಲಾಡಳಿತ ಕಚೇರಿಗಳಲ್ಲಿ ಆಡಳಿತ ಯಂತ್ರದ ಕಾರ್ಯಕ್ಷಮತೆ ಕುರಿತು ಸಾರ್ವಜನಿಕರಲ್ಲಿ ದಿನೇದಿನೇ ಅಸಮಾಧಾನ ಹೆಚ್ಚುತ್ತಿದೆ. ಜನಸೇವೆಗೆ ಮೀಸಲಾದ ಕಚೇರಿಗಳೇ ವಿಳಂಬ, ಅಲಕ್ಷ್ಯ ಮತ್ತು ಅನಗತ್ಯ ಅಡಚಣೆಗಳ ಕೇಂದ್ರಗಳಾಗಿ ಮಾರ್ಪಟ್ಟಿರುವುದು ದುರದೃಷ್ಟಕರವಾಗಿದೆ.

ಜನರ ಸಾಮಾನ್ಯ ಕೆಲಸಗಳು: ಭೂ ದಾಖಲೆ ತಿದ್ದುಪಡಿ, ಪ್ರಮಾಣಪತ್ರ ವಿತರಣೆ, ಪಿಂಚಣಿ, ಸಬ್ಸಿಡಿ ಮತ್ತು ಇತರ ಸರ್ಕಾರಿ ಸೇವೆಗಳು: ಸಮಯಕ್ಕೆ ಸರಿಯಾಗಿ ಲಭ್ಯವಾಗದ ಕಾರಣ, ಸಾಮಾನ್ಯ ನಾಗರಿಕರು ಕಚೇರಿಗಳ ಸುತ್ತ ಮುತ್ತ ದಿನಗಳಲ್ಲ, ತಿಂಗಳುಗಳ ಕಾಲ ಅಲೆದಾಡುವ ಸ್ಥಿತಿ ಉಂಟಾಗಿದೆ.

## ಸಂಪಾದಕೀಯ



**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**

ಡಿಜಿಟಲ್ ವ್ಯವಸ್ಥೆ ಮತ್ತು ಇ-ಆಫೀಸ್ ತಂತ್ರಜ್ಞಾನಗಳನ್ನು ಪರಿಚಯಿಸಿದರೂ, ಅವುಗಳ ಪರಿಣಾಮಕಾರಿ ಅನುಷ್ಠಾನ ಇಲ್ಲದಿರುವುದು ದೊಡ್ಡ ಸಮಸ್ಯೆಯಾಗಿದೆ. ಕೆಲವೆಡೆ ಅಧಿಕಾರಿಗಳ ಕೊರತೆ, ಕೆಲವೆಡೆ ಮೇಲ್ವಿಚಾರಣೆಯ ಕೊರತೆ ಹಾಗೂ ಕೆಲವೆಡೆ ಜವಾಬ್ದಾರಿಯ ಅಲಕ್ಷ್ಯದಿಂದ ಆಡಳಿತ ಯಂತ್ರ ನಿಧಾನಗತಿಯಲ್ಲಿ ಸಾಗುತ್ತಿದೆ.

ಜನರ ಪ್ರಮುಖ ಆಗ್ರಹವೆಂದರೆ–ಕಡತ ವಿಲೇವಾರಿಯಲ್ಲಿ ಕಾಲಮಿತಿ ಕಡ್ಡಾಯಗೊಳಿಸಬೇಕು, ಪ್ರತಿ ಕಚೇರಿಯಲ್ಲಿ ಜವಾಬ್ದಾರಿ ನಿಗದಿ ಮಾಡಬೇಕು ಮತ್ತು ವಿಳಂಬಕ್ಕೆ ಕಾರಣರಾದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಬೇಕು.

ಆಡಳಿತ ಯಂತ್ರವು ಜನಸೇವೆಗಾಗಿ ಇರುವ ಸಾಧನವಾಗಿದ್ದು, ಅದು ಜನರಿಗೆ ತೊಂದರೆ ನೀಡುವ ವ್ಯವಸ್ಥೆಯಾಗಿ ಮಾರ್ಪಡುವುದು ಸರಿಯಲ್ಲ. ಆದ್ದರಿಂದ ಸರ್ಕಾರ ಮತ್ತು ಜಿಲ್ಲಾಡಳಿತಗಳು ತಕ್ಷಣವೇ ಆಡಳಿತ ಸುಧಾರಣೆಗೆ ಗಂಭೀರ ಕ್ರಮ ಕೈಗೊಳ್ಳಬೇಕಾಗಿದೆ ಎಂಬುದು ಸಾರ್ವಜನಿಕರ ಒತ್ತಾಯವಾಗಿದೆ.

# ನಿರಂತರ ಪರಿಶ್ರಮದಿಂದ ಯಶಸ್ಸು ಸಾಧ್ಯ



**ಬೀದರ್:** ಆರಂಭದಲ್ಲಿ ಒಂದೆರಡು ಹಸುಗಳಿಂದ ಹೈನುಗಾರಿಕೆಯನ್ನು ಆರಂಭಿಸಿದ ಈ ಕುಟುಂಬವು ನಿರಂತರ ಪರಿಶ್ರಮ, ಶ್ರಮಶೀಲತೆ ಮತ್ತು ಛಲದ ಮೂಲಕ ಇಂದು ದೊಡ್ಡ ಮಟ್ಟದ ಹೈನುಗಾರಿಕೆ ಘಟಕವನ್ನು ಸ್ಥಾಪಿಸಿರುವುದು ಎಲ್ಲರಿಗೂ ಮಾದರಿಯಾಗಿದೆ ಎಂದು ಬೀದರ್ ಜಿಲ್ಲಾ ಡಿಸಿಸಿ ಬ್ಯಾಂಕಿನ ಮಾಜಿ ಅಧ್ಯಕ್ಷರಾದ ಉಮಾಕಾಂತ ನಾಗಮಾರಪಳ್ಳಿ ಅವರು ಹೇಳಿದರು.

ಬೀದರ್ ತಾಲೂಕಿನ ಅಲಿಯಂಬರ್ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಕೇತಕಿ ಸಂಗಮೇಶ್ವರ ಹೈನುಗಾರಿಕೆ ಘಟಕವನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ಮನುಷ್ಯನಲ್ಲಿ ಛಲ, ಆತ್ಮವಿಶ್ವಾಸ ಹಾಗೂ ನಿರಂತರ ಪ್ರಯತ್ನ ಇದ್ದರೆ ಯಾವ ರೀತಿಯ ಕಷ್ಟಗಳನ್ನೂ ಮೆಟ್ಟಿ ನಿಂತು ಯಶಸ್ಸು ಸಾಧಿಸಬಹುದು ಎಂಬುದಕ್ಕೆ ಈ ಕುಟುಂಬವೇ ಜೀವಂತ ಉದಾಹರಣೆಯಾಗಿದೆ ಎಂದು ಅವರು ಅಭಿಪ್ರಾಯಪಟ್ಟರು. ಗ್ರಾಮೀಣ ಭಾಗದಲ್ಲಿ ಇಂತಹ ಸಾಧನೆಗಳು ಇತರ ರೈತರು ಹಾಗೂ ಯುವಕರಿಗೆ ಪ್ರೇರಣೆಯಾಗುತ್ತವೆ ಎಂದು ಅವರು ಹೇಳಿದರು.

ಹಲಬರ್ಗಾ ಶಿವಣಿ, ಹೈದ್ರಾಬಾದ್ ಹಾಗೂ ಹಳೆಂಬರ್ ಗಂಗಾಧರ ಮಠ ಸಂಸ್ಥಾನದ ಪರಮ ಪೂಜ್ಯ ಶ್ರೀ ಹಾವಗಿ ಲಿಂಗೇಶ್ವರ ಶಿವಾಚಾರ್ಯರು ಸಾನಿಧ್ಯ ವಹಿಸಿ ಮಾತನಾಡಿ, ಇಷ್ಟೊಂದು ದೊಡ್ಡ ಪ್ರಮಾಣದಲ್ಲಿ ಹೈನುಗಾರಿಕೆ ಘಟಕವನ್ನು ಆರಂಭಿಸಿರುವುದು ಶ್ಲಾಘನೀಯವಾಗಿದ್ದು, ಇದು ಜಿಲ್ಲೆ ಹಾಗೂ ರಾಜ್ಯಕ್ಕೆ ಮಾದರಿಯಾಗಲಿದೆ, ನನ್ನ ಪ್ರಕಾರ ಇದೊಂದು ಸುಂದರ ಗೋಶಾಲೆಯಾಗಿದೆ ಎಂದು ಬಣ್ಣಿಸಿದರು.

ಮುಂದಿನ ದಿನಗಳಲ್ಲಿ ಈ ಘಟಕದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಹಾಲು ಉತ್ಪಾದನೆ ಆಗಲಿ ಹಾಗೂ ಗುಣಮಟ್ಟದ ಹಾಲು ಜನರಿಗೆ ಸುಲಭವಾಗಿ ದೊರೆಯುವಂತಾಗಲಿ ಎಂದು ಅವರು ಆಶಿಸಿದರು.

ಮಹಾದೇವ ಬಿರಾದಾರ ಅವರ ಈ ಪ್ರಯತ್ನವು ಗ್ರಾಮೀಣ ಹೈನುಗಾರಿಕೆ ಕ್ಷೇತ್ರಕ್ಕೆ ಹೊಸ ದಿಕ್ಕು ತೋರಿಸಿರುವುದಾಗಿ ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಜೈ ಭಾರತ ಸೇವಾ ಸಮಿತಿ ಸಂಸ್ಥಾಪಕರಾದ ನಿರುಗುಡಿ ಪರಮ ಪೂಜ್ಯ ಶ್ರೀ ಹವಾ ಮಲ್ಲಿನಾಥ್ ಮಹಾರಾಜ, ಲಾಡಗೇರಿ ಹಿರೇಮಠ ಸಂಸ್ಥಾನದ ಪರಮ ಪೂಜ್ಯ ಶ್ರೀ ಗಂಗಾಧರ ಶಿವಾಚಾರ್ಯರು, ಚಾಂಬೋಳದ ಪರಮ ಪೂಜ್ಯ ಶ್ರೀ ಅಭಿನವ ರುದ್ರಮುನಿ ಶಿವಾಚಾರ್ಯರು, ಮಳಚಾಪುರ ಸಿದ್ಧಾರೂಢ ಮಠದ ಸದ್ರುಪಾನಂದ ಭಾರತಿ ಮಹಾಸ್ವಾಮಿಗಳು, ಕಪಲಾಪುರ ಸಿದ್ಧಾರೂಢ ಮಠದ ಪರಮ ಪೂಜ್ಯ ಶ್ರೀ ಪೂರ್ಣನಂದ ಮಹಾಸ್ವಾಮಿಗಳು, ಹಳೆಂಬರ್ ವೀರಭದ್ರಪ್ಪ ಅಪ್ಪನವರ ಸಂಸ್ಥಾನದ ಪರಮ ಪೂಜ್ಯ ಬಾಬುರಾವ ಗುರೂಜಿ ಆಶೀರ್ವಚನ ನೀಡಿದರು.

ಮಹಾದೇವ ಬಿರಾದಾರ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಬೀದರ್ ಮಹಾನಗರ ಪಾಲಿಕೆ ಸದಸ್ಯ ವೀರಶೆಟ್ಟಿ ಪಾಟೀಲ್, ಯುವ ಮುಖಂಡರಾದ ಪ್ರಸನ್ನ ಖಂಡ್ರೆ, ತರುಣ ನಾಗಮಾರಪಳ್ಳಿ, ಮಹೇಶ ಮೈಲಾರಿ, ಎನ್.ಎಸ್.ಎಸ್.ಕೆ ನಿರ್ದೇಶಕ ಸಂಗಮೇಶ ಪಾಟೀಲ್, ದೀಪಕ ಗಾದಗೆ, ಕಾಮಶೆಟ್ಟಿ ಘೋಡಂಪಳ್ಳಿ, ಬಸವರಾಜ ಬಿರಾದಾರ, ಬಸವರಾಜ ಲಸ್ಕರಿ, ಬಸವರಾಜ ಮಾಲಿ ಪಾಟೀಲ್, ಚಂದ್ರಶೇಖರ ಗಾದಗೆ, ಸುನೀಲಕುಮಾರ ಶೆಟ್ಟಗೊಂಡೆ, ಸುನೀಲಕುಮಾರ ಶಿವಶೆಟ್ಟಿ, ಪುಂಡಲೀಕಪ್ಪಾ ರಾಯಗೊಂಡೆ, ದಶಪ್ಪಾ ಬೂರಗೊಂಡೆ, ಶಿವರಾಜ ಶಿವಶೆಟ್ಟಿ, ಭೀಮರಾವ ಪಾಟೀಲ್ ಡಿಗ್ಗಿ, ಶಾಂತಕುಮಾರ ಪನಸಾಲೆ, ಸಿದ್ದೋಬಾ ಲವಟೆ ಸೇರಿದಂತೆ ಹಲವಾರು ಗಣ್ಯರು ವೇದಿಕೆಮೇಲಿದ್ದರು.

ಹೈನುಗಾರಿಕೆ ಆದರ್ಶ ದಂಪತಿಗಳಾದ ಶ್ರೀಮತಿ ಪ್ರಭಾವತಿ ಚಂದ್ರಕಾಂತ ಬಿರಾದಾರ, ಹಾಗೂ ಶ್ರೀಮತಿ ಶಿವಮಂಗಲಾ ಮಹಾದೇವ ಬಿರಾದಾರ ದಂಪತಿಗಳಿಗೆ ಪೂಜ್ಯರು, ಗಣ್ಯರು, ಗ್ರಾಮಸ್ಥರು ಸೇರಿ ಸನ್ಮಾನಿಸಿ, ಜನ್ಮದಿನದ ಶುಭ ಕೋರಿ ಗೌರವಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ಮಹೇಶ ಮೈಲಾರಿ ಪ್ರಸ್ತಾವಿಕ ಮಾತನಾಡಿದರು. ಸಂಗಮೇಶ ಪಾಟೀಲ್ ಸ್ವಾಗತಿಸಿದರು. ಚಂದ್ರಕಾಂತ ಹಳ್ಳಿಖೇಡಕರ್ ನಿರೂಪಿಸಿದರು. ಸಿದ್ದೋಬಾ ಲವಟೆ ವಂದಿಸಿದರು.

# ರಾಜ್ಯ ಮಟ್ಟದ ಸಾಹಿತ್ಯಗೋಷ್ಠಿ ಸಾಂಸ್ಕೃತಿಕ ಕಲಾಸಿರಿ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಬೀದರ

ನಗರದ ಪೂಜ್ಯ ಡಾ. ಚನ್ನಬಸವ ಪಟ್ಟದೇವರು ಜಿಲ್ಲಾ ರಂಗಮಂದಿರದಲ್ಲಿ ವಿಶ್ವ ಕನ್ನಡಿಗರ ಸಂಸ್ಥೆ ಬೀದರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರ ಸಂಯುಕ್ತಾಶ್ರದಲ್ಲಿ 2025–26 ನೇ ಸಾಲಿನ ಸಂಘ ಸಂಸ್ಥೆಗಳ ಧನಸಹಾಯ ಯೋಜನೆ ಅಡಿಯಲ್ಲಿ ಶುಕ್ರವಾರ ವಿಶ್ವ ಪರಿಸರ ದಿನಾಚರಣೆ ದಿನದಂದು ಹಮ್ಮಿಕೊಂಡಿರುವ ರಾಜ್ಯ ಮಟ್ಟದ ಸಾಹಿತ್ಯಗೋಷ್ಠಿ ಸಾಂಸ್ಕೃತಿಕ ಕಲಾಸಿರಿ, ಸಂಗೀತ ಕನ್ನಡ ಹಾಡುಗಳ ಗಾಯನ ಜಾನಪದ ಜಾದು ಕವಿಗೋಷ್ಠಿ ಕಾರ್ಯಕ್ರಮವನ್ನು ಉದ್ಘಾಟಿಸಿ, ವಿದ್ಯಾರ್ಥಿ ಜೀವನ ವ್ಯರ್ಥ ಮಾಡಿಕೊಳ್ಳದೆ ಸತತ ಅಧ್ಯಯನ ಶಿಕ್ಷಕರು ಹೇಳಿಕೊಟ್ಟ ಪಾಠಗಳು ಪ್ರತಿದಿನ ಚಾಚುತಪ್ಪದೆ ಓದಿಕೊಂಡು ಪ್ರಶ್ನೆಗಳಿಗೆ ಉತ್ತರ ಬೆದುಕೊಂಡು ವಿಷಯವಾರು ಶಿಕ್ಷಕರ ಮುಂದೆ ಇಟ್ಟಾಗ ಶಿಕ್ಷಕರು ಕೊಟ್ಟಿರುವ ಸಲಹೆಗಳನ್ನು ಪಾಲಿಸಿದಾಗ, ಶಿಕ್ಷಣ ಕ್ಷೇತ್ರದಲ್ಲಿ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಸಂಸ್ಥೆವತಿಯಿಂದ ನನ್ನನ್ನೂ ಒಳಗೊಂಡಂತೆ 150 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಕ್ಕಾಗಿ ಗುರುತಿಸಿ ಗೌರವಿಸಿದು ವಿದ್ಯಾರ್ಥಿ ಜೀವನ ಸಾಧನೆಗೆ ತಂದುಕೊಟ್ಟ ಪುರಸ್ಕಾರವಾಗಿದೆಯೆಂದು ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ 624 ಅಂಕಪಡೆದು ರಾಜ್ಯಕ್ಕೆ 2 ರ್‍ಯಾಂಕ ಪಡೆದ ವಿದ್ಯಾರ್ಥಿ ಆನಂದ ತನ್ನ ಅಬಿಪ್ರಾಯವನ್ನುವ್ಯಕ್ತಪಡಿಸಿದರು.



ಸ್ವಾಗತ ಪ್ರಾಸ್ತಾವಿಕ ನುಡಿ ಸಂಸ್ಥೆ ಅಧ್ಯಕ್ಷ ಸುಬ್ಬಣ್ಣ ಕರಕನಳ್ಳಿ ಮಾತನಾಡಿ ಈ ವರ್ಷ ಸರ್ಕಾರ ನಮ್ಮ ಸಂಸ್ಥೆಗೆ ಅಲ್ಪ ಹಣವನ್ನು ಮಂಜೂರು ಮಾಡಿದೆ, ಆದರೂ ರಾಜ್ಯ ಮಟ್ಟದ ಕಾರ್ಯಕ್ರಮ ಮಾಡಿದ್ದೇನೆ. ನಮ್ಮ ಸಾಹಿತ್ಯ ಸಂಸ್ಕೃತಿ ಭಾಷೆ ಉಳಿಸುವ ಜನರಲ್ಲಿ ತಲುಪಿಸುವ ಕೆಲಸ ಕಳೆದ 8 ವರ್ಷಗಳಿಂದ ಮಾಡಿಕೊಂಡು ಬರುತ್ತಿದ್ದೇನೆ. ರಾಷ್ಟ್ರೀಯ ಶಿಕ್ಷಣ ನೀತಿ ಪರಿಷ್ಕೃತ ಸರೋಜನಿ ಮಹಿಸಿ ವರದಿ ಕುರಿತು ಪ್ರೊ. ಶಿವಶರಣಪ್ಪ ಹುಗ್ಗೆ ಪಾಟೀಲ್ ಉಪನ್ಯಾಸ ಮಂಡಿಸಿ ಕಲಿಕೆಗೆ ವಿದ್ಯಾರ್ಥಿಗಳ ವಿಷಯ ಆಯ್ಕೆ ಹಕ್ಕು ತಂದುಕೊಟ್ಟವರು ಬಾಬಾಸಾಹೇಬ್ ಅಂಬೇಡ್ಕರ ಕೇಂದ್ರ ಸರ್ಕಾರದ ಆಧಿನದಲ್ಲಿರುವ, ರೈಲ್ವೆ ಅಂಚೆ ಜೀವವಿಮ, ಕಂಪನಿಗಳಲ್ಲಿ ಸ್ಥಳಯರಿಗೆ ಉದ್ಯೋಗ ನೀಡಬೇಕು ಇದು ಕ್ರಮಬದ್ಧವಾಗಿ ಸರ್ಕಾರ ಜಾರಿಗೋಳಿಸಬೇಕು ಅದು ಇಚ್ಚೇಶಕ್ತಿಯಿಂದ ಮಾತ್ರ ಸಾದ್ಯ. ಕನ್ನಡ ಭಾಷೆ ನಿನ್ನೆ ಇಂದು ನಾಳೆ ಡಿಜಿಟಲಕರಣದಲ್ಲಿ ಕನ್ನಡ ಭಾಷೆ ಬೆಳವಣಿಗೆ ಕುರಿತು ಡಾ. ರಾಮಚಂದ್ರ ಗಣಾಪೂರು ಉಪನ್ಯಾಸ ಮಂಡಿಸಿ ತಾಯಿಭಾಷೆ ಯಾವುದೇ ಕಾರಣಕ್ಕೂ ಮರೆಯಭಾರದು ಯೋಗ ಶಿಕ್ಷಣದ ಬಗ್ಗೆ ಸಂದೀಪ ಸಾಧುರೆ, ಉಪನ್ಯಾಸ ನೀಡಿ ಆರೋಗ್ಯವಂತ ಜೀವನ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಯೋಗಶಿಕ್ಷಣ ಅವಶ್ಯಕವಾಗಿದೆ. ಜಾನಪದ ಜಾದು ತುಕರಾಮ ಭೋಲಾ ಪ್ರಕಾಶ ಕುಲಕರ್ಣಿ ನಡೆಸಿಕೊಟ್ಟರು, ನಾಲ್ಕನೆ ತರಗತಿ ವಿದ್ಯಾರ್ಥಿ ಅಂಬಾದಾಸ ಸಂವಿಧಾನ ಪೀಠಿಕೆ ವಾಚನೆ ಮಾಡಿದರು. ಕು. ನೇತ್ರ, ವಿಶಾಲ ಡಾನ್ಸ ಆಕಾಡೆಮಿ ಮಕ್ಕಳು ಸಾಂಸ್ಕೃತಿಕ ಕಲಾಸಿರಿ ಪ್ರದರ್ಶನ ಮಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕರಾದ ಶ್ರೀ ಬಳವಂತರಾವ ಪಾಟೀಲ್ ಬಸವಣ್ಣ ಕರ್ಮಭೂಮಿ ಕನ್ನಡ ಸಾಹಿತ್ಯ ಸಂಸ್ಕೃತಿ ಶ್ರೀಮಂತಿಕೆ ಸ್ಥಾನದಲ್ಲಿಟ್ಟಿದೆ. ವೇದಿಕೆ ಮೇಲೆ ನಿವೃತ್ತವಾರ್ತ ಅಧಿಕಾರಿ ಜಿ ಚಂದ್ರಕಾಂತ ಅಂತರಾಷ್ಟ್ರೀಯ ಕನ್ನಡ ಪ್ರಚಾರಕ್ಕೆ ಡಾ. ದೊಡ್ಡಪ್ಪಾ ಪೂಜಾರಿ ಅಧ್ಯಕ್ಷತೆ ವಹಿಸಿದರು. ಪ್ರಭು ಕಾಂಬಳೆ ರಾಜಕುಮಾರ ಹಿರೇಮಠ, ಆಕಾಶ ಜ್ಯೋತಿ, ರಮೇಶ ಬಾಬು ಜೈಧ್ವನಿ ಡಾ. ಅಜ್ಯಯ್ಯ ವಿಜಯನಗರ ಕನ್ನಡ ಹಾಡುಗಳು ಹಾಡಿದರು, ಶಿವರಾಜ ಮಿತ್ರ ಭರತ ಮೇತ್ರೆ ಪ್ರಿಯಾಂಕ ಅಶ್ವಜೀತ ದಂಡಿನ, ಅವಿನಾಶ ಸೋನಿ ರಾಜು ಪವಾರ, ಕವಿತೆಗಳು ವಾಚನ ಮಾಡಿದರು, ರಕ್ಷಾಳ ಭಜನೆ ತಂಡ, ರಮಾಬಾಯಿ ಸಾಂಸ್ಕೃತಿಕ ಮಹಿಳಾ ಸಂಘ ಜೈಭೀಮ ನಗರ ಭಜನೆ ತಂಡ ಕುಂಬರವಾಡ ಮಹಿಳಾ ಭಜನೆ ತಂಡ ಭಜನೆಪದಗಳು ಹಾಡಿದರು. ಕಾರ್ಯಕ್ರದ ನಿರೂಪಣೆ ದಿಲೀಪಕುಮಾರ ಮೋಘಾ, ನಡೆಸಿಕೊಟ್ಟರು. ವೇದಿಕೆ ಮೇಲೆ ಪರಿಸರವಾದಿ ಡಾ. ಕಾಶಿನಾಥ ಪಾಟೀಲ್, ಜಾನಪದ ಆಕಾಡಮಿ ಸದಸ್ಯ ವಿಜಯಕುಮಾರ ಸೋನಾರೆ, ಜಾನಪದ ಗಾಯಕ ಶಂಭುಲಿಂಗ ವಾಲದೊಡ್ಡಿ, ಶ್ರೀಕಾಂತ ಭವಾನಿ, ಅವಿನಾಶ ಬುದೇರಾಕರ್ ಅಂಬಾದಸ ಸೈನೆ, ಬಾಬುರಾವ ಕೆ ಬಿಟ್ಟಿ, ಗೌಸುದ್ದೀನ ಚಂದ್ರಕಾಂತ ದೇವಕೆ ರಾಕೇಶ ಬಂಗ್ಲೆ ಸಂಸ್ಥೆ ಉಪಾಧ್ಯಕ್ಷ ಪ್ರಕಾಶ, ಕಾರ್ಯದರ್ಶಿ ಪ್ರಿಯಾಂಕ, ತೇಜಮ್ಮಾ ಶಾರದಾ, ರವಿಕುಮಾರ ಸಂಗೀತಾ, ಕಸ್ತೂರಾಬಾಯಿ ಉಜ್ವಲಾ. ಉಪಸ್ಥಿತರಿದ್ದರು.

# ಸಾಧಕರೊಂದಿಗೆ ಸಂವಾದ: ಡಾ. ಗುರಮ್ಮ ಸಿದ್ದಾರೆಡ್ಡಿ ಅವರ ಜೀವನ ಸಾಧನೆ ಪರಿಚಯ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕಲಬುರಗಿ ವಿಭಾಗ, ಕಲಬುರಗಿ ಇವರ ವತಿಯಿಂದ ಆಯೋಜಿಸಿರುವ ಸಾಧಕರೊಂದಿಗೆ ಸಂವಾದ ಕಾರ್ಯಕ್ರಮವು ಇದೇ ಜೂನ್ 10, 2026 (ಬುಧವಾರ) ಸಂಜೆ 4 ಗಂಟೆಗೆ ಬೀದರ್‌ನ ಪೂಜ್ಯ ಚನ್ನಬಸವ ಪಟ್ಟದ್ದೇವರು ಜಿಲ್ಲಾ ರಂಗಮಂದಿರದಲ್ಲಿ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಲಬುರಗಿ ವಿಭಾಗದ ಜಂಟಿ ನಿರ್ದೇಶಕರಾದ ಬಸವರಾಜ ಹೂಗಾರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ್‌ನ ಸಹಾಯಕ ನಿರ್ದೇಶಕರಾದ ಸಿದ್ರಾಮ ಸಿಂಧೆ ಅವರು ತಿಳಿಸಿದ್ದಾರೆ.

ಈ ವಿಶೇಷ ಕಾರ್ಯಕ್ರಮದಲ್ಲಿ ಗಡಿ ಜಿಲ್ಲೆಯ ಹೆಮ್ಮೆಯ ಸಮಾಜ ಸೇವಕಿ ಡಾ. ಗುರಮ್ಮ ಸಿದ್ದಾರೆಡ್ಡಿ ಅವರು ಭಾಗವಹಿಸಲಿದ್ದು, ಅವರ ಜೀವನ ಪಯಣ, ಸಮಾಜ ಸೇವಾ ಕಾರ್ಯಗಳು ಹಾಗೂ ಮಹಿಳಾ ಸಬಲೀಕರಣ ಕ್ಷೇತ್ರದಲ್ಲಿ ಅವರು ನೀಡಿದ ಅಪಾರ ಕೊಡುಗೆಗಳ ಕುರಿತು ಸಂವಾದ ನಡೆಯಲಿದೆ.

ಮಹಿಳಾ ಸಬಲೀಕರಣಕ್ಕೆ ಇನ್ನೊಂದು ಹೆಸರೇ ಡಾ. ಗುರಮ್ಮ ಸಿದ್ದಾರೆಡ್ಡಿ ಎಂದು ಗುರುತಿಸಲ್ಪಟ್ಟಿದ್ದಾರೆ. ಗಡಿ ಭಾಗದ ದುರ್ಬಲ ಹಾಗೂ



ಅಸಹಾಯಕ ಮಹಿಳೆಯರ ಆಶಾಕಿರಣವಾಗಿರುವ ಅವರು 04-02-1946 ರಂದು ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ವಡವಡಗಿ ಗ್ರಾಮದಲ್ಲಿ ಜನಿಸಿದರು. 1965ರಲ್ಲಿ ಡಾ.ಎಸ್.ಎಸ್.ಸಿದ್ದಾರೆಡ್ಡಿಯವರೊಂದಿಗೆ ವಿವಾಹವಾಗಿ ಬೀದರ್‌ಗೆ ಆಗಮಿಸಿ ಸಮಾಜ ಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಂಡರು.

ಮಹಿಳೆಯರ ಶಿಕ್ಷಣವೇ ವಿರಳವಾಗಿದ್ದ ಕಾಲಘಟ್ಟದಲ್ಲಿಯೇ ಅವರು ಗುಲ್ಬರ್ಗಾ ವಿಶ್ವವಿದ್ಯಾಲಯದಿಂದ ಇಂಗ್ಲಿಷ್‌ನಲ್ಲಿ ಎಂ.ಎ. ಪದವಿ ಪಡೆದು, ಸಮಾಜದಲ್ಲಿ ಮಾದರಿಯಾಗಿ ನಿಂತರು. ನಲವತ್ತಕ್ಕೂ ಹೆಚ್ಚು ಸರ್ಕಾರಿ ಹಾಗೂ ಸರ್ಕಾರೇತರ ಸಂಸ್ಥೆಗಳಲ್ಲಿ ಸದಸ್ಯರಾಗಿ ಸೇವೆ ಸಲ್ಲಿಸಿರುವ ಅವರು, ಕಿತ್ತೂರು ರಾಣಿ ಚೆನ್ನಮ್ಮ ಮಹಿಳಾ ಮಂಡಳವನ್ನು ಸ್ಥಾಪಿಸಿ ಸಾವಿರಾರು ಬಡ ಮಹಿಳೆಯರಿಗೆ ಬದುಕು ಕಟ್ಟಿಕೊಟ್ಟಿದ್ದಾರೆ. ಕೊಳಚೆ ಪ್ರದೇಶಗಳಲ್ಲಿ 10 ಶಿಶುಪಾಲನಾ ಕೇಂದ್ರಗಳ ಸ್ಥಾಪನೆ, 20ಕ್ಕೂ ಹೆಚ್ಚು ವಿಕಲಚೇತನ ಮಹಿಳೆಯರಿಗೆ ವಸತಿ ವ್ಯವಸ್ಥೆ, ಉಚಿತ ಹೊಲಿಗೆ ಯಂತ್ರ ವಿತರಣೆ, ಕಾನೂನು ಅರಿವು ಹಾಗೂ ಸ್ವಾವಲಂಬಿ ಜೀವನಕ್ಕಾಗಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಇವರ ಅಪಾರ ಸೇವೆಯನ್ನು ಗುರುತಿಸಿ 2000ನೇ ಸಾಲಿನಲ್ಲಿ ಕರ್ನಾಟಕ ಸರ್ಕಾರ ಮಹಿಳಾ ಅಭಿವೃದ್ಧಿಗಾಗಿ ಟಾಸ್ಕ್ ಫೋರ್ಸ್ ಸಮಿತಿಯನ್ನು ರಚಿಸಿ ಅವರಿಗೆ ಸಚಿವ ಸ್ಥಾನಮಾನ ನೀಡಿ ಅಧ್ಯಕ್ಷರನ್ನಾಗಿ ನೇಮಿಸಿತ್ತು. ಈ ಸಮಿತಿಯ ಶ್ರಮದ ಫಲವಾಗಿ ವಿಜಯಪುರದಲ್ಲಿ ಮಹಿಳಾ ವಿಶ್ವವಿದ್ಯಾಲಯ ಸ್ಥಾಪನೆಯಾದದ್ದು ಮಹತ್ವದ ಸಾಧನೆಯಾಗಿದೆ. ಜೊತೆಗೆ ಜಿಲ್ಲೆಗೊಂದು ಮಹಿಳಾ ಪೊಲೀಸ್ ಠಾಣೆ, ಮಹಿಳಾ ದೂರುಗಳ ವಿಚಾರಣಾ ವ್ಯವಸ್ಥೆ ಹಾಗೂ ಮಹಿಳಾ ಉತ್ಪಾದನೆಗೆ ಮಾರುಕಟ್ಟೆ ವ್ಯವಸ್ಥೆ ರೂಪುಗೊಂಡಿವೆ.

ಅವರ ಸಾಧನೆಗೆ 2005ರಲ್ಲಿ ಕರ್ನಾಟಕ ಸರ್ಕಾರ ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ, 2018ರಲ್ಲಿ ಅಂತರಾಷ್ಟ್ರೀಯ ಏಷಿಯಾ ಪೆಸಿಫಿಕ್ ಪ್ರಶಸ್ತಿ ಹಾಗೂ ಗುಲ್ಬರ್ಗಾ ವಿಶ್ವವಿದ್ಯಾಲಯದಿಂದ ಸಮಾಜ ಸೇವೆ ಕ್ಷೇತ್ರದಲ್ಲಿ ಗೌರವ ಡಾಕ್ಟರೇಟ್ ನೀಡಿ ಗೌರವಿಸಿದೆ.

73ನೇ ವಯಸ್ಸಿನಲ್ಲಿಯೂ ಡಾ. ಗುರಮ್ಮ ಸಿದ್ದಾರೆಡ್ಡಿ ಅವರು ದಲಿತ, ದುರ್ಬಲ ಹಾಗೂ ಅಸಹಾಯಕ ಮಹಿಳೆಯರ ಆಶಾಕಿರಣವಾಗಿ ನಿರಂತರವಾಗಿ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ.

# ಕಲ್ಯಾಣಕ್ಕೆ ಮತ್ತೊಂದು ಹೆಜ್ಜೆ: ಶಾಸಕರಿಂದ ಸುರಕ್ಷಾ ಕಿಟ್ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಗುರಮಠಕಲ್



ಡಾ.ಬಿ.ಆರ್. ಅಂಬೇಡ್ಕರ್ ಕಾರ್ಮಿಕ ಸೇವಾ ಕೇಂದ್ರ ಹಾಗೂ ಕಾರ್ಮಿಕ ಇಲಾಖೆಯ ವತಿಯಿಂದ ಗುರಮಠಕಲ್ ಪಟ್ಟಣದ ಶಾಸಕರ ಜನಸಂಪರ್ಕ ಕಚೇರಿಯಲ್ಲಿ ಮಂಗಳವಾರ ಸಾಂಕೇತಿಕ ಸುರಕ್ಷಾ ಕಿಟ್ (ಸೇಫ್ಟಿ ಕಿಟ್) ವಿತರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಶಾಸಕ ಶರಣಗೌಡ ಕಂದಕೂರ, ಕಾರ್ಮಿಕರ ಸುರಕ್ಷತೆ ಮತ್ತು ಆರೋಗ್ಯಕ್ಕೆ ಹೆಚ್ಚಿನ ಮಹತ್ವ ನೀಡಬೇಕೆಂದು ಕರೆ ನೀಡಿದರು. ಕಾರ್ಮಿಕರು ತಮ್ಮ ಕಾರ್ಯಕ್ಷೇತ್ರಗಳಲ್ಲಿ ಸುರಕ್ಷತಾ ಸಾಧನಗಳನ್ನು ಕಡ್ಡಾಯವಾಗಿ ಬಳಸುವುದರಿಂದ ಅಪಘಾತಗಳನ್ನು ತಡೆಗಟ್ಟಲು ಸಾಧ್ಯವಾಗುತ್ತದೆ ಎಂದು ಹೇಳಿದರು.

ಒಟ್ಟು 340 ಸುರಕ್ಷಾ ಕಿಟ್ ಗಳಲ್ಲಿ ಸಾಂಕೇತಿಕವಾಗಿ 20 ಕಾರ್ಮಿಕರಿಗೆ ಸುರಕ್ಷಾ ಕಿಟ್‌ಗಳನ್ನು ವಿತರಿಸಿ ಕಾರ್ಮಿಕರ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರ ವಿವಿಧ ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳ ಪ್ರಯೋಜನವನ್ನು ಪ್ರತಿಯೊಬ್ಬ ಅರ್ಹ ಕಾರ್ಮಿಕರು ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಕಾರ್ಮಿಕರ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಸರ್ಕಾರ ವಿಶೇಷ ಒತ್ತು ನೀಡುತ್ತಿದ್ದು, ಕಾರ್ಮಿಕ ಸಚಿವ ಸಂತೋಷ್ ಲಾಡ್ ರವರಿಗೆ ಧನ್ಯವಾದ ತಿಳಿಸಿ ಕಾರ್ಮಿಕರ ಮಕ್ಕಳಿಗಾಗಿ ನಿರ್ಮಾಣವಾಗುತ್ತಿರುವ ವಸತಿ ಶಾಲೆಯ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ಮನವಿ ಮಾಡಿದರು.

ಗ್ರಾಮೀಣ ಹಾಗೂ ಆರ್ಥಿಕವಾಗಿ ಹಿಂದುಳಿದ ಕಾರ್ಮಿಕ ಕುಟುಂಬಗಳ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯುವ ಉದ್ದೇಶದಿಂದ ಈ ವಸತಿ ಶಾಲೆ ನಿರ್ಮಿಸಲಾಗುತ್ತಿದ್ದು, ಕಾರ್ಮಿಕರು ತಮ್ಮ ಮಕ್ಕಳನ್ನು ಈ ಸಂಸ್ಥೆಗಳಲ್ಲಿ ದಾಖಲಿಸಿ ಉತ್ತಮ ಭವಿಷ್ಯ ರೂಪಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕಾರ್ಮಿಕ ಇಲಾಖೆಯ ಅಧಿಕಾರಿ ಸಂಗೀತಾ, ತಹಸೀಲ್ದಾರ್ ಚನ್ನ ಮಲ್ಲಪ್ಪ ಘಂಟಿ, ಪುರಸಭೆ ಮುಖ್ಯಾಧಿಕಾರಿ ಶರಣಪ್ಪ ಎಮ್, ಜೆಡಿಎಸ್ ಮುಖಂಡರಾದ ಪ್ರಕಾಶ್ ನೀರೆಟಿ, ಶರಣು ಅವಂಟಿ, ಕಾರ್ಮಿಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಸಮಾಜ ಸೇವೆಗೆ ಪಟ್ಟದ್ದೇವರ ಬದುಕು ಮುಡಿಪು

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಗಡಿಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಸಮಾಜ ಸೇವೆಗೆ ಬದುಕು ಮುಡಿಪಾಗಿಟ್ಟಿದ್ದಾರೆ. ಬಡ ಮಕ್ಕಳಿಗೆ ಗುಣಾತ್ಮಕ ಶಿಕ್ಷಣದ ಜತೆಗೆ ಅನಾಥ ಮಕ್ಕಳಿಗೆ ಅನ್ನ, ಅಕ್ಷರ, ಆಶ್ರಯ ನೀಡುವ ಮೂಲಕ ಮಕ್ಕಳಲ್ಲಿ ಸೇವೆಯಲ್ಲಿ ನಿಜವಾದ ದೇವರನ್ನು ಕಾಣುತ್ತಿದ್ದಾರೆ ಎಂದು ಯಾದಗಿರಿ ಜಿಲ್ಲೆಯ ಗುರುಮಠಕಲ್ ಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ಅಭಿಪ್ರಾಯಪಟ್ಟರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದ ಅನುಭವ ಮಂಟಪದಲ್ಲಿ ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್‌ನ ವತಿಯಿಂದ ಸೋಮವಾರ ಆಯೋಜಿಸಿದ್ದ ಚನ್ನಬಸವೇಶ್ವರ ಗುರುಕುಲ ಪ್ರೌಢ ಶಾಲೆಯ ಎಸ್ಸೆಸ್ಸೆಲ್ಸಿ ಸಾಧಕ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಮಠದ ಆಸ್ತಿ, ಅಂತಸ್ತು, ಅಧಿಕಾರಕ್ಕಾಗಿ ಜಗಳವಾಡುವ ಮಠಾಧೀಶರು ನಮ್ಮ ಮಧ್ಯ ಸಾಕಷ್ಟಿದ್ದಾರೆ. ಆದರೆ, ಅನಾಥ ಮಕ್ಕಳ ಆಶ್ರಯ ಮತ್ತು ಸೇವೆಗೈಯಲು ಡಾ.ಬಸವಲಿಂಗ ಪಟ್ಟದ್ದೇವರು ನ್ಯಾಯಾಲಯ ಕಟಕಟೆ ಹತ್ತಿದ್ದು ಮಾದರಿ ಎನಿಸಿದೆ. ಇಂತಹ ಸ್ವಾಮೀಜಿ ಸಮಾಜದಲ್ಲಿ ಸಿಗುವುದು ಅಪರೂಪ ಎಂದರು. ಹೆತ್ತವರಿಗೆ ಬೇಡವಾದ ಮಕ್ಕಳನ್ನು ಕರೆತಂದು ಶಿಕ್ಷಣ, ಸಂಸ್ಕಾರ ಕಲ್ಪಿಸಿ ಇದು ವರೆಗೂ ಮಕ್ಕಳಿಲ್ಲದ 107 ಕುಟುಂಬಗಳಿಗೆ ಮಕ್ಕಳನ್ನು ಹಸ್ತಾಂತರಿಸಿ ಅವರ ಬಾಳು ಬೆಳಗಿಸಿ ನಿಜವಾದ ಸಮಾಜ ಸೇವೆಗೈಯುತ್ತಿದ್ದಾರೆ ಎಂದು ಮೆಚ್ಚುಗೆ ವ್ಯಕ್ತ ಪಡಿಸಿದರು.



ಪರಮ ಪೂಜ್ಯರು ವಿದ್ಯಾ ದೇಗುಲ ತೆ-ರೆದು ಗ್ರಾಮೀಣ ಭಾಗದ ಸಾವಿರಾರು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ, ಸಂಸ್ಕಾರ ಕಲ್ಪಿಸಿ ದೇಶಕ್ಕೆ ಉತ್ತಮ ನಾಗರಿಕರನ್ನಾಗಿ ರೂಪಿಸುತ್ತಿದ್ದಾರೆ. ಲಾಭ ನಷ್ಟದ ವಿಚಾರ ಮಾಡದೇ, ಜಾತಿಭೇದ ಎನ್ನದೇ ಎಲ್ಲ ವರ್ಗದ ಮಕ್ಕಳಿಗೆ ಶಿಕ್ಷಣ ನೀಡಿ ಪರಮ ಪೂಜ್ಯರು ಕಲ್ಯಾಣದ ಆಧುನಿಕ ಬಸವಣ್ಣನವರಾಗಿದ್ದಾರೆ ಎಂದು ಬಣ್ಣಿಸಿದರು.

ತಂದೆ ತಾಯಿಂದರು ಮಕ್ಕಳ ಕೈಗೆ ಹೆಚ್ಚಾಗಿ ಮೊಬೈಲ್ ನೀಡುವುದನ್ನು ನಿಷೇಧಿಸಿ, ಪುಸ್ತಕ ಓದುವ ಸಂಸ್ಕೃತಿ ಬೆಳೆಸಬೇಕು. ಮಕ್ಕಳನ್ನು ಬೇರೆಯವರ ಜತೆಗೆ ಯಾವುದೇ ಕಾರಣಕ್ಕೂ ಹೊಂದಾಣಿಕೆ ಮಾಡಬಾರದು. ಕಲಿಕೆಗೆ ಪೂರಕ ವಾತಾವರಣ ನಿರ್ಮಿಸಿ ಮಕ್ಕಳಿಗೆ ಪ್ರೋತ್ಸಾಹಿಸಬೇಕು ಎಂದು ಸಲಹೆ ನೀಡಿದರು.

ಉದ್ಯಮಿ ಸಂತೋಷ ತಾಳಂಪಳ್ಳಿ ಬಸವಗುರುವಿನ ಪೂಜೆ ನೆರವೇರಿಸಿದರು. ಪ್ರಾಚಾರ್ಯ ಬಸವರಾಜ ಮೊಳಕೀರೆ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಾನ್ನಿಧ್ಯ ವಹಿಸಿದ್ದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿದರು. ಈ ಸಂದರ್ಭದಲ್ಲಿ ಹಾವಶೆಟ್ಟಿ ಪಾಟೀಲ್, ಬೀದರ್ ರೋಟರಿ ಕ್ಲಬ್ ಅಧ್ಯಕ್ಷ ಆದೀಶ ಡಾ.ರಜನೀಶ ವಾಲಿ, ಪದಾಧಿಕಾರಿಗಳಾದ ಮುಖ್ಯಗುರು ಮಹೇಶ ಮಹಾರಾಜ, ಎಸ್ಸೆಸ್ಸೆಲ್ಸಿ ಸಂಯೋಜಕ ಪ್ರವೀಣ ಖಂಡಾಳೆ ಸೇರಿದಂತೆ ಹಲವರು ಇದ್ದರು. ಕು.ಖುಷಿ ಮತ್ತು ತ್ರಿಷಾ ಪ್ರಾರ್ಥನೆ ಗೀತೆ ನಡೆಸಿ ಕೊಟ್ಟರು. ಆಡಳಿತಾಧಿಕಾರಿ ಮೋಹನ ರೆಡ್ಡಿ ಸ್ವಾಗತಿಸಿದರು. ಲಕ್ಷ್ಮಣ ಮೇತ್ರೆ ನಿರೂಪಿಸಿ, ವಂದಿಸಿದರು.

**ಕಲ್ಯಾಣದ ಪ್ರಗತಿಗೆ ಕಂದಕೂರ ಸದನದಲ್ಲಿ ಧ್ವನಿ:** ಕಲ್ಯಾಣ ಕರ್ನಾಟಕದ ಪ್ರಗತಿಗಾಗಿ ಗುರಮಠಕಲ್ ಕ್ಷೇತ್ರದ ಶಾಸಕ ಶರಣಗೌಡ ಕಂದಕೂರ ವಿಧಾನಸೌಧದ ಒಳಗೆ ಮತ್ತು ಹೊರಗೆ ಧ್ವನಿಯೆತ್ತುತ್ತಿದ್ದಾರೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮೆಚ್ಚುಗೆ ವ್ಯಕ್ತ ಪಡಿಸಿದರು. ಈ ಭಾಗದ ಆರೋಗ್ಯ, ಶಿಕ್ಷಣ, ಕೃಷಿ ಸೇರಿ ಜನರ ಮುಂತಾದ ಜಲ್ವಂತ ಸಮಸ್ಯೆಗಳಿಗೆ ಕಂದಕೂರ ಅವರು ಧ್ವನಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಸರಳ, ಸಜ್ಜನಿಕೆಗೆ ಹೆಸರಾಗಿರುವ ಕಂದಕೂರ ಅವರು ಯುವಶಕ್ತಿಯ ಬ್ರ್ಯಾಂಡ್ ಆಗಿ ಗುರುತಿಸಿ ಕೊಂಡು ತಮ್ಮದೇ ಆದ ಅಭಿಮಾನಿ ಬಳಗ ಸಂಪಾದಿಸಿದ್ದಾರೆ. ಅವರಿಗೆ ಮುಂದಿನ ಜನರ ಸೇವೆಗೈಯಲು ವಿಶ್ವಗುರು ಬಸವಣ್ಣನವರು ಮತ್ತಷ್ಟು ಶಕ್ತಿ ನೀಡಲಿ ಎಂದು ಹಾರೈಸಿದರು.

**ಬಡ ಮಕ್ಕಳ ಶಿಕ್ಷಣಕ್ಕೆ ರೋಟರಿ ಸಿಲ್ವರ್‌ನಿಂದ 17.50 ಲಕ್ಷ ರೂ ನೆರವು:** ಬೀದರ್ ಚನ್ನಬಸವೇಶ್ವರ ಗುರುಕುಲ ವಿಜ್ಞಾನ ಪದವಿ ಪೂರ್ವ ಕಾಲೇಜಿನಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಬಡ ಮಕ್ಕಳ ಶಿಕ್ಷಣಕ್ಕೆ ರೋಟರಿ ಕ್ಲಬ್ ಆಫ್ ಬೀದರ್ ಸಿಲ್ವರ್ ಸ್ಟಾರ್ 17.50 ಲಕ್ಷ ರೂ ನೆರವು ನೀಡಿದೆ. ರೋಟರಿ ಅಧ್ಯಕ್ಷ ಆದೀಶ್ ಡಾ.ರಜನೀಶ ವಾಲಿ ನೇತೃತ್ವದಲ್ಲಿ ಪದಾಧಿಕಾರಿಗಳು ಹಿರೇಮಠ ಸಂಸ್ಥಾನ ವಿದ್ಯಾಪೀಠ ಟ್ರಸ್ಟ್‌ನ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರಿಗೆ ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ರೋಟರಿ ಪದಾಧಿಕಾರಿಗಳಾದ ಭಾವೇಶ ಪಟೇಲ್, ಗುರು ಸಿಂಧೋಲ, ಅರವಿಂದ ಪಾಟೀಲ್, ಸಹನಾ ಪಾಟೀಲ್, ಮಹೇಶ ಚಿಮಕೋಡೆ ಹಾಜರಿದ್ದರು.

**137 ಮಕ್ಕಳಿಗೆ ಸನ್ಮಾನ:** 2025–26ನೇ ಸಾಲಿನ ಎಸ್ಸೆಸ್ಸೆಲ್ಸಿಯಲ್ಲಿ ಅಗ್ರಶ್ರೇಣಿಯಲ್ಲಿ ಪಾಸಾದ 137 ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ರಾಜ್ಯಕ್ಕೆ ಎರಡನೇ ರ‍್ಯಾಂಕ್ ಪಡೆದ ಆನಂದ ಪಾಂಡುರಂಗ 624, ಅಜಯಕುಮಾರ 620, ಶಿವಂ 618, ಸ್ಫೂರ್ತಿ 617, ಪ್ರಿಯಾ 615, ಸೌರಭ 615, ಅಮರ 614, ದರ್ಶನ 613, ನಾಗೇಶ 612, ಶಿವಕನ್ಯಾ 611, ಅಭಿಷೇಕ 611 ಸೇರಿದಂತೆ ಒಟ್ಟು 137 ಮಕ್ಕಳನ್ನು ಸನ್ಮಾನಿಸಿ, ಅಭಿನಂದಿಸಲಾಯಿತು.

# TAPCMS ನೂತನ ಅಧ್ಯಕ್ಷರಾದ ಚನ್ನಪ್ಪ ಮಳಗಿ, ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತದಲ್ಲಿ ಸಾಧನೆ ಮಾಡಿದ ಮೌನೇಶ ಬಡಿಗೇರ್‌ಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ

ನಗರದ ಹೊಸಳ್ಳಿ ರಸ್ತೆಯಲ್ಲಿರುವ ಶ್ರೀ ಮೌನೇಶ್ವರ ದೇವಸ್ಥಾನದಲ್ಲಿ ವಿಶ್ವಕರ್ಮ ಸಮಾಜದ ವತಿಯಿಂದ ಖಿಂಕಅಒಖ ನೂತನ ಅಧ್ಯಕ್ಷರಾದ ಶ್ರೀ ಚನ್ನಪ್ಪ ಮಳಗಿ ವಕೀಲರು ರವರಿಗೆ ಹಾಗೂ ಹಿಂದುಸ್ತಾನಿ ಶಾಸ್ತ್ರೀಯ ಸಂಗೀತ ಸ್ಪರ್ಧೆಯಲ್ಲಿ ಸಾಧನೆ ಮಾಡಿದ ಶ್ರೀ ಮೌನೇಶ ಬಡಿಗೇರ ರವರಿಗೆ ಸಮಾಜದ ಜಿಲ್ಲಾಧ್ಯಕ್ಷರಾದ ನಾಗೇಶಕುಮಾರ ಕಂಸಾಳೆ ನೇತೃತ್ವದಲ್ಲಿ ಸನ್ಮಾನಿಸಲಾಯಿತು ಎಂದು ಸಮಾಜದ ತಾಲೂಕ ಅಧ್ಯಕ್ಷರಾದ ಕಾಳೇಶ ಬಡಿಗೇರ ತಿಳಿಸಿದರು.

ಅವರು ಪ್ರತಿ ಸೋಮವಾರ ದೇವಸ್ಥಾನದಲ್ಲಿ ನಡೆಸಲಾಗುವಂತೆ, ಜೂನ್-8 ರ ಪಲ್ಲಕ್ಕಿ ಉತ್ಸವದಲ್ಲಿ ಇರ್ವರನ್ನೂ ಸನ್ಮಾನಿಸಿ ಗೌರವಿಸಿ ಮಾತನಾಡಿದರು.



ಸನ್ಮಾನ ಸ್ವೀಕರಿಸಿದ ಚನ್ನಪ್ಪ ಮಳಗಿ ವಕೀಲರು ಮಾತನಾಡಿ, ಸನಾನಿಸಿ ಗೌರವಿಸಿದ ವಿಶ್ವಕರ್ಮ ಸಮಾಜಕ್ಕೆ ಅಭಿನಂದನೆಗಳನ್ನು ತಿಳಿಸಿ, ತಾವು TAPCMS ಅಧ್ಯಕ್ಷರಾಗಲು ಪಟ್ಟ ಶ್ರಮದ ಕುರಿತು ಸ್ಮರಿಸಿಕೊಂಡರು. ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಪ್ರಭು ಬಡಿಗೇರ, ಗೌರವಾಧ್ಯಕ್ಷರಾದ ಜೆ. ಮಂಜುನಾಥ, ಉಪಾಧ್ಯಕ್ಷರಾದ ಗುರುನಾಥ ಬಡಿಗೇರ, ಮನೋಹರ ಬಡಿಗೇರ ಮಲ್ಕನಮರಡಿ, ಕಾರ್ಯದರ್ಶಿಯಾದ ಚಿದಂಬರ, ಸಹ ಕಾರ್ಯದರ್ಶಿಯಾದ ಕೃಷ್ಣಮೂರ್ತಿ ಪತ್ತಾರ, ಮಂಜುನಾಥ್ ಪತ್ತಾರ, ಕೃಷ್ಣ ಪತ್ತಾರ, ಖಜಾಂಚಿಯಾದ ದೇವಪ್ಪ ಬಡಿಗೇರ, ಸುನಿಲ್ ಕುಮಾರ್, ಹನುಮೇಶ ಬಡಿಗೇರ, ಬಸವರಾಜ್‌ಬಡಿಗೇರ, ಸಣ್ಣಪ್ಪ ಕಮ್ಮಾರ, ಪ್ರಶಾಂತ್ ಸುತಾರ್, ಸಿದ್ದೇಶ್ ಕಮ್ಮಾರ, ವಿರೇಶ್ ಶಿಕ್ಷಕರು, ವೀರೇಶ ಪತ್ತಾರ್, ಗುರು ಸುತಾರ, ಪ್ರಶಾಂತ್ ಸೋನಾರ್ ಶಿಲ್ಪಿ, ವೀರೇಶ್ ಮಾಚಳ್ಳಿ, ಶಶಿಧರ್, ಮೌನೇಶ್ ಹಣವಾಳ, ಮೌನೇಶ್ ಮುಸ್ಲಾಪುರ್, ಭಾಸ್ಕರ್ ಆಚಾರ, ಗುರು ಹೊಸಳ್ಳಿ, ಶ್ರೀನಿವಾಸ್, ದೇವೇಂದ್ರ, ಮೌನೇಶ್, ಈರಣ್ಣ ಸೇರಿದಂತೆ ಮಹಿಳಾ ಮಂಡಳಿಯವರು ಯುವ ಮಿತ್ರರು ಸಮಾಜದ ಗುರುಹಿರಿಯರು ಉಪಸ್ಥಿತರಿದ್ದರು.

# ಕಾರ್ಮಿಕ ಅಧಿಕಾರಿಗಳ ಬೇಜವಾಬ್ದಾರಿ ನಡೆ ಖಂಡನೀಯ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ



ಕಾರ್ಮಿಕ ನಿರೀಕ್ಷಕರು ಗಂಗಾವತಿ ಅವರು ಕಾರ್ಮಿಕರ ವಿಷಯದಲ್ಲಿ ಬೇಜವಾಬ್ದಾರಿ ತೋರಿಸುತ್ತಿದ್ದಾರೆ ಎಂದು ಅಖಿಲ ಭಾರತ ಕಾರ್ಮಿಕ ಸಂಘಟನೆಗಳ ಕೇಂದ್ರೀಯ ಸಮಿತಿಯ ಜಿಲ್ಲಾ ಅಧ್ಯಕ್ಷರಾದ ವಿಜಯ ದೊರೆರಾಜು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಈಸಂದರ್ಭದಲ್ಲಿ ಮಾತನಾಡಿದ ಅವರುಗಂಗಾವತಿ ತಾಲೂಕಿನದಾಸನಾಳ ಗ್ರಾಮದ ವೆಂಕಟಗಿರಿ ರಸ್ತೆಯಲ್ಲಿರುವಸೂಪರ್ ಮೆಟಲ್ ಫ್ಯಾಕ್ಟರಿಯಲ್ಲಿ 20ಜನ ಕಾರ್ಮಿಕರು ಸುಮಾರು 13 ವರ್ಷಗಳಿಂದ ದುಡಿಯುತ್ತಿದ್ದು ಅವರಿಗೆ ಕನಿಷ್ಠ ವೇತನ ಕಾಯ್ದೆಯಡಿ ವೇತನ ಪಾವತಿಸುತ್ತಿಲ್ಲಹಾಗೂ ಬೋನಸ್, ಇಕಈ, ಇಖಐ ಸೇರಿದಂತೆ ಯಾವುದೇ ಮೂಲಭೂತ ಸೌಕರ್ಯಗಳನ್ನು ನೀಡದೇ, ಆರೋಗ್ಯ ತಪಾಸಣೆ ಮಾಡಿಸದೇ ಕಾರ್ಮಿಕ ಇಲಾಖೆಯ ನಿಯಮಾವಳಿಗಳನ್ನು ಉಲ್ಲಂಘಿಸುತ್ತಿರುವ ಮಾಲಿಕರ ಮೇಲೆ ಸೂಕ್ತ ಕಾನೂನು ಕ್ರಮ ತೆಗೆದುಕೊಳ್ಳಬೇಕು ಎಂದು ಕಾರ್ಮಿಕ ನೀರಿಕ್ಷಕರಿಗೆ ದೂರು ಅರ್ಜಿ ಸಲ್ಲಿಸಲು ಆಗಮಿಸಿದ್ದೇವೆ. ಆದರೆ ಕಾರ್ಮಿಕ ನೀರಿಕ್ಷಕರು ಆಫೀಸ್ ನಲ್ಲಿ ಲಭ್ಯ ಇರುವುದಿಲ್ಲ, ಇದೇ ರೀತಿಯಲ್ಲಿ ಮಾಲಿಕರು ಹಾಗೂ ಗುತ್ತಿಗೆದಾರರಿಂದ ಕಾರ್ಮಿಕರಿಗೆ ಆಗುತ್ತಿರುವ ಅನ್ಯಾಯದ ಬಗ್ಗೆ ನಮ್ಮ ಸಂಘಟನೆಯಿಂದ ಹಲವಾರು ದೂರು ಅರ್ಜಿಗಳನ್ನು ಸಲ್ಲಿಸಿದ್ದೇವೆ, ಆದರೆ ಕಾರ್ಮಿಕ ನೀರಿಕ್ಷಕರು ಇದುವರೆಗೂ ಯಾವುದೇ ಕ್ರಮ ತೆಗೆದುಕೊಳ್ಳದೇ ಬೇಜವಾಬ್ದಾರಿತನ ತೋರಿಸುತ್ತಿದ್ದಾರೆ. ಇದರಿಂದ ಕಾರ್ಮಿಕ ವರ್ಗದವರಿಗೆ ತುಂಬಾ ಅನ್ಯಾಯ ಆಗುತ್ತಿದೆ ಎಂದರು. ಇದೇ ಸಂದರ್ಭದಲ್ಲಿ ಬಾಬರ್ ಮಾತನಾಡಿ ಗಂಗಾವತಿ ನಗರಸಭೆಯ ಹಾಗೂ ಕಾರಟಗಿ ಪುರಸಭೆಗಳಲ್ಲಿ ಕೆಲಸ ಮಾಡುವ ಘನ ತ್ಯಾಜ್ಯ ಸಾಗಿಸುವ ವಾಹನ ಚಾಲಕರಿಗೆ ಗುತ್ತಿಗೆದಾರರಿಂದ ಆಗುತ್ತಿರುವ ಅನ್ಯಾಯದ ಬಗ್ಗೆ ಕಾರ್ಮಿಕ ನೀರಿಕ್ಷಕರಿಗೆ ದೂರು ಸಲ್ಲಿಸಿ ಸುಮಾರು ತಿಂಗಳಗಳೇ ಕಳೆದರೂ ಇದುವರೆಗೂ ಯಾವುದೇ ಕ್ರಮ ತೆಗೆದುಕೋಳ್ಳುತ್ತಿಲ್ಲ ಎಂದರು. ಈ ಸಂದರ್ಭದಲ್ಲಿ ಹಾಜರಿದ್ದ ಅನ್ಯಾಯಕ್ಕೆ ಒಳಗಾಗಿದ್ದ ಕಾರ್ಮಿಕರುಗಳು, ಕಾರ್ಮಿಕ ನೀರಿಕ್ಷಕರು ಆಫೀಸ್ ನಲ್ಲಿ ಯಾವಾಗಲೂ ಸಿಗುವುದಿಲ್ಲ ಎಂದು ತಮ್ಮ ಅಸಮಾಧಾನ ಹೋರಹಾಕಿದರು.

# ಪ್ರಕೃತಿ, ಪ್ರಗತಿ ಸಮತೋಲನದಲ್ಲಿರಲಿ:ಹಾರಕೂಡ ಶ್ರೀ

• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ



ಪ್ರಕೃತಿ ಮತ್ತು ಪ್ರಗತಿಯಲ್ಲಿ ಸಮತೋಲನ ಕಾಯ್ದುಕೊಂಡಾಗ ಮಾತ್ರ ಜಗದ ಜೀವರಾಶಿಗೆ ಉಜ್ವಲ ಭವಿಷ್ಯವಿದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಆಯೋಜಿಸಿದ ವಿಶ್ವ ಪರಿಸರ ದಿನಾಚರಣೆ ಹಾಗೂ ಪರಿಸರ ಸಂರಕ್ಷಣೆ ಜನ ಜಾಗೃತಿ ಕಾರ್ಯಕ್ರಮಕ್ಕೆ ಭಕ್ತರಿಗೆ ಸಸಿ ನೀಡುವ ಮೂಲಕ ಚಾಲನೆ ನೀಡಿ ಮಾತನಾಡಿದ ಶ್ರೀಗಳು, ತಾನು ಪರಿಸರದ ಕೂಸು ಎಂದು ಅರಿಯದೆ ಮಾನವ ಪ್ರಗತಿಯ ಹೆಸರಿನಲ್ಲಿ ಪರಿಸರದ ಮಾರಣ ಹೋಮ ಮಾಡುತ್ತಿರುವುದು ತೀವ್ರ ಆತಂಕಕ್ಕೆ ಎಡೆ ಮಾಡಿ ಕೊಟ್ಟಿದೆ. ಪರಿಸರದ ಸಂವರ್ಧನೆ ಮತ್ತು ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಸಸಿಗಳನ್ನು ನೆಡುವುದಷ್ಟೇ ನಮ್ಮ ಕೆಲಸವಾಗಬಾರದು, ನೆಟ್ಟಿರುವ ಪ್ರತಿ ಸಸಿ ಗಿಡವಾಗಿ ಬೆಳೆಯುವವರೆಗೆ ಮಕ್ಕಳಂತೆ ಪೋಷಣೆ ಮಾಡುವುದರ ಮೂಲಕ ಪ್ರತಿದಿನವೂ ಪರಿಸರ ದಿನವಾಗಿಸಬೇಕು, ಮುಂದಿನ ಪೀಳಿಗೆ ಖುಷಿ ಪಡುವಂತಹ ರೀತಿಯಲ್ಲಿ ಪರಿಸರ ಉಳಿಸಿ ಬೆಳೆಸಬೇಕಾಗಿದೆ ಎಂದು ನುಡಿದರು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಪರಿಸರ ವಾಹಿನಿಯ ಬೀದರ ಜಿಲ್ಲಾ ಅಧ್ಯಕ್ಷರಾದ ಶೈಲೇಂದ್ರ ಕಾವಾಡೆ ಮಾತನಾಡಿ ಪರಿಸರ ಅಸಮತೋಲನದಿಂದಾಗಿ ವಾಯು ಗುಣದಲ್ಲಿ ಬದಲಾವಣೆಯಾಗಿ ಪ್ರತಿ ವರ್ಷ ಭೂತಾಪಮಾನ ಹೆಚ್ಚಳವಾಗುತ್ತಿದೆ, ಭೂತಾಪಮಾನ ಕಡಿಮೆ ಮಾಡಲು ಅತ್ಯಧಿಕ ಪ್ರಮಾಣದಲ್ಲಿ ಮರಗಿಡಗಳು ಬೆಳೆಸಿ ತಾಪಮಾನ ಇಳಿಸಲು ಮನವಿ ಮಾಡಿದರು. ಈ ಸಂದರ್ಭದಲ್ಲಿ ಅನೇಕರು ಉಪಸ್ಥಿತರಿದ್ದರು. ಅಸ್ಲಂ ಮಿಯಾ ಚಿಟಗುಪ್ಪ ಸ್ವಾಗತಿಸಿದರು. ದೇವರಾಜ ಒಡೆಮನಿ ವಂದಿಸಿದರು.

# ಗರಿಷ್ಠ ದರಕ್ಕಿಂತ ಹೆಚ್ಚಿನ ಬೆಲೆಗೆ ರಸಗೊಬ್ಬರ

## ಮಾರಾಟ ಮಾಡಿದರೆ ಕಾನೂನು ಕ್ರಮ: ಬಡೋಲೆ ಎಚ್ಚರಿಕೆ



• ಮಲ್ಲಮ್ಮ ನುಡಿ ವಾರ್ತೆ ಬೀದರ

ಜೂ 09 : ರಸಗೊಬ್ಬರ ಮಾರಾಟಗಾರರು ಯಾವುದೇ ರಸಗೊಬ್ಬರವನ್ನು ಸರ್ಕಾರ ನಿಗದಿಪಡಿಸಿರುವ ಗರಿಷ್ಠ ಚಿಲ್ಲರೆ ದರಕ್ಕಿಂತ (ಎಂಆರ್‌ಪಿ) ಹೆಚ್ಚಿನ ಬೆಲೆಗೆ ಮಾರಾಟ ಮಾಡಬಾರದು. ರೈತರಿಗೆ ವಿತರಿಸುವ ಪ್ರತಿಯೊಂದು ರಸಗೊಬ್ಬರಕ್ಕೂ ಕಡ್ಡಾಯವಾಗಿ ರಸೀದಿ ನೀಡಬೇಕು ಎಂದು ಬೀದರ್ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ. ಗಿರಿಶ ಬಡೋಲೆ ಸೂಚಿಸಿದರು.

ಬೀದರ ತಾಲ್ಲೂಕಿನ ಗಾಂಧೀಗಂಜ್‌ನಲ್ಲಿರುವ ರಸಗೊಬ್ಬರ ಮಾರಾಟ ಮಳಿಗೆಗಳಿಗೆ ಸೋಮವಾರ ಭೇಟಿ ನೀಡಿ ರಸಗೊಬ್ಬರಗಳ ಲಭ್ಯತೆ, ಸಂಗ್ರಹಣೆ ಹಾಗೂ ರೈತರಿಗೆ ವಿತರಣೆಯ ವ್ಯವಸ್ಥೆಯನ್ನು ಪರಿಶೀಲಿಸಿದ ಬಳಿಕ ಅವರು ಮಾತನಾಡಿದರು.

ಹೆಚ್ಚಿನ ಬೆಲೆಗೆ ರಸಗೊಬ್ಬರ ಮಾರಾಟ ಮಾಡುವವರ ವಿರುದ್ಧ ಕಾನೂನಿನ ಪ್ರಕಾರ ಸೂಕ್ತ ಕ್ರಮ ಕೈಗೊಳ್ಳುವಂತೆ ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದ ಅವರು, ಡಿ.ಎ.ಪಿ. ರಸಗೊಬ್ಬರದ ಕೊರತೆಯನ್ನು ನಿವಾರಿಸಲು ಪರ್ಯಾಯವಾಗಿ ಸಂಯುಕ್ತ ಗೊಬ್ಬರಗಳು, ಆಧುನಿಕ ತಂತ್ರಜ್ಞಾನದಿಂದ ತಯಾರಿಸಲಾದ ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿ.ಎ.ಪಿ. ಬಳಕೆಯ ಕುರಿತು ರೈತರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ತಿಳಿಸಿದರು.

ಇದೇ ವೇಳೆ 2026-27ನೇ ಸಾಲಿನ ಮುಂಗಾರು ಹಂಗಾಮಿನ ಬೀಜ ವಿತರಣಾ ಕೇಂದ್ರಗಳ ಕಾರ್ಯವೈಖರಿಯನ್ನೂ ಪರಿಶೀಲಿಸಿದ ಅವರು, ಜನವಾಡಾ ರೈತ ಸಂಪರ್ಕ ಕೇಂದ್ರದಲ್ಲಿ ಸೀಡ್ ಎಂಐಎಸ್, ಬೀಜ ವಿತರಣಾ ದಾಖಲೆಗಳು ಹಾಗೂ ರೈತರ ಎಫ್‌ಐಡಿಗಳ ಪರಿಶೀಲನೆ ನಡೆಸಿದರು.

ನಂತರ ಔರಾದ್ ತಾಲ್ಲೂಕಿನ ಕೌಠಾ (ಬಿ) ಗ್ರಾಮದ ಹೆಚ್ಚುವರಿ ಬೀಜ ವಿತರಣಾ ಕೇಂದ್ರ ಹಾಗೂ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಭೇಟಿ ನೀಡಿ, ಬೀಜ ಹಾಗೂ ಕೃಷಿ ಪರಿಕರಗಳ ವಿತರಣೆಯಲ್ಲಿ ಯಾವುದೇ ರೀತಿಯ ತೊಂದರೆ ರೈತರಿಗೆ ಆಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಬೀದರ್ ಜಂಟಿ ಕೃಷಿ ನಿರ್ದೇಶಕರಾದ ದೇವಿಕಾ ಆರ್., ಸಹಾಯಕ ಕೃಷಿ ನಿರ್ದೇಶಕರಾದ ಆರತಿ ಪಾಟೀಲ್ ಹಾಗೂ ಕೃಷಿ ಇಲಾಖೆಯ ಅಧಿಕಾರಿ ಮಂಚೇಂದ್ರನಾಥ ವಡ್ಡಿ ಉಪಸ್ಥಿತರಿದ್ದರು.

# ಬೀಜಗಳ ದಾಸ್ತಾನು ಪರಿಶೀಲಿಸಿದ ಜಿಲ್ಲಾ ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಪಾಟೀಲ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ಸ್ಥಳೀಯ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯಕ್ಕೆ ಮಂಗಳವಾರ ಜಿಲ್ಲಾ ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಎಸ್ ಪಾಟೀಲ ಭೇಟಿ ನೀಡಿ, ಬೀಜ ವಿತರಣೆ, ಬೀಜಗಳ ವೀಕ್ಷಣೆ ಹಾಗೂ ದಾಸ್ತಾನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ಸಹಾಯಕ ಕೃಷಿ ನಿರ್ದೇಶಕ ಎ.ಪಿ ಬಿರಾದಾರ, ಕೃಷಿ ಅಧಿಕಾರಿ ಚಿದಾನಂದ ಎಂ ಹಿರೇಮಠ, ಗಾಯತ್ರಿ ಸಿಂಧೆ, ಪಿಎಂ ಪಾಟೀಲ, ಜಿ.ಎಸ್ ಉಪ್ಪಿನ ಸೇರಿದಂತೆ ಅನೇಕ ಪ್ರಗತಿಪರ ರೈತರು ಹಾಜರಿದ್ದರು.



# ಕೃಷಿ ಇಲಾಖೆಯ ಲಾಭ ಪಡೆದುಕೊಳ್ಳಲು ರೈತರಲ್ಲಿ ಮನವಿ

• ಮಲ್ಲಮ್ಮ ನುಡಿ ವಾರ್ತೆಬಸವನಬಾಗೇವಾಡಿ

ಅತಿಯಾದ ಗೊಬ್ಬರ ಹಾಕಿದರೆ ಮಣ್ಣು ಹಾಳಾಗುತ್ತೆ. ನೀರು ಕಲುಷಿತ ಆಗುತ್ತೆ. ಮಣ್ಣು ಪರೀಕ್ಷೆ ಮಾಡಿಸಿ ಅಗತ್ಯಕ್ಕೆ ತಕ್ಕಂತೆ ಹಾಕಬೇಕು ಎಂದು ರೈತ ಸಮುದಾಯಕ್ಕೆ ಜಿಲ್ಲಾ ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಎಸ್ ಪಾಟೀಲ ವಿನಂತಿಸಿಕೊಂಡರು.

ಸ್ಥಳೀಯ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯಕ್ಕೆ ಮಂಗಳವಾರ ಭೇಟಿ ನೀಡಿದ ಅವರು ಬೀಜ ವಿತರಣೆ, ಬೀಜಗಳ ವೀಕ್ಷಣೆ ನಂತರ ರೈತ ಸಂಪರ್ಕ ಕೇಂದ್ರದಲ್ಲಿ 2026-27ನೇ ಸಾಲಿನ ಮುಂಗಾರು ಹಂಗಾಮಿನ ರಿಯಾಯತಿ ದರದಲ್ಲಿ ರೈತರ ಬಿತ್ತನೆ ಬೀಜ ವಿತರಣೆ ಕಾರ್‍ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಕೃಷಿ ಇಲಾಖೆಯಲ್ಲಿ ದೊರೆಯುವ ಮುಂಗಾರು ಹಂಗಾಮಿನ ಬಿತ್ತನೆ ಬೀಜಗಳಾದ ತೊಗರಿ, ಸಜ್ಜಿ, ಹೆಸರು, ಮೆಕ್ಕೆಜೋಳ, ಸೂರ್ಯಕಾಂತಿ ಸರಕಾರ ದಾಸ್ತಾನು ಮಾಡಲಾಗಿದೆ. ರೈತರು ಬಂದು ಅಧಿಕಾರಿಗಳೊಂದಿಗೆ ಸಹಕರಿಸಿ ಬೀಜಗಳನ್ನು ಪಡೆದುಕೊಳ್ಳಬೇಕು. ವೈಜ್ಞಾನಿಕ ಬೆಳೆ ಬೆಳೆದು ಅಧಿಕ ಲಾಭ ಪಡೆದುಕೊಳ್ಳಬೇಕು, ಸರಕಾರದ ಯೋಜನೆಗಳನ್ನು ಉಪಯೋಗಿಸಿಕೊಂಡು ಆರ್ಥಿಕವಾಗಿ ಸಬಲರಾಗಬೇಕು, ಅಧಿಕಾರಿಗಳು ರೈತರಿಗೆ ಯಾವುದೇ ತೊಂದರೆಯಾಗದ ರೀತಿಯಲ್ಲಿ ಬಿತ್ತನೆ ಬೀಜ ಹಾಗೂ ರೈತರಿಗೆ ಬೇಕಾಗುವ ಕೃಷಿ ಪರಿಕರಗಳನ್ನು ನೀಡಿ ಅವರೊಂದಿಗೆ ಸಹಕಾರದೊಂದಿಗೆ ಇರಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಸಹಾಯಕ ಕೃಷಿ ನಿರ್ದೇಶಕ ಎ.ಪಿ ಬಿರಾದಾರ, ಕೃಷಿ ಅಧಿಕಾರಿ ಚಿದಾನಂದ ಎಂ ಹಿರೇಮಠ, ಗಾಯತ್ರಿ ಸಿಂಧೆ, ಪಿಎಂ ಪಾಟೀಲ, ಜಿ.ಎಸ್ ಉಪ್ಪಿನ ಸೇರಿದಂತೆ ಅನೇಕ ಪ್ರಗತಿಪರ ರೈತರು ಹಾಜರಿದ್ದರು.



ಪಟ್ಟಣದ ಕೃಷಿ ಪರಿಕರ ಮಾರಾಟಗಾರರ ಮಳಿಗೆಗೆ ಭೇಟಿ ನೀಡಿದ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಯೂರಿಯಾ ಹಾಗೂ ಡಿಎಪಿ ಸೇರಿದಂತೆ ಇನ್ನಿತರ ರಸಗೊಬ್ಬರಗಳ ಪರಿಶೀಲನೆ ಹಾಗೂ ದಾಸ್ತಾನು ವರದಿ ಸಂಗ್ರಹಿಸಿದರು. ಜೈಕಿಸಾನ ಮೂಲಕ ಯೂರಿಯಾ ಗೊಬ್ಬರ ವಿತರಣೆ ವೀಕ್ಷಿಸಿದರು.

# ಖೇತ್ ಬಚಾವೋ ಅಭಿಯಾನ ಜಾಗೃತಿ ಕಾರ್ಯಕ್ರಮ



• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಹೋಬಳಿಯ ರಾಜೂರು ಗ್ರಾಮದಲ್ಲಿ ಕೃಷಿ ಇಲಾಖೆ ವತಿಯಿಂದಸೋಮವಾರ ಖೇತ್ ಬಚಾವೋ ಅಭಿಯಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ರೈತ ಸಂಪರ್ಕ ಕೇಂದ್ರ ಕುಕನೂರಿನ ಕೃಷಿಅಧಿಕಾರಿ ಬಸವರಾಜ ತೇರಿನ್ ಮಾತನಾಡಿ, ರೈತರು ಸಾವಯವ ಕೃಷಿಗೆ ಆದ್ಯತೆ ನೀಡಬೇಕು. ರಾಸಾಯನಿಕ ಗೊಬ್ಬರ ಹಾಗೂ ಕೀಟನಾಶಕಗಳ ಅತಿಯಾದಬಳಕೆಯಿಂದ ಮಣ್ಣಿನ ಫಲವತ್ತತೆ ನಾಶವಾಗುತ್ತಿದೆ. ಇದರಿಂದ ಮನುಷ್ಯರ ಆರೋಗ್ಯದ ಮೇಲೂ ದುಷ್ಪರಿಣಾಮಉಂಟಾಗುತ್ತಿದೆ ಎಂದು ಎಚ್ಚರಿಸಿದರು. ಬೀಜೋಪಚಾರದ ಮಹತ್ವಹಾಗೂ ಅದರ ಪ್ರಯೋಜನಗಳ ಕುರಿತು ರೈತರಿಗೆ ಮಾಹಿತಿನೀಡಿದರು. ಎನ್‌ಎಂಎನ್‌ಎಫ್‌ನ ಬಿಆರ್‌ಸಿ ಹನುಮಂತಪ್ಪ ವಾಲೀಕಾರ್ ಅವರು ನೈಸರ್ಗಿಕ ಕೃಷಿ ಪದ್ಧತಿಗಳು, ಜೀವಾಮೃತ, ಬೀಜಾಮೃತ ತಯಾರಿಕೆ ಬಗ್ಗೆ ವಿವರಿಸಿದರು. ಕಾರ್ಯಕ್ರಮದಲ್ಲಿ ಎಟಿಎಂ ಜಿ.ಡಿ. ಕೋಲಾಜಿ, ಟಿಪಿ ಸಿಬ್ಬಂದಿ ನಂದಿನಿ, ಕೃಷಿ ಸಖಿಯರು, ಪ್ರಗತಿಪರ ರೈತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು



ಬಸವನಬಾಗೇವಾಡಿ: ಸ್ಥಳೀಯ ಸಹಾಯಕ ಕೃಷಿ ನಿರ್ದೇಶಕರ ಕಾರ್ಯಾಲಯಕ್ಕೆ ಮಂಗಳವಾರ ಜಿಲ್ಲಾ ಜಂಟಿ ಕೃಷಿ ನಿರ್ದೇಶಕ ಶಿವನಗೌಡ ಎಸ್ ಪಾಟೀಲ ಭೇಟಿ ನೀಡಿದ ನಂತರ ಪಟ್ಟಣದ ಕೃಷಿ ಮಾರಾಟಗಾರರ ಮಳಿಗೆಗೆ ಭೇಟಿ ನೀಡಿ, ಬೀಜ ವಿತರಣೆ, ಬೀಜಗಳ ವೀಕ್ಷಣೆ ಹಾಗೂ ದಾಸ್ತಾನು ಪರಿಶೀಲಿಸಿದರು.

# ವಕೀಲರು, ನ್ಯಾಯಾಧೀಶರು ಜೋಡೆತ್ತುಗಳಿದ್ದಂತೆ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ




ನ್ಯಾಯಾಂಗ ವ್ಯವಸ್ಥೆಯಲ್ಲಿ ವಕೀಲರು ಮತ್ತು ನ್ಯಾಯಾಧೀಶರು ಜೋಡೆತ್ತುಗಳಿದ್ದಂತೆ. ಇವರಿಬ್ಬರ ಪರಸ್ಪರ ಸಹಕಾರ ಮತ್ತು ಸಮನ್ವಯದ ನಡಿಗೆಯಿಂದ ಮಾತ್ರ ಸಾರ್ವಜನಿಕರಿಗೆ ನಿಷ್ಪಕ್ಷಪಾತ ಹಾಗೂ ಶೀಘ್ರ ನ್ಯಾಯದಾನದ ಗಾಡಿಯನ್ನು ಮುನ್ನಡೆಸಲು ಸಾಧ್ಯ ಎಂದು ತಾಲೂಕು ವಕೀಲರ ಸಂಘದ ಅಧ್ಯಕ್ಷ ಮಹೇಶ ರಾಚೋಟೆ ಅಭಿಪ್ರಾಯಪಟ್ಟರು.

ತಾಲೂಕು ವಕೀಲರ ಸಂಘದ ಸಭಾ ಭವನದಲ್ಲಿ ತಾಲೂಕು ವಕೀಲರ ಸಂಘದ ವತಿಯಿಂದ ಆಯೋಜಿಸಿದ್ದ ಕಿರಿಯ ಶ್ರೇಣಿ ನ್ಯಾಯಾಧೀಶ ದೇಶಭೂಷಣ ಕೌಜಲಗಿ ಅವರ ಬೀಳ್ಕೊಡುಗೆ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಹಿರಿಯ ಶ್ರೇಣಿ ನ್ಯಾಯಾಧೀಶ ರಾಜಶೇಖರ ಹೊಸೂರು ಬೀಳ್ಕೊಡುಗೆ ಕಾರ್ಯಕ್ರಮ ಉದ್ಘಾಟಿಸಿದರು.

ಸನ್ಮಾನ ಸ್ವೀಕರಿಸಿ ನ್ಯಾಯಾಧೀಶ ದೇಶಭೂಷಣ ಕೌಜಲಗಿ ಮಾತನಾಡಿ, ತಾಲೂಕಿನ ವಕೀಲರ ವೃತ್ತಿಪರತೆ ಮತ್ತು ಇಲ್ಲಿನ ಅತ್ಯುತ್ತಮ ನ್ಯಾಯ ಸೇವೆಯನ್ನು ನೋಡಿ ನನಗೆ ಅಪಾರ ಸಂತೋಷವಾಗಿದೆ. ಇಲ್ಲಿನ ವಕೀಲರ ಸಂಘದ ಸಹಕಾರ ಸ್ಮರಣೀಯ ಎಂದು ಬಣ್ಣಿಸಿದರು.

ಈ ಸಂದರ್ಭದಲ್ಲಿ ತಾಲೂಕು ವಕೀಲರ ಸಂಘದ ಉಪಾಧ್ಯಕ್ಷ ಮಕರಂದ ಮಾನಕಾರಿ, ಪ್ರಧಾನ ಕಾರ್ಯದರ್ಶಿ ವಾಗೇಶ ಪಾಟೀಲ್, ಜಂಟಿ ಕಾರ್ಯದರ್ಶಿ ನೀಲಕಂಠ ಬಿರಾದಾರ್ ಸೇರಿದಂತೆ ತಾಲೂಕಿನ ವಕೀಲರ ಸಂಘದ ಪದಾಧಿಕಾರಿಗಳು ಮತ್ತು ವಕೀಲರು ಹಾಜರಿದ್ದರು.

## ಮಹಿಳೆಯರ ಸ್ವಾವಲಂಬನೆಗೆ ಸಹಕಾರ ಸಂಘಗಳು ಸಹಕಾರಿ : ಎಂ ನಾರಾಯಣ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಬೆಂಗಳೂರು ಹಾಗೂ ಯಾದಗಿರಿ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ ಯಾದಗಿರಿ ಹಾಗೂ ಸಹಕಾರ ಇಲಾಖೆ ಯಾದಗಿರಿ ಹಾಗೂ ಶ್ರೀ ಭಗೀರಥ ವಿವಿ ದೋದ್ದೇಶ ಸಹಕಾರ ಸಂಘ ನಿಯಮಿತ ಶಹಪುರ ಇವರುಗಳ ಸಂಯುಕ್ತಾಕ್ಷರದಲ್ಲಿ ಮಹಿಳಾ ಕ್ಲಸ್ಟರ್ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು ಮಹಿಳೆಯರ ಸಾಮಾಜಿಕ ಆರ್ಥಿಕ ಸಂಸ್ಕೃತಿಕ ಹಾಗೂ ರಾಜಕೀಯ ಸಾಧನೆಗಳ ಇಂದು ಹಿಂದಿಗಿಂತಲೂ ಹೆಚ್ಚಿನ ಮಹತ್ವ ಪಡೆದುಕೊಂಡಿವೆ ಮಹಿಳೆಯರಿಗೆ ಆರ್ಥಿಕ ಸ್ವಾತಂತ್ರ್ಯ ಮತ್ತು ಆತ್ಮವಿಶ್ವಾಸವನ್ನು ನೀಡಿ ಅವರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಹಕಾರ ಸಂಘಗಳು ಬಹುದೊಡ್ಡ ಆಸರೆಯಾಗಿವೆ ಎಂದು ಎಂ ನಾರಾಯಣ ಒಕ್ಕೂಟದ ಉಪಾಧ್ಯಕ್ಷರು ಹಾಗೂ ಸಂಘದ ಅಧ್ಯಕ್ಷರು ಇವರು ಸಸಿಗೆ ನೀರು ಹಾಕುವುದರ ಮುಖಾಂತರ ಚಾಲನೆ ನೀಡಿ ಮಾತನಾಡಿದರು ಮಹಿಳೆಯರು ಧೈರ್ಯದಿಂದ ಎಲ್ಲಾ ಕ್ಷೇತ್ರಗಳಲ್ಲೂ ತೊಡಗಿಸಿಕೊಂಡು ಈ ತರಬೇತಿಯ ಸದುಪಯೋಗ ಪಡೆಯಬೇಕು ಎಂದು ಹಾಗೂ ಮಹಾಮಂಡಳ ಉದ್ದೇಶ ಕುರಿತು ಪ್ರಾಸ್ತವಿಕವಾಗಿ ಮಾತನಾಡಿ ಹಾಗೂ ಕಾರ್ಯಕ್ರಮ ನಿರೂಪಣೆ ಹಾಗೂ ಸ್ವಾಗತವನ್ನು ಶ್ರೀಮತಿ ಸುಜಾತ ಮಠ ಜಿಲ್ಲಾ ಸಹಕಾರ ಶಿಕ್ಷಕರು ಇವರು ನೆರವೇರಿಸಿದರು ಮಹಿಳಾ ಸ್ವಸಹಾಯ ಸಂಘಗಳ ರಚನೆ ಹಾಗೂ ಉದ್ಯೋಗಿನಿ ಯೋಜನೆ ತರಬೇತಿ ಮಹಿಳೆಯರಿಗೆ ಸಾಲು ಸೌಲಭ್ಯದ ಜೊತೆಗೆ ಕೌಶಲ್ಯ ತರಬೇತಿಗಳನ್ನ ನೀಡುವುದು ಹಾಗೂ ಮಹಿಳೆಯರಿಗೆ ಇಲಾಖೆಯಿಂದ ಸಿಗುವ ಯೋಜನೆಗಳ ಕುರಿತು ಶ್ರೀಮತಿ ಶಿವ ಮಂಗಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಯಾದಗಿರಿ ಇವರು ವಿಶೇಷವಾಗಿ ಉಪನ್ಯಾಸ ನೀಡಿದರು ಶ್ರೀಮತಿ ಮಾಯ ಎಸ್ ಆರ್ ನಾಯಕ್ ಚೇಂಜ್ ಫೌಂಡೇಶನ್ ಅಧ್ಯಕ್ಷರು ಯಾದಗಿರಿ ಇವರು ಮುಖ್ಯ ತಿಥಿಗಳಾಗಿ ಭಾಗವಹಿಸಿದ್ದರು ಹಾಗೂ ಮಹಿಳೆಯರು ಸಂಘದ ಸದಸ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಕಳಪೆ ಸೂರ್ಯಕಾಂತಿ ಬೀಜ ವಿತರಣೆ ಕಂಪನಿಯ ವಿರುದ್ಧ ಸೂಕ್ತ ಕ್ರಮಕ್ಕೆ ಒತ್ತಾಯ




• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಜೂ. 09.– ರೈತರಿಗೆ ವಿತರಣೆ ಮಾಡಲಾಗಿರುವ ಸೂರ್ಯಕಾಂತಿ ಬೀಜಗಳು ಕಳಪೆಯಾಗಿದ್ದು ಕೂಡಲೇ ಸೂರ್ಯಕಾಂತಿ ಬೀಜ ಸರಬರಾಜು ಮಾಡಿರುವ ಕಂಪನಿಯವರ ವಿರುದ್ಧ ಸೂಕ್ತ ಕ್ರಮ ಜರುಗಿಸುವಂತೆ ಹಾಗೂ ರೈತರಿಗೆ ಸರಿಯಾದ ರೀತಿಯಲ್ಲಿ ವಿದ್ಯುತ್ ಸೌಲಭ್ಯ ಒದಗಿಸುವಂತೆ ಲಿಂಗಸಗೂರು ಹಾಗೂ ಮಸ್ಕಿ ತಾಲೂಕಿನ ರೈತ ಸಂಘಟನೆಯ ಮುಖಂಡರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿ ಕ್ರಮಕ್ಕೆ ಒತ್ತಾಯಿಸಿದರು. ಲಿಂಗಸುಗೂರು ಮತ್ತು ಮಸ್ಕಿ ಈ ಎರಡೂ ತಾಲ್ಲೂಕುಗಳಲ್ಲಿ ಕೃಷಿ ಚಟುವಟಿಕೆಗಳು ಪ್ರಾರಂಭವಾಗಿದ್ದು, ಕೇಂದ್ರ ಸರ್ಕಾರವು ಸೂರ್ಯಕಾಂತಿ ಬೆಳೆಗೆ ಬೆಂಬಲ ಬೆಲೆ ರೂ.3700/– ರಿಂದ ರೂ. 8343/–ರಂತೆ ಘೋಷಣೆ ಮಾಡಿದ ಕಾರಣ ಈ ಸಾಲಿನ ಮುಂಗಾರು ಹಂಗಾಮಿನಲ್ಲಿ ಎರಡು ತಾಲೂಕಿನ ಗ್ರಾಮಗಳ ರೈತರು ಹೆಚ್ಚಿನ ಪ್ರಮಾಣದಲ್ಲಿ ಸೂರ್ಯಕಾಂತಿ ಬಿತ್ತನೆ ಮಾಡಿದ್ದಾರೆ. ಪ್ರತಿ ಎಕರೆಗೆ ಸೂರ್ಯಕಾಂತಿ ಬೆಳೆಯಲು ಸುಮಾರು ರೂ.5,000/– ದಿಂದ ರೂ.6000/– ದಷ್ಟು ಖರ್ಚು ಬರುತ್ತದೆ. ಆದರೆ ಸದರಿ ಬಿತ್ತನೆ ಮಾಡಿದ ಬೀಜಗಳು ಕೆಲವೊಂದು ಜಮೀನುಗಳಲ್ಲಿ ಮೊಳಕೆ ಬಂದಿರುವುದಿಲ್ಲ. ಕೆಲವೊಂದು ಕಂಪನಿಗಳ ಬೀಜಗಳು ಕಳಪೆಯಿಂದ ಕೂಡಿರುತ್ತವೆ. ಇದರಿಂದ ರೈತರು ಕಂಗಾಲಾಗಿದ್ದಾರೆ.

ಕಾರಣ ಹಿರಿಯ ಅಧಿಕಾರಿಗಳು ತಾಲೂಕ ಕೃಷಿ ಅಧಿಕಾರಿಗಳಿಗೆ ಸೂಚಿಸಿ ತಕ್ಷಣ ರೈತರ ಹೊಲಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡಿ ಅಗತ್ಯ ಕ್ರಮ ಕೈಗೊಳ್ಳಲು ರೈತರಿಗೆ ಅನುಕೂಲ ಮಾಡಿಕೊಡಬೇಕು.

ರೈತರ ಹಕ್ಕೊತ್ತಾಯಗಳಾದ ಪ್ರಸ್ತುತ ಸಾಲಿನಲ್ಲಿ ರಸಗೊಬ್ಬರದ ಕೊರತೆಯಾಗದಂತೆ ರೈತರಿಗೆ ಸ್ಪಂದಿಸುವುದು. ಮತ್ತು ಎಫ್‌ಐಡಿಯನ್ನು ಕಡ್ಡಾಯ ಮಾಡಕೂಡದು.

ರೈತರ ಹೊಲಗಳಿಗೆ 7 ತಾಸುಗಳ ವಿದ್ಯುತ್ ಸರಬರಾಜು ಆಗುತಿಲ್ಲ. ವಿದ್ಯುತ್ ಕೊರತೆಯನ್ನು ನಿವಾರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಬೇಕು. ಸೂರ್ಯಕಾಂತಿ, ಹತ್ತಿ, ತೊಗರಿ ಬೀಜಗಳ ದರದಲ್ಲಿ ಏರಿಕೆಯಾಗಿರುವುದು. ತಾಲೂಕಿನ ಕೃಷಿ ಇಲಾಖೆ ಅಧಿಕಾರಿಗಳ ಜೊತೆ ಚರ್ಚಿಸಿ ಅಗತ್ಯ ಕ್ರಮಕೈಗೊಂಡು ದರ ಏರಿಕೆಯನ್ನು ಪರಿಶೀಲಿಸಬೇಕು.

ಪ್ರತಿ ಎಕರೆಗೆ ಸೂರ್ಯಕಾಂತಿ ಬೆಳೆಯಲು ಸುಮಾರು ರೂ.5,000/– ದಷ್ಟು ಖರ್ಚಾಗುತ್ತಿದ್ದು, ಕಳಪೆ ಮಟ್ಟದ ಸೂರ್ಯಕಾಂತಿ ಬೀಜಗಳನ್ನು ನೀಡಿದ ಕಂಪನಿಗಳಿಗೆ ದಂಡ ವಿಧಿಸಿ, ರೈತರು ಸೂರ್ಯಕಾಂತಿ ಬಿತ್ತನೆ ಮಾಡಿದ್ದು ನಾಟಿಯಾಗಿರುವುದಿಲ್ಲ. ಕಾರಣ ಬೀಜ ಉತ್ಪಾದಕರ ಕಂಪನಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಬಿತ್ತನೆಗೆ ಆದ ಖರ್ಚನ್ನು ಬೀಜ ಸರಬರಾಜು ಮಾಡಿದ ಕಂಪೆನಿಗಳಿಂದಲೇ ರೈತರಿಗೆ ಪರಿಹಾರ ಕೊಡುವಂತೆ ಕ್ರಮ ಕೈಗೊಳ್ಳಬೇಕು.


ಈ ಎಲ್ಲಾ ಅಂಶಗಳನ್ನು ಪರಿಶೀಲಿಸಿ ಎರಡೂ ತಾಲೂಕುಗಳ ರೈತರ ಸಮಸ್ಯೆಗಳಿಗೆ ಸ್ಪಂದಿಸಬೇಕೆಂದು ಮನವಿ ಮೂಲಕ ಅವರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಈರಣ್ಣ ಅಮರಣ್ಣ ಗೂಡಿಹಾಳ, ಕಲ್ಲಪ್ಪ ಚಿಕ್ಕಯರದಿಹಾಳ, ಅಮರೇಶ ಚಿಕ್ಕಯರದಿಹಾಳ, ಕರಿಯಪ್ಪನಾಗಶೆಟ್ಟಿ, ಗದ್ದೆಪ್ಪಮಕಾಶಿ, ಮಹಾಂತೇಶ ಸಾಹುಕಾರ್, ಕಲ್ಲಪ್ಪ ಕಂದಗಲ್, ಪರಂಚೆಪ್ಪ, ಯಂಕಣ್ಣ ರಕ್ಕಸಗಿ, ಮುದಕನ ಗೌಡ ಪಾಟೀಲ್ ಗುಡಿಹಾಳ ಸೇರಿದಂತೆ ಲಿಂಗಸಗೂರು ಹಾಗೂ ಮಸ್ಕಿ ತಾಲೂಕಿನ ರೈತರು ಪಾಲ್ಗೊಂಡಿದ್ದರು.

# ದರ್ಶನಾಪೂರಗೆ ಸಚಿವ ಸ್ಥಾನ ಮುಂದುವರಿಸಲು: ಅಂಬರೇಶ ಬುದನೂರ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಶಹಾಪೂರ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರು, ಪಕ್ಷದ ಹಿರಿಯ ಮುತ್ಸದ್ದಿ ಹಾಗೂಹಾಲಿ ಸಚಿವರಾಗಿರುವ ಶ್ರೀ ಶರಣಪ್ಪಗೌಡ ದರ್ಶನಾಪೂರ ಅವರನ್ನು ಮುಂಬರುವ ಸಚಿವ ಸಂಪುಟ ಪುನಾರಚನೆಯಲ್ಲಿ ಯಾವುದೇ ಕಾರಣಕ್ಕೂ ಸಚಿವ ಸ್ಥಾನದಿಂದ ಕೆಳಗಿಳಿಸಬಾರದು. ಅವರ ಮಂತ್ರಿ ಸ್ಥಾನವನ್ನ ಅವರು ರಾಜ್ಯ ಸರ್ಕಾರ ಹಾಗೂ ಕಾಂಗ್ರೆಸ್ ಪಕ್ಷದ ವರಿಷ್ಠರನ್ನು ತೀವ್ರವಾಗಿ ಆಗ್ರಹಿಸುತ್ತೇವೆ. ದರ್ಶನಾಪೂರ ಅವರು ಕೇವಲ ಶಹಾಪೂರ ಕ್ಷೇತ್ರಕ್ಕಷ್ಟೇ ಸೀಮಿತರಾದ ನಾಯಕರಲ್ಲ. ಇಡೀ ಕಲ್ಯಾಣ ಕರ್ನಾಟಕ ಭಾಗದ ಮುಂಚೂಣಿ ನಾಯಕರಾಗಿದ್ದಾರೆ. ಯಾದಗಿರಿ ಜಿಲ್ಲೆಯ ಎಲ್ಲಾ ತಾಲೂಕುಗಳು ಇವರ ಸಂಘಟನಾ ಚಾತುರ್ಯದ ಬಿಗಿಮುಷ್ಟಿಯಲ್ಲಿದ್ದು, ಪಕ್ಷವನ್ನು ತಳಮಟ್ಟದಿಂದ ಗಟ್ಟಿಗೊಳಿಸಿದ್ದಾರೆ. ನೆರೆಯ ಕಲಬುರ್ಗಿ ಜಿಲ್ಲೆಯಲ್ಲಿಯೂ ಕಾಂಗ್ರೆಸ್ ಪಕ್ಷದ ಪರವಾಗಿ ತಮ್ಮದೇ ಆದ ವಿಶೇಷ ಹಾಗೂ ಪ್ರಭಾವಿ ವರ್ಚಸ್ಸನ್ನು ಇವರು ಹೊಂದಿದ್ದಾರೆ.



ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಾಂಗ್ರೆಸ್ ಪಕ್ಷವು ಸಾಧಿಸಿದ ಐತಿಹಾಸಿಕ ಫಲಿತಾಂಶದ ಹಿಂದೆ ಇವರ ಅಪಾರವಾದ ಕೊಡುಗೆ ಮತ್ತು ಅವಿರತ ಶ್ರಮ ಅಡಗಿದೆ. ಜನಸಾಮಾನ್ಯರ ಶಾಸಕ: ಅಧಿಕಾರದ ಅಹಂಕಾರವಿಲ್ಲದ ಅತಿ ಸರಳ ಮತ್ತು ವಿರಳ ಶಾಸಕರಿವರು. ಎಷ್ಟೇ ಕಾರ್ಯದೊತ್ತಡವಿದ್ದರೂ, ಪ್ರತಿ ವಾರವೂ ತಪ್ಪದೆ ತಮ್ಮ ಕ್ಷೇತ್ರಕ್ಕೆ ಆಗಮಿಸಿ, ಜನಸಾಮಾನ್ಯರ ಕಷ್ಟ–ಕಾರ್ಪಣ್ಯಗಳಿಗೆ ಕಿವಿಯಾಗುವ ಹಾಗೂ ತಕ್ಷಣವೇ ಸ್ಪಂದಿಸುವ ಆಪತ್ಬಾಂಧವರಾಗಿದ್ದಾರೆ. ಒಬ್ಬ ಪ್ರಾಮಾಣಿಕ ಸರ್ಕಾರಿ ಶಾಲಾ ಶಿಕ್ಷಕನು ತನ್ನ ಕರ್ತವ್ಯವನ್ನು ಹೇಗೆ ಶ್ರದ್ಧೆ ಹಾಗೂ ಶಿಸ್ತಿನಿಂದ ಮಾಡುತ್ತಾನೋ, ಅದೇ ರೀತಿ ತಮ್ಮ ಜನಸೇವೆಯನ್ನು ಅತ್ಯಂತ ಅಚ್ಚುಕಟ್ಟಾಗಿ ನಿರ್ವಹಿಸುತ್ತಿರುವ ಅಪರೂಪದ ನೈತಿಕ ರಾಜಕಾರಣಿ ಇವರಾಗಿದ್ದಾರೆ. ಇಂತಹ ಅಪಾರ ಜನಬೆಂಬಲ, ಪಕ್ಷನಿಷ್ಠೆ ಹಾಗೂ ಆಡಳಿತಾತ್ಮಕ ಅನುಭವ ಹೊಂದಿರುವ ನಾಯಕರನ್ನು ಸಂಪುಟದಿಂದ ಕೈಬಿಡುವ ಸಾಹಸಕ್ಕೆ ಸರ್ಕಾರ ಕೈಹಾಕಬಾರದು. ಒಂದು ವೇಳೆ ಅವರನ್ನು ಸಚಿವ ಸ್ಥಾನದಿಂದ ಕೆಳಗಿಳಿಸಿದರೆ, ಇಡೀ ಯಾದಗಿರಿ ಜಿಲ್ಲೆ ಹಾಗೂ ಕಲ್ಯಾಣ ಕರ್ನಾಟಕ ಭಾಗದ ಜನತೆಗೆ ತೀವ್ರ ಅನ್ಯಾಯ ಮಾಡಿದಂತಾಗುತ್ತದೆ ಎಂದು ಆಗ್ರಹಿಸಿದರು.

# ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ವೇಳಾಪಟ್ಟಿ ಪ್ರಕಟ: ಅವಶ್ಯಕ ಸಹಕಾರ ನೀಡಲು ಮತದಾರರಲ್ಲಿ ಮನವಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಬಾರತ ಚುನಾವಣಾ ಆಯೋಗವು ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ವೇಳಾಪಟ್ಟಿ ಪ್ರಕಟಿಸಿದ್ದು ,ದಿನಾಂಕ: 20.06.2026 ರಿಂದ ದಿ:07.10.2026 ರವರೆಗೆ ಪ್ರಕ್ರಿಯೆ ನಡೆಯಲಿದ್ದು, ಪಾರದರ್ಶಕ ಮತದಾರರ ಪಟ್ಟಿ ತಯಾರಿಕೆಗೆ ಸಾರ್ವಜನಿಕರು ಸಹಕರಿಸಬೇಕೆಂದು ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳಾದ ಶ್ರೀ ಪಾಂಡ್ವೆ ರಾಹುಲ್ ತುಕಾರಾಮ್ ಅವರು ತಿಳಿಸಿದ್ದಾರೆ. ಸಮಗ್ರ, ವಿಶೇಷ ಪರಿಷ್ಕರಣೆಯ ವೇಳಾಪಟ್ಟಿ ಹಾಗೂ ಇತರ ಕ್ರಮಗಳ ಕುರಿತು ವಿವರ ನೀಡಲು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು. ಈ ವೇಳಾಪಟ್ಟಿಯಂತೆ ನಮೂನೆ ಮುದ್ರಣ ಹಾಗೂ ತರಬೇತಿಯು ಇದೇ ಜೂನ್ 20 ರಿಂದ ಜೂನ್ 29ರವರೆಗೆ ನಡೆಯಲಿದೆ. ಮನೆ ಮನೆ ಸಮೀಕ್ಷೆಯು ಜೂನ್ 30ರಿಂದ ಜುಲೈ 29ರವರೆಗೆ ನಡೆಯಲಿದೆ.

Rationalization of Polling Station ಜುಲೈ 29ರಂದು ನಡೆಯಲಿದ್ದು ,ಕರಡು ಮತದಾರರ ಪಟ್ಟಿಯನ್ನು ಬರುವ ಆಗಸ್ಟ್ 5 ರಂದು ಪ್ರಕಟಿಸಲಾಗುತ್ತದೆ. ಹಕ್ಕು ಮತ್ತು ಆಕ್ಷೇಪಣೆಯ ಅವಧಿಯನ್ನು ಆಗಸ್ಟ್ 5 ರಿಂದ ಸೆಪ್ಟೆಂಬರ್ 4ರವರೆಗೆ ನಿಗದಿಪಡಿಸಲಾಗಿದ್ದು, ಆಗಸ್ಟ್ 5 ರಿಂದ ಅಕ್ಟೋಬರ್ 3 ರವರೆಗೆ ಹಕ್ಕು ಮತ್ತು ಆಕ್ಷೇಪಣೆ ಗಳನ್ನು ವಿಲೇವಾರಿ ಮಾಡಲಾಗುತ್ತದೆ. ಅಂತಿಮ ಮತದಾರರ ಪಟ್ಟಿ ಯನ್ನು ಬರುವ ಅಕ್ಟೋಬರ್ 7 ರಂದು ಪ್ರಕಟಿಸಲಾಗುತ್ತಿದ್ದು, ಎಸ್ ಐ ಆರ್ ಅರ್ಹತಾ ದಿನಾಂಕ ಬರುವ ಅಕ್ಟೋಬರ್ 1 ರಂದು ನಿಗದಿಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಯಾದಗಿರಿ ಜಿಲ್ಲೆಗೆ



ಸಂಬಂಧಿಸಿದಂತೆ 2025ರ ಮತದಾರರನ್ನು,2002 ರ ವಿಶೇಷ ಸಮಗ್ರ ಪರಿಷ್ಕರಣೆ ಮತದಾರರೊಂದಿಗೆ ಹೊಂದಾಣಿಕೆ/ಮ್ಯಾಪಿಂಗ್ ಕಾರ್ಯ ನಡೆಯುತ್ತಿದ್ದು,ಈವರೆಗೆ(ದಿ:9–6–26 ರವರೆಗೆ) ಶೇ.96.27 ರಷ್ಟು ಮತದಾರರ ಮ್ಯಾಪಿಂಗ್ ಮಾಡಲಾಗಿದೆ.

ಜಿಲ್ಲೆಯ ಶೋರಾಪುರ ತಾಲೂಕಿನಲ್ಲಿ 2,09,491 ಮತದಾರರ ಪೈಕಿ 1,97,852 ರಷ್ಟು ಮತದಾರರ, ಶೇ .94.44 ರಷ್ಟು ಮ್ಯಾಪಿಂಗ್ ಆಗಿದೆ. ಶಹಾಪುರ ತಾಲೂಕಿನಲ್ಲಿ 2,31,480 ಮತದಾರರ ಪೈಕಿ 2,20,935 ರಷ್ಟು ಶೇ. 95.44 ರಷ್ಟು ಮ್ಯಾಪಿಂಗ್ ಆಗಿದೆ. ಯಾದಗಿರಿ 2,34,219 ಮತದಾರರ ಪೈಕಿ 2,28,849 ರಷ್ಟು ಮತದಾರರ ಮ್ಯಾಪಿಂಗ್ ಆಗಿದ್ದು, ಶೇ97.71 ರಷ್ಟು ಮ್ಯಾಪಿಂಗ್ ಆಗಿದೆ. ಗುರುಮಠಕಲ್ 1,34,832 ಮತದಾರರ ಪೈಕಿ 1,33,322 ರಷ್ಟು ಮತದಾರರ ಮ್ಯಾಪಿಂಗ್ ಆಗಿದ್ದು, ಶೇ98.88 ರಷ್ಟು ಮ್ಯಾಪಿಂಗ್ ಆಗಿದೆ. ವಡಗೇರಾ,1,00,450 ಮತದಾರರ ಪೈಕಿ 98,340 ರಷ್ಟು ಮತದಾರರ ಮ್ಯಾಪಿಂಗ್ ಆಗಿದ್ದು, ಶೇ 97.90 ರಷ್ಟು ಮ್ಯಾಪಿಂಗ್ ಆಗಿದೆ. ಹುಣಸಗಿ 1,43,024 ಮತದಾರರ ಪೈಕಿ 1,34,923 ಮತದಾರರ ಮ್ಯಾಪಿಂಗ್ ಆಗಿದ್ದು ಶೇ 94.34 ರಷ್ಟು ಮ್ಯಾಪಿಂಗ್ ಆಗಿದೆ.

ಜಿಲ್ಲೆಯಲ್ಲಿ 2025ರನ್ವಯ ಒಟ್ಟು 10,53,496 ಮತದಾರರಿದ್ದು, ಈ ಪೈಕಿ ,10,14,221 ಮತದಾರರ ಮ್ಯಾಪಿಂಗ್ ಆಗಿದ್ದು, ಬಾಕಿ ಉಳಿದ ಮತದಾರರ ಮ್ಯಾಪಿಂಗ್ ಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು. ಜಿಲ್ಲೆಯಿಂದ ಹೊರ ಜಿಲ್ಲೆ ಅಥವಾ ಹೊರರಾಜ್ಯಗಳಿಗೆ ವಲಸೆ ಹೋದವರ ಕುಟುಂಬಸ್ಥರು ಇದ್ದಲ್ಲಿ ,ಮ್ಯಾಪಿಂಗ್ ಸಂದರ್ಭದಲ್ಲಿ ಚುನಾವಣೆ ಸಿಬ್ಬಂದಿಗಳಿಗೆ ಅವಶ್ಯಕ ಮಾಹಿತಿ ನೀಡಿ ಸಹಕರಿಸಬೇಕು. ಕುಟುಂಬದ ಓರ್ವ ಸದಸ್ಯರಿದ್ದರೂ ಮಾಹಿತಿ ನೀಡಲು ಅವಕಾಶವಿರುವದರಿಂದ ಅವಶ್ಯಕ ಮಾಹಿತಿ ನೀಡಿ ಸಹಕಾರ ನೀಡಬೇಕು. ಅದರಂತೆ ನೂತನವಾಗಿ ಮತದಾರರ ಪಟ್ಟಿ ಗೆ ಸೇರಬಯಸುವರು ಸಹ ನಿಗದಿತ ನಮೂನೆಯನ್ನು ಸಲ್ಲಿಸಲು ಅವರು ತಿಳಿಸಿದರು. ಜಿಲ್ಲೆಯಲ್ಲಿ ಎಆರ್ ಜಿಲ್ಲಾ ನೋಡಲ್ ಅಧಿಕಾರಿಯಾಗಿ ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಶ್ರೀ ಶರಣಬಸವ, ಹೋಬಳಿ ವಾರು 16 ಎಆರ್ ನೋಡಲ್ ಅಧಿಕಾರಿಗಳಾಗಿ ಹಾಗೂ ಜಿಲ್ಲಾ ನೋಡಲ್ ಅಧಿಕಾರಿಯಾಗಿ 1950 ಸಹಾಯವಾಣಿಗೆ ಜಿಲ್ಲಾ ಪಂಚಾಯತ್ ಕಾರ್ಯದರ್ಶಿ ಜಹೀರ್ ಹಸನ್ ಇವರನ್ನು ನೇಮಕ ಮಾಡಲಾಗಿದ್ದು,1134 ಮತಗಟ್ಟೆ ಮಟ್ಟದ ಅಧಿಕಾರಿಗಳು,168 ಮತಗಟ್ಟೆ ಮಟ್ಟದ ಅಧಿಕಾರಿಗಳ ಮೇಲ್ವಿಚಾರಕರನ್ನು ನೇಮಿಸಲಾಗಿದೆ. ಐಎನ್ ಸಿ ಯಿಂದ 601 ಬಿಜೆಪಿ ಪಕ್ಷದಿಂದ 585 ಹಾಗೂ ಜೆಡಿಎಸ್ ದಿಂದ 284 ಬೂತ್ ಮಟ್ಟದ ಏಜೆಂಟ್ಸ್ ಗಳನ್ನು ನೇಮಿಸಲಾಗಿದೆ. ಎ??? ಆರ್ ಮಹತ್ವದ ಕುರಿತು ತಿಳಿಹೇಳಲು ಜಿಲ್ಲಾ ಮಟ್ಟದಲ್ಲಿ ರಾಜಕೀಯ ಪಕ್ಷಗಳವರಿಗೆ ಸಭೆ ನಡೆಸಿ ಮಾಹಿತಿ ನೀಡಿದೆ ಹಾಗೂ ತಾಲೂಕುವಾರು ರಾಜಕೀಯ ಪಕ್ಷಗಳವರಿಗೆ ಆಯಾ ತಹಸೀಲ್ದಾರ್ ರು ಸಭೆ ನಡೆಸಿ ಅವಶ್ಯಕ ಮಾಹಿತಿ ನೀಡಿದ್ದಾರೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಅದರಂತೆ ಇಆರ್ ಓ ಗಳಿಗೆ, ಎಇಆರ್ ಓ ಗಳಿಗೆ ,ಎ ಎಲ್ ಎಮ್ ಟಿ ಹಾಗೂ ಬಿಎಲ್ ಓ ಗಳಿಗೆ ಮತ್ತು ಬಿ ಎಲ್ ಎಂ ಗಳಿಗೆ ತರಬೇತಿ ಸಹ ನೀಡಲಾಗಿದೆ ಎಂದ ಅವರು, ಮತದಾರರಿಗೆ ಯಾವುದೇ ರೀತಿಯ ಸಂಶಯವಿದ್ದಲ್ಲಿ ಆಯಾ ತಹಸೀಲ್ದಾರ್ ರು, ಚುನಾವಣಾ ತಹಸೀಲ್ದಾರ್ ರು, ಸಹಾಯಕ ಆಯುಕ್ತರು, ಅಪರ್ ಜಿಲ್ಲಾಧಿಕಾರಿಗಳನ್ನು , ಸಂಪರ್ಕಿಸಬಹುದಾಗಿದೆ. ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಬರದಿದ್ದಲ್ಲಿ ಅಪೀಲುಗಾಗಿ ಮೊದಲನೆ ಮೇಲ್ಮನವಿಯನ್ನು ಜಿಲ್ಲಾಧಿಕಾರಿಗಳಿಗೆ 15 ದಿನಗಳರೊಳಗಾಗಿ ಹಾಗೂ

ಎರಡನೇ ಮೇಲ್ಮನವಿಯನ್ನು ಮುಖ್ಯ ಚುನಾವಣಾಧಿಕಾರಿಗಳು, ಬೆಂಗಳೂರು ಇವರಿಗೆ 30 ದಿನಗಳರೊಳಗೆ ಸಲ್ಲಿಸಲು ಅವಕಾಶವಿದೆ* ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಅಪರ್ ಜಿಲ್ಲಾಧಿಕಾರಿ ರಮೇಶ ಕೋಲಾರ್, ಸಹಾಯಕ ಆಯುಕ್ತ ಶ್ರೀಧರ್ ಗೋಟೂರ್ ಅವರು ಉಪಸ್ಥಿತರಿದ್ದರು.

# ಕಲಬುರಗಿ ಕೇಂದ್ರ ಬಸ್ ನಿಲ್ದಾಣ-ವಿಮಾನ ನಿಲ್ದಾಣಕ್ಕೆ ನೂತನ ಸಿಟಿ ಬಸ್ ಸೇವೆ ಆರಂಭ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ 09 : ಕಲಬುರಗಿ ನಗರದ ಕೆ.ಕೆ. ಆರ್.ಟಿ.ಸಿ ಸಂಸ್ಥೆಯಿಂದ ಕಲಬುರಗಿ ಕೇಂದ್ರ ಬಸ್ ನಿಲ್ದಾಣ–ಕಲಬುರಗಿ ವಿಮಾನ ನಿಲ್ದಾಣ ನಡುವಿನ ಬಸ್ ಸೇವೆಗೆ ಕೇಂದ್ರ ಬಸ್ ನಿಲ್ದಾಣದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷ ಅರುಣಕುಮಾರ ಪಾಟೀಲ ಅವರು ಹಸಿರು ಧ್ವಜ ತೋರಿಸುವ ಮೂಲಕ ಚಾಲನೆ ನೀಡಿದರು. ಕಲಬುರಗಿ ಮತ್ತು ಬೆಂಗಳೂರು ನಡುವೆ ವಿಮಾನ ಸೇವೆಗಳು ಪುನರಾರಂಭಗೊಂಡಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರು ಹಾಗೂ ಪ್ರಯಾಣಿಕರ ಅನುಕೂಲಕ್ಕಾಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ಕೆ.ಕೆ.ಆರ್.ಟಿ.ಸಿ) ವತಿಯಿಂದ ನಗರದ ಪ್ರಮುಖ ಕೇಂದ್ರಗಳಿಂದ ವಿಮಾನ ನಿಲ್ದಾಣಕ್ಕೆ ನೂತನ ಸಿಟಿ ಬಸ್ ಸೇವೆಯನ್ನು ಆರಂಭಿಸಲಾಗಿದೆ ಎಂದು ಶ್ಲಾಘಿಸಿದರು. ಈ ಕುರಿತು ಮಾಹಿತಿ ನೀಡಿದ ಅವರು "ವಿಮಾನ ಪ್ರಯಾಣಿಕರು ಮಾತ್ರವಲ್ಲದೆ ಸಾರ್ವಜನಿಕರು ಕೂಡ ಈ ಸೇವೆಯ ಸದುಪಯೋಗ ಪಡೆದುಕೊಳ್ಳಬೇಕು ಖಾಸಗಿ ವಾಹನಗಳ ವೆಚ್ಚಕ್ಕೆ ಹೋಲಿಸಿದರೆ ಈ



ಬಸ್ ಸೇವೆ ಅತ್ಯಂತ ಕಡಿಮೆ ದರದಲ್ಲಿ ಲಭ್ಯವಿದ್ದು, ಸಾರ್ವಜನಿಕರ ಹಣ ಉಳಿತಾಯವಾಗಲಿದೆ," ಎಂದು ತಿಳಿಸಿದರುಬಸ್ ಸಂಚಾರದ ವಿವರ:ಈ ವಿಶೇಷ ಬಸ್ ಪ್ರತಿದಿನ ಬೆಳಿಗ್ಗೆ 6:10 ಗಂಟೆಗೆ ಕಲಬುರಗಿ ಕೇಂದ್ರೀಯ ಬಸ್ ನಿಲ್ದಾಣದಿಂದ ಹೊರಟು ನಗರದ ಪ್ರಮುಖ ರಸ್ತೆಗಳಾದ ವಲ್ಲಭಭಾಯಿ ಸರ್ಕಲ್(ತಿಮ್ಮಪೂರ) ಮತ್ತು ಅನ್ನಪೂರ್ಣ ಕ್ರಾಸ್ ಮಾರ್ಗವಾಗಿ 7:00 ಗಂಟೆಗೆ ವಿಮಾನ ನಿಲ್ದಾಣ ತಲುಪಲಿದೆ. ಹಾಗೆಯೇ ಬೆಳಿಗ್ಗೆ 8:00 ಗಂಟೆಗೆ ವಿಮಾನ ನಿಲ್ದಾಣದಿಂದ ಹೊರಟು ಕಲಬುರಗಿ ಕೇಂದ್ರೀಯ ಬಸ್ ನಿಲ್ದಾಣಕ್ಕೆ ಆಗಮಿಸಲಿದೆ. ಪ್ರಯಾಣಿಕರ ಅಗತ್ಯಕ್ಕೆ ತಕ್ಕಂತೆ ಟ್ರಿಪ್ಗಳ ಸೇವೆಯನ್ನು ಒದಗಿಸಲು ಸಂಸ್ಥೆ ಯೋಜಿಸಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಕಲಬುರಗಿ –1 ವಿಭಾಗೀಯ ನಿಯಂತ್ರಣಾಧಿಕಾರಿ ಎಸ್.ಜಿ.ಗಂಗಾಧರ್ ಹಾಗೂ ಕಲಬುರಗಿ –2 ಬಸಂತಪ್ಪ ಬಿ ಎಮ್ , ವಿಭಾಗೀಯ ಮೆಕ್ಯಾನಿಕಲ್ ಇಂಜಿನಿಯರರು ಶೇಖ್ ಹುಸೇನಿ, ಪ್ರಶಾಂತ, ಡಿಪೋ ಮ್ಯಾನೇಜರ್ ಅನಿಲ, ಆಡಳಿತಾಧಿಕಾರಿ ಗುರುಲಿಂಗಪ್ಪ , ಡಿಟಿಓ ಹೊಸಮನಿ ಸೇರಿದಂತೆ ಕೆಕೆಆರ್ ಟಿಸಿ ಅಧಿಕಾರಿಗಳು, ಸಾರ್ವಜನಿಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಗಾಣಿಗ ಸಮುದಾಯಕ್ಕೆ ಸಚಿವ ಸ್ಥಾನ ಕೊಡಿ



• ಮಲ್ಲಮ್ಮ ನುಡಿ ವಾರ್ತೆಯಲಬುರ್ಗಾ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ 80 ವರ್ಷದ ಆಡಳಿತದ ಅವದಿಯಲ್ಲಿ ನಮ್ಮ ಸಮಾಜದ ಶಾಸಕರಿಗೆ ಸಚಿವ ಸ್ಥಾನ ನೀಡಿರುವದಿಲ್ಲ ಆದ್ದರಿಂದ ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ನೇತೃತ್ವದ ಎರಡನೇ ಹಂತದ ಸಚಿವ ಸಂಪುಟ ರಚನೆ ವೇಳೆ ಗಾಣಿಗ ಸಮಾಜದ ಹಿರಿಯ ಮುಖಂಡ ಮಾಜಿ ಉಪ ಮುಖ್ಯಮಂತ್ರಿ ಅಥಣಿ ಶಾಸಕ ಲಕ್ಷ್ಮಣ ಸವದಿ ಅವರಿಗೆ ಅವಕಾಶ ನೀಡಬೇಕು ಎಂದು ಯಲಬುರ್ಗಾ ತಾಲೂಕಾ ಗಾಣಿಗ ಸಮಾಜದ ಅಧ್ಯಕ್ಷ ಶರಣಪ್ಪ ರಾವಣಕಿ ಅವರು ಪಟ್ಟಣದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಪ್ರಸ್ತುತ ಕಾಂಗ್ರೆಸ್ ಪಕ್ಷದಲ್ಲಿ ಲಕ್ಷ್ಮಣ ಸವದಿ, ಭದ್ರಾವತಿ ಶಾಸಕ ಬಿ.ಕೆ.ಸಂಗಮೇಶ, ಹಾಗೂ ಚಿತ್ರದುರ್ಗ ಶಾಸಕ ವೀರೇಂದ್ರ ಪಪ್ಪಿ ಸೇರಿ ಮೂವರು ಶಾಸಕರಿದ್ದು ಇವರಲ್ಲಿ ಇಬ್ಬರಿಗೆ ಸಚಿವ ಸ್ಥಾನ ನೀಡಬೇಕು ಎಂದು ಸುದ್ದಿಗೋಷ್ಠಿಯಲ್ಲಿ ಸಮಾಜದವರು ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಈ ವೇಳೆ ಯಲಬುರ್ಗಾ ತಾಲೂಕ ಗಾಣಿಗ ಸಮಾಜದ ಮುಖಂಡರಾದ ಮಹಾಂತೇಶ ಗಾಣಿಗೇರ, ಹಿರೇಹನುಮಪ್ಪ ಬೊಮ್ಮನಾಳ,.ಆದೇಶ ರೊಟ್ಟಿ. ನಾಗರಾಜ ನವಲಹಳ್ಳಿ.ಹನಮಂತಪ್ಪಚರಾರಿ.ಪಂಪಾಪತಿ ವಣಗೇರಿ ಸೇರಿದಂತೆ ಇನ್ನಿತರ ಗಾಣಿಗ ಸಮಾಜದ ಮುಖಂಡರು ಇದ್ದರು

# ಇಂದು ಪೂರ್ವಭಾವಿ ಸಭೆ

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ

ಕಮಲಾಪುರ್ ತಾಲೂಕಿನ ಸುಕ್ಷೇತ್ರ ಮುಲ್ಲಾಮಾರಿ ತೀರ ಕ್ಷೇತ್ರದ ಸೊಂತ ಗ್ರಾಮದ ಹೊರವಲಯದಲ್ಲಿರುವ ಶ್ರೀ ಮಾಣಿಕಕೇಶ್ವರ ದೇವಸ್ಥಾನದ ಶ್ರೀ ಶಂಕರಲಿಂಗ ಮಹಾರಾಜರ ಆಶ್ರಮದಲ್ಲಿ ಇಂದು ಬೆಳಿಗ್ಗೆ 10 ಘಂಟೆಗೆ ಶ್ರೀಶ್ರೀಶ್ರೀ ಬಾಲಯೋಗಿ ಅಭಿನವ ಶರಣ ಶಂಕರಲಿಂಗ ಮಹಾರಾಜರ ಪಾವನ ಸಾನಿಧ್ಯದಲ್ಲಿ ಶ್ರೀಶ್ರೀಶ್ರೀ ದತ್ತ ದಿಗಂಬರ ಮಾಣಿಕೇಶ್ವರ ಮಹಾರಾಜರ ಭವ್ಯ ರಥೋತ್ಸವ ಹಾಗೂ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆ ಜರುಗಲಿದೆ. ಆದ ಕಾರಣ ಸಕಲ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಅನುಭವದ ಅಭಿಪ್ರಾಯ ಹಂಚಿಕೊಳ್ಳಬೇಕೆಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



# ಇಂದು ಅರ್ಹ ಅಭ್ಯರ್ಥಿಗಳು ಡೆಮೋಗೆ ಹಾಜರಾಗಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

, ಜೂ.09–2026–27ನೇ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜು ಹಾಗೂ ಮೌಲಾನಾ ಆಜಾದ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ಉಪನ್ಯಾಸಕರ ಹುದ್ದೆಗಳಿಗೆ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಸ್ವೀಕರಿಸಿ, ಲಭ್ಯವಿರುವ ಹುದ್ದೆಗಳಿಗುಣವಾಗಿ 1:3 ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳ ಪಟ್ಟಿ ಪ್ರಕಟಿಸಲಾಗಿದೆ.

ಈ ಪಟ್ಟಿಯಲ್ಲಿನ ಅರ್ಹ ಅಭ್ಯರ್ಥಿಗಳು 2026ರ ಜೂನ್ 10 ರಂದು ಬೆಳಿಗ್ಗೆ 9.30 ಗಂಟೆಗೆ ಕಲಬುರಗಿ ನಗರದ ಡಬರಾಬಾದ ಕ್ರಾಸ್‌ದಲ್ಲಿನ ಮೌಲಾನಾ

ಆಜಾದ್ ಮಾದರಿ ಶಾಲೆಯಲ್ಲಿ ನಡೆಯುವ ಡೆಮೋಗೆ ಹಾಜರಾಗಬೇಕು. ಡೆಮೋಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ಪಟ್ಟಿ ಕಲಬುರಗಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಕಚೇರಿಯ ನೋಟೀಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ ಹಾಗೂ ಈ ಅಭ್ಯರ್ಥಿಗಳಿಗೆ ಈಗಾಗಲೇ ದೂರವಾಣಿ

ಮೂಲಕ ತಿಳಿಸಲಾಗಿದೆ ಎಂದು ಕಲಬುರಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಲ್‌ಪಿಜಿ ಕೊರತೆಯಿಲ್ಲ, ವದಂತಿಗಳಿಗೆ ಕಿವಿಗೊಡಬೇಡಿ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.09: ಜಿಲ್ಲೆಯಲ್ಲಿ ಗೃಹ ಬಳಕೆಯ ಅಡುಗೆ ಅನಿಲ (ಎಲ್‌ಪಿಜಿ) ಸಿಲಿಂಡರ್‌ಗಳ ಕೊರತೆ ಇಲ್ಲದಿರುವುದರಿಂದ ಸಾರ್ವಜನಿಕರು ಸಾಮಾಜಿಕ ಜಾಲತಾಣಗಳ ಸುಳ್ಳುವದಂತಿಗಳಿಗೆ ಕಿವಿಗೊಡಬಾರದು ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ. ದೇಶಾದ್ಯಂತ ಉತ್ಪಾದನೆ ಹೆಚ್ಚಿರುವುದರಿಂದ ಅಡುಗೆ ಅನಿಲದ ಕೊರತೆಯಿಲ್ಲ. ಜಿಲ್ಲೆಯಲ್ಲೂ ಸಾಕಷ್ಟು ದಾಸ್ತಾನು ಇದ್ದು, ಗ್ರಾಹಕರು ಆತಂಕದಿಂದ ಹೆಚ್ಚುವರಿ ಸಿಲಿಂಡರ್ ಸಂಗ್ರಹಿಸುವ ಅಗತ್ಯವಿಲ್ಲ. ಒಟ್ಟಿಗೆ ಬುಕಿಂಗ್ ಮಾಡುತ್ತಿರುವುದರಿಂದ ಐವಿಆರ್‌ಎಸ್ (IVRS) ವ್ಯವಸ್ಥೆಯಲ್ಲಿ ದಟ್ಟಣೆ ಉಂಟಾಗುತ್ತಿದೆ. ಇದಕ್ಕಾಗಿ ಐಒಸಿಎಲ್, ಎಚ್‌ಪಿಸಿಎಲ್ ಹಾಗೂ ಬಿಪಿಸಿಎಲ್ ಕಂಪನಿಗಳು ಮಿಸ್ಡ್ ಕಾಲ್, ವಾಟ್ಸಾಪ್, ಮೊಬೈಲ್ ಆಪ್, ಒಎಂಸಿ ಪೋರ್ಟಲ್ ಮತ್ತು ಪೇಟಿಎಂ/ಫೋನ್ ಪೇ ಸೇರಿದಂತೆ 6 ಪರ್ಯಾಯ ಬುಕಿಂಗ್ ವಿಧಾನಗಳನ್ನು ಕಲ್ಪಿಸಿವೆ. ಬೇಡಿಕೆ ನಿರ್ವಹಣೆಗೆ ಪ್ರತಿ ಸಿಲಿಂಡರ್ ವಿತರಣೆಯ ನಂತರ 25 ದಿನಗಳ ಇಂಟರ್–ಬುಕಿಂಗ್ ಅವಧಿ ನಿಗದಿಪಡಿಸಲಾಗಿದೆ. ವಿತರಣೆಯಲ್ಲಿ ಸಮಸ್ಯೆ ಕಂಡುಬಂದಲ್ಲಿ ತಾಲೂಕು ಮಟ್ಟದಲ್ಲಿ ತಹಶೀಲ್ದಾರರನ್ನು ಅಥವಾ ಜಿಲ್ಲಾ ಇಲಾಖಾ ಕಚೇರಿ ದೂರವಾಣಿ ಸಂಖ್ಯೆ: 08472–200112 ಕ್ಕೆ ಸಂಪರ್ಕಿಸಿ ದೂರು ನೀಡಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಲಾಗಿದೆ.



# ವಿದ್ಯುತ್ ಕಡಿತಕ್ಕೆ ಸಾರ್ವಜನಿಕರ ಆಕ್ರೋಶ: ತುರ್ತು ಕ್ರಮಕ್ಕೆ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ಪಟ್ಟಣದಲ್ಲಿ ಯಾವುದೇ ಮುನ್ಸೂಚನೆ ಇಲ್ಲದೆ ಅತ್ಯಂತ ಅನಿಯಮಿತವಾಗಿ ವಿದ್ಯುತ್ ಕಡಿತಗೊಳಿಸಲಾಗುತ್ತಿದ್ದು, ಇದರಿಂದ ಸಾರ್ವಜನಿಕರು, ವ್ಯಾಪಾರಸ್ಥರು ಹಾಗೂ ವಿದ್ಯಾರ್ಥಿಗಳು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಈ ಹಿನ್ನೆಲೆಯಲ್ಲಿ ಕುಕನೂರು ಪಟ್ಟಣ ಹಿತರಕ್ಷಣಾ ಸಮಿತಿಯು ಜೆಸ್ಕಾಮ್ (GESCOM) ಉಪವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ (AEE) ಅಧಿಕೃತ ಮನವಿ ಪತ್ರ ಸಲ್ಲಿಸಿ, ಸಮಸ್ಯೆಯನ್ನು ತಕ್ಷಣವೇ ಬಗೆಹರಿಸುವಂತೆ ಒತ್ತಾಯಿಸಿದೆ.

ನಿರಂತರವಾಗಿ ದಿನದಲ್ಲಿ ಹತ್ತಾರು ಬಾರಿ ವಿದ್ಯುತ್ ಕೈಕೊಡುತ್ತಿರುವುದರಿಂದ ಪಟ್ಟಣದ ವಿವಿಧ ಕ್ಷೇತ್ರಗಳ ಮೇಲೆ ಗಂಭೀರ ಪರಿಣಾಮ ಬೀರಿದ್ದು, ಸಮಿತಿಯು ಈ ಕೆಳಗಿನ ಪ್ರಮುಖ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದಿದೆ:

1. ವಿದ್ಯಾರ್ಥಿಗಳ ವ್ಯಾಸಂಗಕ್ಕೆ ಅಡಚಣೆ: ರಾತ್ರಿ ವೇಳೆಯಲ್ಲಿ ಪದೇ ಪದೇ ವಿದ್ಯುತ್ ಕಡಿತಗೊಳ್ಳುತ್ತಿರುವುದರಿಂದ ವಿದ್ಯಾರ್ಥಿಗಳ ಓದಿಗೆ ತೀವ್ರ ತೊಂದರೆಯಾಗುತ್ತಿದೆ.

2. ಸ್ಥಳೀಯ ಉದ್ಯಮ ಹಾಗೂ ವ್ಯಾಪಾರಕ್ಕೆ ನಷ್ಟ: ಪಟ್ಟಣದ ಸಣ್ಣ ಕೈಗಾರಿಕೆಗಳು, ಗಿರಣಿಗಳು, ಕಂಪ್ಯೂಟರ್ ಸೆಂಟರ್‌ಗಳು ಹಾಗೂ ದಿನಸಿ ವ್ಯಾಪಾರಸ್ಥರು ವಿದ್ಯುತ್ ಇಲ್ಲದೆ ದೈನಂದಿನ ಕಾರ್ಯ ನಿರ್ವಹಿಸಲಾಗದೆ ಭಾರಿ ಆರ್ಥಿಕ ನಷ್ಟ ಅನುಭವಿಸುತ್ತಿದ್ದಾರೆ.

3. ಕುಡಿಯುವ ನೀರಿನ ಸಮಸ್ಯೆ: ನಿಗದಿತ ಸಮಯಕ್ಕೆ ವಿದ್ಯುತ್ ಸಿಗದೆ ಇರುವುದರಿಂದ ಪುರಸಭೆಯ ನೀರು ಸರಬರಾಜು ವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ.

4. ಸಾರ್ವಜನಿಕ ಸುರಕ್ಷತೆಗೆ ಧಕ್ಕೆ: ರಾತ್ರಿಯಿಡೀ ಕತ್ತಲೆ ಆವರಿಸುವುದರಿಂದ ಸಾರ್ವಜನಿಕರ ಸಂಚಾರ-ಕ್ಕೆ ಭಯದ ವಾತಾವರಣ ನಿರ್ಮಾಣವಾಗಿದ್ದು, ಕಳ್ಳತನದಂತಹ ಅಹಿತಕರ ಘಟನೆಗಳು ನಡೆಯುವ ಆತಂಕ ಎದುರಾಗಿದೆ.ಸಮಿತಿಯ ಆಗ್ರಹ:"ಪಟ್ಟಣದ ಈ ಎಲ್ಲಾ ಗಂಭೀರ ಸಮಸ್ಯೆಗಳನ್ನು ಜೆಸ್ಕಾಮ್ ಅಧಿಕಾರಿಗಳು ವೈಯಕ್ತಿಕ ಗಮನಹರಿಸಿ, ವಿದ್ಯುತ್ ಮಾರ್ಗಗಳಲ್ಲಿನ ತಾಂತ್ರಿಕ ದೋಷಗಳನ್ನು ತಕ್ಷಣವೇ ಸರಿಪಡಿಸಬೇಕು. ಮುಂಬರುವ ದಿನಗಳಲ್ಲಿ ನಿರಂತರ ಹಾಗೂ ಗುಣಮಟ್ಟದ ವಿದ್ಯುತ್ ಸರಬರಾಜು ಮಾಡಬೇಕು. ಒಂದು ವೇಳೆ ಲೋಡ್ ಶೆಡ್ಡಿಂಗ್ ಅನಿವಾರ್ಯವಿದ್ದಲ್ಲಿ, ಸಾರ್ವಜನಿಕರಿಗೆ ಮುಂಚಿತವಾಗಿ ನಿಗದಿತ ವೇಳಾಪಟ್ಟಿಯನ್ನು ಪ್ರಕಟಿಸಬೇಕು" ಎಂದು ಸಮಿತಿಯ ಸಂಚಾಲಕರಾದ ರವಿ ಜಕ್ಕಾ ಹಾಗೂ ಸಹ-ಸಂಚಾಲಕರಾದ ಮಂಜುನಾಥ ನಾಡಗೌಡ ಆಗ್ರಹಿಸಿದ್ದಾರೆ.?ತಕ್ಷಣವೇ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ಸಾರ್ವಜನಿಕರೊಂದಿಗೆ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಸಮಿತಿಯ ಸದಸ್ಯರು ಎಚ್ಚರಿಸಿದ್ದಾರೆ. ಈ ಸಂಧರ್ಭದಲ್ಲಿ ಸಮಿತಿಯ ಅಂದಪ್ಪ ಜವಳಿ, ಕಳಕೇಶ ಹತ್ತಿಕಟಗಿ, ನೀಲಕಂಠಪ್ಪ ಬಣ್ಣದಬಾವಿ ಸೇರಿದಂತೆ ಸದಸ್ಯರು ಉಪಸ್ಥಿತರಿದ್ದರು.

# ಜಮೀರ್‌ಗೆ ಅಹ್ಮದ್‌ಖಾನ್ ಅವರಿಗೆ ಸಚಿವ ಸ್ಥಾನ ಕೊಡುವಂತೆ ಜಮೀರ್ ಅಭಿಮಾನಿ ಶಫಿ ಬಿಸ್ತಿ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ



ಎಲ್ಲಾ ಜಾತಿ, ಧರ್ಮ ಹಾಗೂ ಸಮುದಾಯಗಳನ್ನು ಸಮಾನವಾಗಿ ಕಾಣುವ, ಸಮಾಜದ ಎಲ್ಲ ವರ್ಗಗಳಿಗೂ ಗೌರವ ನೀಡುವ, ನೇರ ಹಾಗೂ ದಿಟ್ಟ ಮಾತುಗಳಿಂದ ಜನಮನ ಗೆದ್ದಿರುವ ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಶಾಸಕ ಜಮೀರ್ ಅಹ್ಮದ್ ಖಾನ್ ಅವರನ್ನು ಎರಡನೇ ಹಂತದ ಸಚಿವ ಸಂಪುಟ ವಿಸ್ತರಣೆಯಲ್ಲಿ ಸಚಿವರಾಗಿ ಸೇರ್ಪಡೆಗೊಳಿಸಬೇಕು ಎಂದು ಕಲ್ಯಾಣ ಕರ್ನಾಟಕ ಯುವ ಜಾಗೃತಿ ವೇದಿಕೆಯ ರಾಜ್ಯಾಧ್ಯಕ್ಷ ಹಾಗೂ ಜಮೀರ್ ಅಹ್ಮದ್ ಖಾನ್ ಅಪ್ಪಟ ಅಭಿಮಾನಿ ಶಫಿ ಬಿಸ್ತಿ ಆಗ್ರಹಿಸಿದ್ದಾರೆ.

ಈ ಕುರಿತು ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಸಲ್ಲಿಸುವುದಾಗಿ ಅವರು ತಿಳಿಸಿದ್ದಾರೆ.ಜಮೀರ್ ಅಹ್ಮದ್ ಖಾನ್ ಅವರು ಅಹಿಂದ ವರ್ಗಗಳ ಧ್ವನಿಯಾಗಿ ಕೆಲಸಮಾಡುತ್ತಿದ್ದು, ಬಡವರು, ಹಿಂದುಳಿದವರು, ಅಲ್ಪಸಂಖ್ಯಾತರು ಹಾಗೂ ಸಮಾಜದ ಎಲ್ಲ ವರ್ಗಗಳ ಸಮಸ್ಯೆಗಳಿಗೆ ಸದಾ ಸ್ಪಂದಿಸುವ ನಾಯಕ.



ಅವರ ರಾಜಕೀಯ ಅನುಭವ, ಪಕ್ಷದ ಸಂಘಟನೆಗೆ ನೀಡಿರುವ ಕೊಡುಗೆ ಹಾಗೂ ಜನಪರ ಕಾರ್ಯಗಳನ್ನು ಪರಿಗಣಿಸಿ ಸಚಿವ ಸಂಪುಟದಲ್ಲಿ ಸೂಕ್ತ ಸ್ಥಾನ ನೀಡಬೇಕು ಎಂದು ಜಮೀರ್ ಅಹ್ಮದ್ ಖಾನ್ ಅಭಿಮಾನಿ ಶಫಿ ಬಿಸ್ತಿ ಒತ್ತಾಯಿಸಿದ್ದಾರೆ. ರಾಜ್ಯದ ಅಭಿವೃದ್ಧಿ ಹಾಗೂ ಸಾಮಾಜಿಕ ನ್ಯಾಯದ ಪರಿಕಲ್ಪನೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಜಮೀರ್ ಅಹ್ಮದ್ ಖಾನ್ ಅವರಂತಹ ಅನುಭವಿ ನಾಯಕರನ್ನು ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳುವುದು ಅಗತ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

ಅಹಿಂದ ವರ್ಗದ ಜನರಲ್ಲಿ ಜಮೀರ್ ಅಹ್ಮದ್ ಖಾನ್ ಅವರಿಗೆ ವಿಶೇಷ ಬೆಂಬಲವಿದ್ದು, ಅವರ ಸೇವೆಯನ್ನು ಗುರುತಿಸಿ ಸಚಿವ ಸ್ಥಾನ ನೀಡುವ ಮೂಲಕ ಪಕ್ಷವು ಕಾರ್ಯಕರ್ತರ ಹಾಗೂ ಜನರ ನಿರೀಕ್ಷೆಯನ್ನು ಈಡೇರಿಸಬೇಕೆಂದು ಕಾಂಗ್ರೆಸ್ ಹೈಕಮಾಂಡ್‌ಗೆ ಮನವಿ ಮಾಡಿದ್ದಾರೆ.

# ನನ್ನ ಕಸ, ನನ್ನ ಜವಾಬ್ದಾರಿ ಜಾಗೃತಿ ಕಾರ್ಯಕ್ರಮ




• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ಪಟ್ಟಣ ಪಂಚಾಯತಿ ಕುಕನೂರು ಇವರ ವತಿಯಿಂದ ಪಟ್ಟಣದ ಅನ್ನದಾನೀಶ್ವರ ಮಠದ ಮುಂಬಾಗಲ್ಲಿ ಸೋಮವಾರ 'ಘನತ್ಯಾಜ್ಯಗಳ ನಮೂನೆ ಮತ್ತು ಅವುಗಳ ವಿಂಗಡನೆ' ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಅನ್ನದಾನೀಶ್ವರ ಮಠದ ಪೂಜ್ಯ ಮಹಾದೇವ ಸ್ವಾಮೀಜಿ ಮಾತನಾಡಿ, "ಸ್ವಚ್ಛತೆ-ಯೇ ದೇವರ ಸೇವೆ. ನಮ್ಮ ಮನೆಯ ಕಸವನ್ನು ನಾವೇ ವಿಂಗಡಿಸಿ ಕೊಡುವುದು ಪ್ರತಿ ನಾಗರಿಕನ ಆದ್ಯ ಕರ್ತವ್ಯ. ಹಸಿ ಕಸ, ಒಣ ಕಸ, ಸಾನಿಟರಿ ಮತ್ತು ಅಪಾಯಕಾರಿ ತ್ಯಾಜ್ಯವನ್ನು ಮನೆಯಲ್ಲೇ 4 ವಿಧವಾಗಿ ವಿಂಗಡಿಸಿ ಪೌರಕಾರ್ಮಿಕರಿಗೆ ನೀಡಬೇಕು. ಇದರಿಂದ ಪರಿಸರ ಉಳಿಯುತ್ತದೆ, ರೋಗ ರುಜಿನಗಳು ಕಡಿಮೆಯಾಗುತ್ತವೆ" ಎಂದು ಕರೆ ನೀಡಿದರು.

ಪಟ್ಟಣ ಪಂಚಾಯತಿ ಬಸವರಾಜ ಆರಬೆರಳಿನ ಅವರು ಮಾತನಾಡಿ, ಸಾರ್ವಜನಿಕ ಸ್ಥಳಗಳಲ್ಲಿ ಕಸ ಎಸೆದರೆ ಹಾಗೂ ವಿಂಗಡಿಸದೆ ತ್ಯಾಜ್ಯ ನೀಡಿದರೆ ದಂಡ ವಿಧಿಸಲಾಗುವುದು ಎಂದು ಎಚ್ಚರಿಸಿದರು.

ಕಾರ್ಯಕ್ರಮದಲ್ಲಿ ಕಸ ವಿಂಗಡಣೆಯ 4 ವಿಧಗಳು – ಹಸಿ ಕಸ, ಒಣ ಕಸ, ಸಾನಿಟರಿ ತ್ಯಾಜ್ಯ ಮತ್ತು ಅಪಾಯಕಾರಿ ತ್ಯಾಜ್ಯಗಳ ಬಗ್ಗೆ ಮಾಹಿತಿ ಇರುವ ಕರಪತ್ರಗಳನ್ನು ಸಾರ್ವಜನಿಕರಿಗೆ ಹಂಚಲಾಯಿತು. ಈ ಸಂದರ್ಭದಲ್ಲಿ ಈರಮ್ಮ ಗಾಟಿ, ಚಂದ್ರಕಲಾ ಹಾಲಕೆರೆ, ಶಿಲ್ಪ ಭಜಂತ್ರಿ, ಹುಸೇನ್ ಬಿ, ನಾಗಮ್ಮಮಳಿಗಿ, ಸಂಗಮೇಶ ಕಲ್ಮಠ, ಸಂಗಪ್ಪ ಗುತ್ತಿ, ಶಿವು ಯತ್ನಟ್ಟಿ ಸೇರಿದಂತೆ ಕಾರ್ಯಕ್ರಮದಲ್ಲಿ ಪಟ್ಟಣ ಪಂಚಾಯತಿ ಸಿಬ್ಬಂದಿ ವರ್ಗ, ಆಶಾ ಕಾರ್ಯಕರ್ತೆಯರು, ಸ್ವಸಹಾಯ ಸಂಘದ ಮಹಿಳೆಯರು ಹಾಗೂ ನೂರಾರು ಸಾರ್ವಜನಿಕರು ಭಾಗವಹಿಸಿದ್ದರು.

# ವೈದ್ಯಕೀಯ ವಿದ್ಯಾರ್ಥಿಗಳಿಂದ ಹೃದಯದ ಆರೋಗ್ಯ ಜಾಗೃತಿ ಬೀದಿ ನಾಟಕ ಪ್ರದರ್ಶನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ಸಾಪ್ತಾಹಿಕ ಆಚರಣೆ ಅಂಗವಾಗಿ ಮಂಗಳವಾರ ನಗರದ ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರ (ಬಿಎಂಸಿಆರ್‌ಸಿ) ಆವರಣದ ತುರ್ತು ಚಿಕಿತ್ಸಾ ವಿಭಾಗದ ಮುಂಭಾಗದಲ್ಲಿ ಭಾರತೀಯ ಶಸ್ತ್ರಚಿಕಿತ್ಸಕರ ಸಂಘದ ಕರ್ನಾಟಕ ರಾಜ್ಯ ಭಾಗದ ಬಳ್ಳಾರಿ ಶಾಖೆಯ ವತಿಯಿಂದ ಅರ್ಥಪೂರ್ಣ ಬೀದಿ ನಾಟಕ ಪ್ರದರ್ಶನ ಆಯೋಜಿಸಲಾಗಿತ್ತು.ಸಾರ್ವಜನಿಕರಲ್ಲಿ ಹೃದಯದ ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ಮಹತ್ತರ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಸಂಸ್ಥೆಯ ಇಂಟರ್ನ್ಸ್ ಹಾಗೂ ಪ್ರಥಮ ಮತ್ತು ದ್ವಿತೀಯ ವರ್ಷದ ಎಂ.ಬಿ.ಬಿ.ಎಸ್ ವಿದ್ಯಾರ್ಥಿಗಳು ಅತ್ಯಂತ ಯಶಸ್ವಿಯಾಗಿ ಬೀದಿ ನಾಟಕವನ್ನು ಪ್ರದರ್ಶಿಸುವ ಮೂಲಕ ಸಾರ್ವಜನಿಕರ ಗಮನ ಸೆಳೆದರು.




ವಿದ್ಯಾರ್ಥಿಗಳ ಈ ಸಾಮಾಜಿಕ ಕಳಕಳಿ ಮತ್ತು ಸಾರ್ವಜನಿಕ ಆರೋಗ್ಯದ ಬಗ್ಗೆ ತೋರಿದ ಬದ್ಧತೆಯನ್ನು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಹಿರಿಯ ವೈದ್ಯರಾದ ಡಾ.ಶೇಕಪ್ಪ ಸಿ. ಮಳಗಿಮನಿ, ಡಾ.ಮಹೇಶ್ ಎಸ್. ದೇಸಾಯಿ, ಡಾ. ರಾಜಶೇಖರ ಗೌಡ ಹಾಗೂ ಡಾ. ಶೈಖ್ ಫರ್ಹಾನ್ ಎಂ.ಬಿ ಅವರು ಮುಕ್ತಕಂಠದಿಂದ ಶ್ಲಾಘಿಸಿದರು.

ಕಾರ್ಯಕ್ರಮದಲ್ಲಿ ಕೆಎಸ್‌ಸಿಎಎಸ್‌ಐ – ಬಳ್ಳಾರಿ ಶಾಖೆಯ ಅಧ್ಯಕ್ಷ ಡಾ.ಶೇಕಪ್ಪ ಮಾಳಗಿಮನಿ, ಕಾರ್ಯದರ್ಶಿ ಡಾ.ಗುಡೇಕೋಟೆ ರವಿಕುಮಾರ, ಜಂಟಿ ಕಾರ್ಯದರ್ಶಿ ಡಾ.ಶೈಖ್ ಫರ್ಹಾನ್ ಎಂ.ಬಿ., ಎಎಸ್‌ಐ ರಾಷ್ಟ್ರೀಯ ಕಾರ್ಯದರ್ಶಿ ಡಾ.ದಿವಾಕರ್ ಗಡ್ಡಿ ಹಾಗೂ ಕೆಎಸ್‌ಸಿಎಎಸ್‌ಐ ಖಜಾಂಚಿ ಡಾ.ವೈ.ಗುರುಬಸವನ ಗೌಡ ಸೇರಿದಂತೆ ಶಸ್ತ್ರಚಿಕಿತ್ಸಾ ವಿಭಾಗದ ಉಪನ್ಯಾಸಕರು ಮತ್ತು ವೈದ್ಯಕೀಯ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ತುರ್ತು ಚಿಕಿತ್ಸಾ ವಿಭಾಗಕ್ಕೆ ಆಗಮಿಸಿದ್ದ ನೂರಾರು ಸಾರ್ವಜನಿಕರು ಶಾಂತಚಿತ್ತರಾಗಿ ಬೀದಿ ನಾಟಕವನ್ನು ವೀಕ್ಷಿಸಿದರು. ವಿದ್ಯಾರ್ಥಿಗಳ ಅಭಿನಯ ಹಾಗೂ ಸಂದೇಶಕ್ಕೆ ಚಪ್ಪಾಳೆಗಳ ಮುಖಾಂತರ ಭಾರಿ ಪ್ರಶಂಸೆ ವ್ಯಕ್ತಪಡಿಸಿದರು.

# ಸರಳ ವ್ಯಕ್ತಿತ್ವದಿಂದ ಜೀವನ ಸಾಗಿಸಿ

• ಮಲ್ಲಮ್ಮ ನುಡಿ ವಾರ್ತೆಕುರುಗೋಡು

ಸರಳ ವ್ಯಕ್ತಿತ್ವದಿಂದ ಜೀವನ ಸಾಗಿಸಿ ಭಕ್ತರಿಗೆ ಸಂಸ್ಕೃತಿ, ಸಂಸ್ಕಾರವನ್ನು ಕರುಣಿಸಿ ತಮ್ಮ ದಿವ್ಯವಾಣಿಯಿಂದ ಹಲವಾರು ಪವಾಡಗಳನ್ನು ಮಾಡಿ, ಜನರ ಕಷ್ಟ ಸುಖಗಳಿಗೆ ಸ್ಪಂದಿಸಿದ ಮಹನ್ ಚೇತನರು ಚಿದಾನಂದ ತಾತ ಎಂದು ಬುಕ್ಕಸಾಗರದ ಕರಿಸಿದ್ದೇಶ್ವರ ಮಠದ ಶ್ರೀ ಷಬ್ರ॥ ಕರಿಸಿದ್ದೇಶ್ವರ ವಿಶ್ವರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ತಿಳಿಸಿದರು.



ಅವರು ಪಟ್ಟಣ ಸಮೀಪದ ಕ್ಯಾದಿಗೆಹಾಳ್ ಗ್ರಾಮದ ಬೃಹನ್ಮಠದಲ್ಲಿ ಸದ್ಭಕ್ತ ಮಂಡಳಿಯವರು ಮಂಗಳವಾರ ಹಮ್ಮಿಕೊಂಡಿದ್ದ ಪರಮ ಪೂಜ್ಯ ಶ್ರೀ ಚಿದಾನಂದ ತಾತನವರ 13ನೇ ವರ್ಷದ ಪುಣ್ಯ ಸ್ಮರಣೋತ್ಸವ ಹಾಗೂ ಧರ್ಮಜಾಗೃತಿ ಸಮಾರಂಭದ ಸಭೆಯ ಸಾನಿಧ್ಯ ವಹಿಸಿ ಮಾತನಾಡಿದರು.

ಯಾವ ಮನುಷ್ಯ ತನ್ನ ಬಾಹ್ಯ ಮತ್ತು ಅಂತರ ಇಂದ್ರಿಯ ಸುಖಗಳನ್ನು ತೊರೆದು ದೈವ ಭಕ್ತಿಯಲ್ಲಿ ಲೀನವಾಗುತ್ತಾರೋ ಅವರೇ ಶರಣರು, ಮಹತ್ಮರಾಗುತ್ತಾರೆ. ಇಂತಹವರಲ್ಲಿ ಚಿದಾನಂದತಾತನವರು ಒಬ್ಬರೂ, ಆಗಾಗಿ ಮನುಷ್ಯ ಜೀವನದಲ್ಲಿ ನೆಮ್ಮದಿ, ಸುಖ, ಸಂತೋಷ ಸಾರ್ಥಕತೆ ಕಾಣಬೇಕಾದರೇ ಭಗವಂತನ ನಾಮಸ್ಮರಣೆ ಮಾಡಬೇಕು. ಆಗ ಮಾತ್ರ ನೆಮ್ಮದಿಯ ಜೀವನ ಸಾಗಿಸಲು ಸಾಧ್ಯ ಎಂದರು.

ಹೆಬ್ಬಾಳು ಮಠದ ಪರಮಪೂಜ್ಯ ಶ್ರೀ ಶಿವಪ್ರಕಾಶ ಶರಣರು ಮಾತನಾಡಿ, ಭಕ್ತರಿಗಾಗಿ ತಮ್ಮ ಜೀವನವನ್ನೇ ಮುಡುಪಗಿಟ್ಟು ಭಕ್ತರ ಸೇವೆ ಸಲ್ಲಿಸಿ ಸಾವಿರಾರು ಭಕ್ತರ ಸಮೂಹ ಹೊಂದಿರುವ ಮಹಾನ್ ಪುರುಷಲಿ.ಚಿದಾನಂದ ತಾತನವರು. ಇಂತಹ ತಾತನವರ ಕ್ಷೇತ್ರದಲ್ಲಿನ ಜನರು ಪುಣ್ಯವಂತರು ಎಂದು ಅಶೀರ್ವರ್ಚನ ನೀಡಿದರು

ಕ್ಯಾದಿಗೆಹಾಳ್ ಬೃಹನ್ಮಠದ ಪರಮ ಪೂಜ್ಯ ಶ್ರೀ ಗಂಗಾಧರ ತಾತ ಹಾಗೂ ಗಂಗಾವತಿಯ ಶ್ರೀ ಶರಣಯ್ಯಸ್ವಾಮಿ ಹಿರೇಮಠ ಮಾತನಾಡಿದರು.

ಪ್ರಾರಂಭದಲ್ಲಿ ಶ್ರೀ ಈಶ್ವರ ದೇವಸ್ಥಾನದಿಂದ ತಾತನವರ ಮೂರ್ತಿ, ಪೂರ್ಣಕುಂಭ, ಸುಮಂಗಲೆಯರಿಂದ ಕಳಾಸ, ಭಜನೆ, ವಾದ್ಯಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಬೃಹನ್ಮಠದವರೆಗೆ ಅದ್ದೂರಿ ಮುತ್ತಿನ ಪಲ್ಲಕಿ ಉತ್ಸವದ ಮೆರವಣಿಗೆ ಜರುಗಿತು. ನಂತರ ಭಕ್ತರಿಂದ ಶಿವನಾಮ ಸ್ಮರಣೆಯ ಸಪ್ತ ಭಜನೆ ಜರುಗಿತು. ಬೆಳಿಗ್ಗೆಯಿಂದ ತಾತನ ಕರ್ತೃ ಗದ್ದುಗೆಗೆ ರುದ್ರಾಭಿಷೇಕ, ಗಂಗೆ ಪೂಜೆ, ಗಣಪತಿ ಪೂಜೆ ಹಾಗೂ ವಿಧಿವಿಧಾನಗಳಿಂದ ಪೂಜೆ ನಡೆದವು. ಶ್ರೀಗಳಿಂದ ಮುತ್ತೈದೆಯರಿಗೆ ಉಡಿ ತುಂಬಿದರು.

ಕಾರ್ಯಕ್ರಮದಲ್ಲಿ ಮುಷ್ಟಗಟ್ಟೆ ಸುರೇಶ್ ಸ್ವಾಮಿ, ತೆಕ್ಕಲಕೋಟೆಯ ಕಂಬಳಿಮಠದ ವೀರೇಶ್ ಸ್ವಾಮಿ, ಕ್ಯಾದಿಗೆಹಾಳ್, ಕಲ್ಲುಕಂಭ, ಗುಂಡಿಗನೂರು, ಲಕ್ಷಿ ??ಪುರ, ಕೆರೆಕೆರೆ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಸದೃಢ ಆರೋಗ್ಯಕ್ಕಾಗಿ ಆಯುರ್ವೇದ ಪದ್ಧತಿಯೇ ಶ್ರೇಷ್ಠ :ಡಾ.ಚಂದ್ರಶೇಖರ್



• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಪಟ್ಟಣದಲ್ಲಿಹೆಮ್ಮಿಕೊಂಡಿ ದ್ದ 39ನೇ ಮೃಗಶಿರ ಉಚಿತ ಮಾತ್ರೆ ವಿತರಣೆ ಸಮಾರಂಭದಲ್ಲಿ ಇಂದಿನ ಕಾಲದಿಂದಲೂ ಈ ಪಾರಂಪರಿಕ ಜನಕಲ್ಯಾಣ ಆರೋಗ್ಯ ಸೇವಾ ಪದ್ಧತಿ ಬಂದಿದೆ. ಪ್ರತಿ ವರ್ಷ ಮೃಗಶಿರ ಮಳೆ ಕೂಡುವ ಸಮಯದಲ್ಲಿ ಔಷಧಿ ನೀಡಲಾಗುತ್ತದೆ ಆಯುರ್ವೇದ ವನೌಷಧಿಕವು ಪುರಾತನವಾದ ಆರೋಗ್ಯ ಸಂರಕ್ಷಣೆಯಾಗಿದೆ ಎಂದು ಮಾತನಾಡಿದ ಡಾ.ಚಂದ್ರಶೇಖರ ಸರ್ಜಾಪುರ್ ಸಮಾರಂಭ ಉದ್ಘಾಟಿಸಿ ಮಾತನಾಡಿದರು ನೇತೃತ್ವ ವಹಿಸಿದ ಟ್ರಸ್ಟ್ ಅಧ್ಯಕ್ಷ ಡಾ.ಜಲಾಲುದ್ದೀನ್ ಅಕ್ಬರ ಮೃಗಶಿರಔಷಧಸೇವಿಸಿದಮೇಲ 'ಪ್ರಾಕೃತಿಕ ನಿಸರ್ಗವಾಗಿ ರೋಗ ನಿರೋಧಕ ಶಕ್ತಿ ಶರೀರದಲ್ಲಿ ಹೆಚ್ಚಾಗುತ್ತದೆ ದಮ್ಮು ಕೆಮ್ಮು ಅಲರ್ಜಿ ಹಾಗೂ ಅಸ್ತಮಾಉಬ್ಬಸನಾನಾರೋಗಗಳಿಂದಶರೀರಗುಣಮುಖವಾಗುತ್ತದೆ ಎಂದುಪ್ರಸ್ತಾವಿಕನುಡಿಗ್ಯೆರು ನಾನಾರೋಗಗಳಿಂದ ಗುಣಮುಖರಾಗುವ ರೋಗನಿರೋಧಕ ಶಕ್ತಿ ಚೈತನ್ಯ ಈ ಮಾತ್ರೆಗಳಲ್ಲಿ ಇದೆ ಎಂದಅವರು ಭಾರತೀಯ ಆಯುರ್ವೇದ ಪದ್ಧತಿ ಉಳಿಸಲು ಕರೆ ನೀಡಿದ ಡಾ ಚಂದ್ರಶೇಖರ್ ಸರ್ಜಾಪುರ್ ರವರಿಗೆ ಕೃತಜ್ಞತೆ ಹೇಳುತ್ತಾ ಅವರು ಮೃಗಶಿರ ಮಳೆಕೂಡುವ ಸಮಯದಲ್ಲಿಅಸ್ತಮಾ ಅಲರ್ಜಿ ಇತ್ಯಾದಿ ಶೀಥಲ ರೋಗಗಳಿಗೆರಾಮಬಾಣವಾದ ಉಚಿತ ಮಾತ್ರೆಗಳ ವಿತರಣೆಯನ್ನು ಮಾಡಿ ಮಾತನಾಡಿದರುಪಟ್ಟಣದ ಪುರಸಭೆ ಸಂಸ್ಕೃತ ಭವನದಲ್ಲಿ ವನೌಷ್ ದಿಕ ಆಯುರ್ವೇದ ವೈದ್ಯ ಪರಿಷತ್ ಹಾಗೂ ಜನಕಲ್ಯಾಣ ಟ್ರಸ್ಟ್ ವತಿಯಿಂದ 39ನೇ ಮೃಗಶಿರ ಮಾತ್ರೆ ಉಚಿತವಾಗಿ ವಿತರಣೆ ಮಾಡಿದ ತಾಲೂಕುಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷರಾದ ಶಿವರಾಜ್ ಕೆಂಭಾವಿಮಾತನಾಡಿರೋಗಗುಣಪಡಿಸುವಲ್ಲಿ ವನೌಷಧಿಕ ಚಿಕಿತ್ಸೆ ಶ್ರೇಷ್ಠವಾಗಿದೆ. ರೋಗಿಗಳಿಗೆ ಅಷ್ಟೇ ಅಲ್ಲದೆ ಆರೋಗ್ಯವಂತರು ಔಷಧ ಸೇವಿಸುವ ಭಾರತೀಯ ವೈದ್ಯ ಪದ್ಧತಿಯ ವಂಶಪಾರಂಪರಿಕ ಪ್ರಕೃತಿ ಚಿಕಿತ್ಸೆ ಸಂಪ್ರದಾಯದ ನೆಲ ಇದಾಗಿದೆ ಎಂದರು ಇದೆ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದಸಾಧಕರನ್ನು "ಜನಕಲ್ಯಾಣರತ್ನ"ಪ್ರಶಸ್ತಿನೀಡಿಸನ್ಮಾನಿಸಿಗೌರವಿಸಲಾಯಿತು. ಸಮಾರಂಭದ ಸಾನಿಧ್ಯ ವಹಿಸಿದ ಪೂಜ್ಯರಾದ ಚಿದಾನಂದ ಗುರುವಿನ್ ಆಶೀರ್ವಚನ ನೀಡಿದರು ಪೂಜ್ಯರಾದಶಿವಕುಮಾರ್ ನಂದಿಕೋಲ್ ಮಠ ಅವರು ಮಾತನಾಡಿ ಮನುಷ್ಯನ ರೋಗಗಳನ್ನುಗುಣಪಡಿಸುವಲ್ಲಿಆಯುರ್ವೇದಿಕ್ ಚಿಕಿತ್ಸೆ ಶ್ರೇಷ್ಠ ವಾಗಿದೆ ಈ ಚಿಕಿತ್ಸಾ ಪದ್ಧತಿ ಬಿಟ್ಟು ಇಂಗ್ಲಿಷ್ ಔಷಧಗಳಿಗೆ ಮಾರಿ ಹೋಗಿದ್ದೇವೆ ಇದರಿಂದ ಹಲವಾರು ಅಡ್ಡಪರಿಣಾಮ ಉಂಟಾಗುತ್ತವೆ ನಮ್ಮ ಋಷಿಮುನಿಗಳು ಪೂರ್ವಿಕ ವೈದ್ಯರು ಪಾರಂಪರಿಕವನ್ನು ಆಯುರ್ವೇದ ಪದ್ಧತಿ ಔಷಧಗಳನ್ನು ಕೊಡುಗೆಯಾಗಿ ನೀಡಿದ್ದಾರೆ ಇಂತಹ ಕಾಯಕದಲ್ಲಿ ಡಾ. ಜಲಾಲುದ್ದೀನ್ ಅಕ್ಬರ್ ಅವರು ಕಳೆದ 39 ವರ್ಷಗಳಿಂದ ಉಚಿತವಾಗಿ ಮೃಗಶಿರ ಮಾತ್ರೆಗಳನ್ನು ಕೊಡುತ್ತಾ ಬಂದಿರುವ ಇವರಕಾರ್ಯಶ್ಲಾಘನೀಯ ಎಂದರು ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾದ ಹನುಮಂತ ಬಡಿಗೇರ್. ಹಾಗೂ ಜನಕಲ್ಯಾಣರತ್ನ ಪ್ರಶಸ್ತಿ ಪುರಸ್ಕೃತರಾದ ರಹೀಮ್ ಶಾ ಮಕಾನ್ ದರ್ ಮುದುಗಲ್ ,ನಿಜಗುಣಿ ಸರ್ಜಾಪುರ್, ಪತ್ರಕರ್ತರಾದ ಅಮರೇಶ್ ಕರಡಕಲ್, ರಾಮು ರಾಥೋಡ್ ಇತರರು ಉಪಸ್ಥಿತರಿದ್ದರು

# ಜಿಲ್ಲಾ, ತಾಲೂಕು ಮಟ್ಟದ ಅಧಿಕಾರಿಗಳಿಗೆ ಜೂ. 20ರಂದು ಮಾಹಿತಿ ಹಕ್ಕು ಕಾಯ್ದೆಯ ಕುರಿತು ಕಾರ್ಯಾಗಾರ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 09 : ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್ ಹಾಗೂ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತರುಗಳಾದ ರಾಮನ್ ಕೆ. ಹಾಗೂ ಡಾ.ರಿಚರ್ಡ್ ವಿನ್ಸೆಂಟ್ ಡೊಸೋಜ ಇವರುಗಳು ದಿನಾಂಕ:20-06-2026(ಶನಿವಾರ ) ರಂದು ರಾಯಚೂರು ಜಿಲ್ಲೆಗೆ ಆಗಮಿಸುತ್ತಿದ್ದು, ಸದರಿ ದಿನದಂದು ರಾಯಚೂರು ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಹಾಗೂ ಜಿಲ್ಲಾ ಪಂಚಾಯತ್ ವ್ಯಾಪ್ತಿಯ, ಕಂದಾಯ ಇಲಾಖೆಯ ಮತ್ತು ತಾಲೂಕ ಮಟ್ಟದ ಎಲ್ಲಾ ಅಧಿಕಾರಿಗಳು, ಪೊಲೀಸ್



ಇಲಾಖೆಯ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಕಾರ್ಯದರ್ಶಿಗಳಿಗೆ ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಕಾರ್ಯಾಗಾರ ಹಾಗೂ ಸಂವಾದ ನಡೆಸಲು ಉದ್ದೇಶಿಸಲಾಗಿದೆ.ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಥವಾ ತಾಲೂಕ ಮಟ್ಟದ ಎಲ್ಲಾ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಈ ಕಾರ್ಯಾಗಾರಕ್ಕೆ ಮೇಲ್ಕಾಣಿಸಿದ ಎಲ್ಲಾ ಅಧಿಕಾರಿಗಳು ತಪ್ಪದೇ ಹಾಜರಾಗುವಂತೆ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಪ್ಲೋಮಾ ಕೋರ್ಸ್ ಪ್ರವೇಶಕ್ಕೆ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 09 : ರಾಯಚೂರಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ 2026-27ನೇ ಸಾಲಿಗೆ 02 ವರ್ಷಗಳ ಐ.ಟಿ.ಐ, ದ್ವಿತೀಯ ಪಿ.ಯು.ಸಿ ವಿಜ್ಞಾನ ಅಥವಾ ದ್ವಿತೀಯ ಪಿ.ಯು.ಸಿ ತಾಂತ್ರಿಕ ವಿಷಯಗಳು ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳಿಂದ ಲ್ಯಾಟರಲ್ ಎಂಟ್ರಿ ಸ್ಕೀಂ ಮುಖಾಂತರ 2ನೇ ವರ್ಷ /3ನೇ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ ಆಫ್‌ಲೈನ್ ಮೂಲಕ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಇಲಾಖೆಯ ಅಧೀಕೃತ ವೆಬ್ ಸೈಟ್‌ನಲ್ಲಿ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿ ಮತು ??ಆದ್ಯತಾ ಪಟ್ಟಿಯನ್ನು ಪ್ರವೇಶ ಬಯಸುವ ಸಂಸ್ಥೆಯ ಪ್ರಾಚಾರ್ಯರಿಗೆ ನಿಗದಿತ ದಿನಾಂಕ ಜೂನ್ 20ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.ಅರ್ಹ ಅಭ್ಯರ್ಥಿಗಳ ಮೆರಿಟ್ ಪಟ್ಟಿ ಜೂನ್ 23ರಂದು ಪ್ರಕಟಣೆ ಮಾಡಲಾಗುತ್ತದೆ. ಮೆರಿಟ್ ಪಟ್ಟಿ ಸಂಬಂಧಿಸಿದಂತೆ ಪರೊಷ್ಕರಣೆ/ತಿದ್ದಪಡೆ ಮನವಿಗೆ ಸಲ್ಲಿಸಲು ಜೂನ್ 25 ಅಂತಿಮ ದಿನಾಂಕವಾಗಿದೆ.

ಜೂನ್ 30 ಅಚಿತಿಮ ಮೆರಟ್ ಪಟ್ಟಿ ಬಿಡುಗಡೆ ಮಾಡಲಾಗುವುದು. ಜುಲೈ 01ರಿಂದ ಜುಲೈ 04ರವರೆಗೆ ಸೀಟು ಆಯ್ಕೆ ಮಾಡಿಕೊಂಡ ಅಭ್ಯರ್ಥಿಗಳು ಮೂಲ ದಾಖಲೆಗಳು ಹಾಗೂ ನಿಗದಿತ ಶುಲ್ಕದೊಂದಿಗೆ ಪ್ರವೇಶ ಪಡೆಯಬಹುದಾಗಿದೆ.ಜುಲೈ 06ರಿಂದ 10ರವರೆಗೆ ಸೀಟುಗಳು ಭರ್ತಿಯಾಗದೇ ಉಳಿಕೆಯಾದಲ್ಲಿ ಪ್ರಾಂಶುಪಾಲರ ಹಂತದಲ್ಲಿಯೇ ಆಫ್‌ಲೈನ್ ಮೂಲಕ ಸೀಟು ಹಂಚಿಕೆ ಮಾಡಲು ಪ್ರಾರಂಭ ಮತ್ತು ಅಂತಿಮ ದಿನಾಂಕವಾಗಿದೆ.

ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ ವಿಳಾಸ: dtek.karnataka.gov.inordtetech.karnataka.gov.in/kartechnicalನಲ್ಲಿ ವೀಕ್ಷಣೆ ಮಾಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಸಂಸ್ಥೆಯ ಪ್ರಾಂಶುಪಾಲರನ್ನು ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ 11ರಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೇರ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 09 : ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಜೂನ್ 11ರ ಬೆಳಿಗ್ಗೆ 10ಗಂಟೆಯಿಂದ ಮಧ್ಯಾಹ್ನ 1 ಗಂಟೆವರೆಗೆ ನೇರ ಸಂದರ್ಶನ ಆಯೋಜಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಕೋರಲಾಗಿದೆ.

ನೇರ ಸಂದರ್ಶನದಲ್ಲಿ ಎರಡು ಖಾಸಗಿ ಕಂಪನಿಗಳು ಭಾಗವಹಿಸಿ ತಮ್ಮಲ್ಲಿ ಖಾಲಿ ಇರುವ ಹುದ್ದೆಗಳನ್ನು ನೇರವಾಗಿ ಭರ್ತಿ ಮಾಡಿಕೊಳ್ಳಲಿದ್ದಾರೆ.

ಅರ್ಹತೆಗಳು: ಎಸ್.ಎಸ್.ಎಲ್.ಸಿ, ಪಿ.ಯು.ಸಿ ಹಾಗೂ ಎಲ್ಲಾ ಪದವೀಧರ ಆಸಕ್ತ 18 ರಿಂದ 28 ವರ್ಷಗಳ ವರೆಗಿನ ಅಭ್ಯರ್ಥಿಗಳು ಈ ಮೇಳದಲ್ಲಿ ಭಾಗವಹಿಸಬಹುದಾಗಿದೆ.ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು ಮತ್ತು ತಮ್ಮ ಬಯೋಡೆಟಾ, ಆಧಾರ್ ಕಾರ್ಡ್ ಪ್ರತಿ, ಭಾವಚಿತ್ರಗನ್ನು ಸಲ್ಲಿಸಬೇಕು. ನೇರ ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ, ಬದಲಾಗಿ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬಹುದು.

# ಉಚಿತ ಪಡಿತರ ಹಂಚಿಕೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯ ಪಡಿತರ ಚೀಟಿದಾರರಿಗೆ ಜೂನ್ 2026 ರ ಮಾಹೆಯ ಪಡಿತರ ಆಹಾರಧಾನ್ಯ ಬಿಡುಗಡೆಯಾಗಿದ್ದು, ಪಡಿತರದಾರರು ತಮಗೆ ನಿಗಧಿಪಡಿಸಿದ ಪ್ರಮಾಣದಲ್ಲಿ ಆಹಾರಧಾನ್ಯವನ್ನು ಸಂಬಂಧಿಸಿದ ನ್ಯಾಯಬೆಲೆ ಅಂಗಡಿಗಳಲ್ಲಿ ಉಚಿತವಾಗಿ ಪಡೆಯಬಹುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಕೆ.ಆರ್.ದೇವರಾಜ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*ಪಡಿತರ ಹಂಚಿಕೆಯ ವಿವರ:*

ಆದ್ಯತಾ (ಪಿ.ಹೆಚ್.ಹೆಚ್) ಬಿ.ಪಿ.ಎಲ್ ಚೀಟಿಗಳು: ಸೆಂಟ್ರಲ್ (ಕೇಂದ್ರ) ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 10 ಕೆ.ಜಿ. ಅಕ್ಕಿ (ಉಚಿತ), ಸ್ಟೇಟ್ (ರಾಜ್ಯ) ಪಡಿತರ ಚೀಟಿಯ ಪ್ರತಿ ಸದಸ್ಯರಿಗೆ 10 ಕೆ.ಜಿ. ಅಕ್ಕಿ (ಉಚಿತ).

ಅಂತ್ಯೋದಯ (ಎಎವೈ) ಚೀಟಿಗಳು (ಸದಸ್ಯರ ಸಂಖ್ಯೆಯ ಆಧಾರದ ಮೇಲೆ): 1 ರಿಂದ 3 ಸದಸ್ಯರಿರುವ ಪಡಿತರ ಚೀಟಿಗೆ ಮೇ ಮಾಹೆಯಲ್ಲಿಯೇ ವಿತರಿಸಿರುವುದರಿಂದ ಜೂನ್‌ನಲ್ಲಿ ಹಂಚಿಕೆ ಇರುವುದಿಲ್ಲ. 04 ಸದಸ್ಯರಿರುವ ಪಡಿತರ ಚೀಟಿಗೆ 10 ಕೆ.ಜಿ. ಅಕ್ಕಿ (ಉಚಿತ), 05 ಸದಸ್ಯರಿರುವ ಪಡಿತರ ಚೀಟಿಗೆ 30 ಕೆ.ಜಿ. ಅಕ್ಕಿ (ಉಚಿತ), 06 ಸದಸ್ಯರಿರುವ ಪಡಿತರ ಚೀಟಿಗೆ 50 ಕೆ.ಜಿ. ಅಕ್ಕಿ (ಉಚಿತ), 07 ಸದಸ್ಯರಿರುವ ಪಡಿತರ ಚೀಟಿಗೆ 70 ಕೆ.ಜಿ. ಅಕ್ಕಿ (ಉಚಿತ), 08 ಸದಸ್ಯರಿರುವ ಪಡಿತರ ಚೀಟಿಗೆ 90 ಕೆ.ಜಿ. ಅಕ್ಕಿ (ಉಚಿತ), 09 ಸದಸ್ಯರಿರುವ ಪಡಿತರ ಚೀಟಿಗೆ 110 ಕೆ.ಜಿ. ಅಕ್ಕಿ (ಉಚಿತ), 10 ಸದಸ್ಯರಿರುವ ಪಡಿತರ ಚೀಟಿಗೆ 130 ಕೆ.ಜಿ. ಅಕ್ಕಿ (ಉಚಿತ).

ಜೂನ್–2026 ರ ಮಾಹೆಯಲ್ಲಿ ಮೇ ಮತ್ತು ಜೂನ್ ಎರಡೂ ತಿಂಗಳ ಅನ್ನಭಾಗ್ಯ ಅಕ್ಕಿಯನ್ನು ಒಟ್ಟಿಗೆ ಹಂಚಿಕೆ ಮಾಡಲಾಗುತ್ತಿದೆ. ಎಲ್ಲಾ ಪಿ.ಹೆಚ್.ಹೆಚ್ (ಬಿ.ಪಿ.ಎಲ್) ಪಡಿತರ ಚೀಟಿದಾರರಿಗೆ ಪ್ರತಿ ಸದಸ್ಯರಿಗೆ 10 ಕೆ.ಜಿ ಯಂತೆ ಅಕ್ಕಿ ವಿತರಿಸಲಾಗುತ್ತದೆ. ಆದರೆ, ಅಂತ್ಯೋದಯ ಪಡಿತರ ಚೀಟಿ ಹೊಂದಿರುವ 1 ರಿಂದ 3 ಸದಸ್ಯರ ಕುಟುಂಬಗಳಿಗೆ ಮೇ 2026 ರಲ್ಲಿಯೇ ವಿತರಣೆ ಮಾಡಿರುವುದರಿಂದ ಈ ತಿಂಗಳು ಹಂಚಿಕೆ ಇರುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

ಪಡಿತರ ಚೀಟಿದಾರರು ಆಹಾರಧಾನ್ಯ ಪಡೆಯುವಾಗ ಕೇವಲ ಒಂದು ಬಾರಿ ಮಾತ್ರ ಬಯೋಮೆಟ್ರಿಕ್ ನೀಡಬೇಕು ಮತ್ತು ಬಯೋಮೆಟ್ರಿಕ್ ನೀಡಿದ ತಕ್ಷಣವೇ ತಮ್ಮ ಪಡಿತರವನ್ನು ಪಡೆದುಕೊಳ್ಳಬೇಕು.

ಪಡಿತರ ವಿತರಣೆಯಲ್ಲಿ ಯಾವುದೇ ಲೋಪದೋಷಗಳು ಅಥವಾ ದೂರುಗಳಿದ್ದಲ್ಲಿ ಸಾರ್ವಜನಿಕರು ಸಹಾಯವಾಣಿ ಸಂಖ್ಯೆ 1967 ಕ್ಕೆ ಕರೆ ಮಾಡಬಹುದು ಅಥವಾ ಸಂಬಂಧಿಸಿದ ತಾಲ್ಲೂಕಿನ ತಹಶೀಲ್ದಾರರ ಕಚೇರಿಯ ಆಹಾರ ಶಾಖೆಯನ್ನು ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರಜಗಿ: ವಿಜ್ಞಾನ ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.09–ಅಫಜಲಪುರ ತಾಲೂಕಿನ ಕರಜಗಿ ಮೊರಾರ್ಜಿ ದೇಸಾಯಿ ಆಂಗ್ಲ ಮಾಧ್ಯಮ ವಸತಿ ಶಾಲೆಯಲ್ಲಿ ಖಾಲಿಯಿರುವ ವಿಜ್ಞಾನ ಅತಿಥಿ ಶಿಕ್ಷಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಅಫಜಲಪುರ ತಾಲೂಕಿನ ಕರಜಗಿ ಮೊರಾರ್ಜಿ ದೇಸಾಯಿ ಆಂಗ್ಲ ಮಾಧ್ಯಮ ವಸತಿ ಶಾಲೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಈ ಅತಿಥಿ ಶಿಕ್ಷಕರ ಹುದ್ದೆಯು ತಾತ್ಕಾಲಿಕವಾಗಿದ್ದು, ಬಿ.ಎಸ್ಸಿ. (ಸಿ.ಬಿ.ಝಡ್.) ಹಾಗೂ ಬಿ.ಇಡಿ. ಮುಗಿಸಿದ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಆಯ್ಕೆಯಾಗುವ ಶಿಕ್ಷಕರಿಗೆ ಮಾಸಿಕ 16,650 ಗೌರವಧನ ನೀಡಲಾಗುತ್ತದೆ. ಕ್ರೈಸ್ ವಸತಿ ಶಾಲೆಗಳಲ್ಲಿ ಕೆಲಸ ನಿರ್ವಹಿಸಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುತ್ತದೆ. ಅರ್ಹ ಅಭ್ಯರ್ಥಿಗಳು 2026ರ ಜೂನ್ 12ರ ರೊಳಗಾಗಿ ಈ ವಸತಿ ಶಾಲೆಯ ಪ್ರಾಂಶುಪಾಲರಿಗೆ ನೇರವಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9880204478 ಗೆ ಸಂಪರ್ಕಿಸಲು ಕೋರಲಾಗಿದೆ.

**IN THE COURT OF THE SENIOR CIVIL JUDGE & JMFC AT BASAVAKALYAN**
**Crl. Misc. No.462/2026**

Petitioner:
P1. Raju S/o Dharmanna
P2. ASHABAI W/o Raju Toriwadi
P3. Sachin S/o Dharmanna
P4. Annapurna wo. Rajkumar
P5.Channamma w/o Rajkumar
P6.Champa w/o. Dharmanna All R/o village Hulgutti wadi Tq: Basavakalyan, Dist: Bidar.

**V/S**

Respondent:
**The Tahasildar, Basavakalyan.**
**Claim: Issue of Death Certificate of the Brother of petitioner No.1 Petition under sec. 13(3) of Birth and Death Registration Act. 1969**

**PAPER PUBLICATION**

This is to inform to the public at large, the Brother of the petitioner No.1 by name "Shankar s/o Dharamanna", who was died on 15/03/2020, in our house at village Hulgutti wadi, Tq: Basavakalyan, Dist; Bidar leaving behind the petitiones, as her Brother the said P1. Raju S/o Dharmanna and 5 others, all are R/o Hulgutti wadi, Tq. Basavakalyan, Dist. Bidar has filed the above case before the Hon'ble Senior Civil Judge Court at Basavakalyan, for issuing direction to the respondent for issue of death certificate. if anybody got objection for the same, they are hereby requested to come and appear before the Hon'ble court on or before 15.07.2026 at 11-00 AM.Date: 08-06-2026

**//By Order of the Court//**
**Chief Ministerial Officer Senior Civil Judge & JMFC Court Basavakalyan**

# ಹಳ್ಳದ ಸೇತುವೆ ಸಂಪೂರ್ಣ ಶಿಥಿಲ:ಸವಾರರೇ ಎಚ್ಚರ

ಸುರೇಶ ಕೆ. ವಿ

• ಮಲ್ಲಮ್ಮ ನುಡಿ ವಾರ್ತೆಮುದಗಲ್



ಮುಂಡರಗಿ – ಚಿಕ್ಕಹೆಸರೂರು ರಾಜ್ಯ ಹೆದ್ದಾರಿಯ ರಸ್ತೆಯು ಪಟ್ಟಣ ಸಮೀಪದ ಬನ್ನಿಗೋಳ ಗ್ರಾಮದ ಹಳ್ಳದ ಸೇತುವೆ ಸಂಪೂರ್ಣ ಶಿಥಿಲಗೊಂಡಿದ್ದು ವಾಹನ ಸವಾರರು ಪ್ರತಿನಿತ್ಯ ಜೀವ ಭಯದಲ್ಲಿ ಸಂಚಾರ ಮಾಡಬೇಕಾಗಿದೆ ಆದರೆ ಲೋಕೋಪಯೋಗಿ ಇಲಾಖೆ (ಪಿಡಬ್ಲ್ಯೂಡಿ) ಅಧಿಕಾರಿಗಳು ಮಾತ್ರ ನಿರ್ಲಕ್ಷವಹಿಸಿದ್ದಾರೆ ಯಾವುದಾದರೂ ಅನಾಹುತ ನಂತರ ಇಚ್ಚೆತ್ತುಕೊಳ್ಳುವರೇ ಪಿಡಬ್ಲ್ಯೂಡಿ ಅಧಿಕಾರಿಗಳು ಎನ್ನುವ ಮಾತು ಸಾರ್ವಜನಿಕ ವಲಯದಲ್ಲಿ ಕೇಳಿರುತ್ತಿದೆ

ಬೆಂಗಳೂರು,ಹುಬ್ಬಳ್ಳಿ, ಸವದತ್ತಿ, ಅಂಕಲಿಮಠ,ಮೂದೇನೂರ ು,ಸೇರಿದಂತೆ ಸುಮಾರು 20ಕ್ಕೂ ಸಾರಿಗೆ ಇಲಾಖೆ. ವಾಹನಗಳು ನೂರಾರು ಪ್ರಯಾಣಿಕರನ್ನು ತುಂಬಿಕೊಂಡು ಹಾಗೂ ಬಾರಿ ಗ್ರಾತದ ವಿಡೋ ಪ್ಯಾನ್ ಲಾರಿಗಳು, ಖಾಸಗಿ ವಾಹನಗಳು ಕೆಳಗಡೆ ಶಿಥಿಲಗೊಂಡ ಹಳ್ಳದ ಸೇತುವೆ ಮೇಲೆ ಸಂಚಾರ ಮಾಡುತ್ತಿದೆ ಹಾಗೂ ಮಳೆ ಬಂದರೆ ಸಾಕು ಮೂರು ನಾಲ್ಕು ಘಂಟೆ ಸಂಚಾರ ಬಂದಾಗಿ ತೊಂದರೆ ಅನುಭವಿಸುವಂತಾಗಿದೆ, ಜಮೀನು ಕೆಲಸಕ್ಕೆ ಹೋದ ರೈತರು ಮತ್ತು ಕುರಿ ಕಾಯುವವರು ಜೀವ ಕೈನಲ್ಲಿ ಹಿಡಿದುಕೊಂಡು ಹಳ್ಳ ದಾಟ ಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಸದರಿ ಸೇತುವೆ ಸಮಸ್ಯೆ ಕುರಿತು ಅನೇಕ ಬಾರಿ ಲಿಂಗಸುಗೂರು ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಮಾಹಿತಿ ನೀಡಿದರು ಯಾವುದೇ ಪ್ರಯೋಜನವಾಗಿಲ್ಲ ಎಂದು ವಾಹನ ಸವಾರರು ಆರೋಪಿಸಿದರು

ಗುತ್ತಿಗೆದಾರ ಹೂನೂರು ಗ್ರಾಮದಲ್ಲಿ ಸಿಸಿ ರಸ್ತೆ ಮಾಡದ ಹಿನ್ನಲೆಯಲ್ಲಿ ಮಳೆ ಬಂದರೆ ಕೆಸರುಗದ್ದೆಯಂತಾಗಿ ಜನರಿಗೆ ಓಡಾಡಲು ಹಾಗೂ ವಾಹನ ಸವಾರರಿಗೆ ಸಂಚಾರ ಮಾಡಲು ತುಂಬಾ ತೊಂದರೆ–ಯಾಗಿದೆ ಚರಂಡಿ ನಿರ್ಮಾಣ ಮಾಡದ ಕಾರಣ ಅನೇಕ ಬಾರಿ ಲಾರಿಗಳು ಈ ರಸ್ತೆಯಲ್ಲಿ ಸಿಲುಕುಕೊಂಡು ಸಂಚಾರ ಬಂದಾಗಿದೆ ಸಮಸ್ಯೆ ಹೂನೂರು ಗ್ರಾಮಸ್ಥರು ಚುನಾಯಿತ ಜನಪ್ರತಿನಿಧಿಗಳಿಗೆ ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಹೇಳಿದರು ದುರಸ್ಥಿ ಕಾರ್ಯಕ್ಕೆ ಮುಂದಾಗಿಲ್ಲ ಎಂದು ಆರೋಪಿಸಿದರು

ವರದಿ ನಂತರ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಎಚ್ಚೆತ್ತುಕೊಳ್ಳುತ್ತಾರೆ ಕಾದು ನೋಡಬೇಕು.



" ಈ ಕೂಡಲೆ ಲಿಂಗಸುಗೂರು ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ಹೂನೂರು ಗ್ರಾಮದಲ್ಲಿ ಸಿಸಿ ರಸ್ತೆ ಹಾಗೂ ಬನ್ನಿಗೋಳ ಹಳ್ಳಕ್ಕೆ ಸೇತುವೆ ನಿರ್ಮಿಸಿ ವಾಹನ ಸವಾರರ ಜೀವ ಉಳಿಸಬೇಕು – ಬಸವರಾಜ ಬಂಕದಮನಿ ಅಧ್ಯಕ್ಷರು ಕರ್ನಾಟಕ ದಲಿತ ಸಂಘರ್ಷ ಸಮಿತಿ ಮುದಗಲ್ ಘಟಕ "

# ಕಾಮಗಾರಿ ನಿರ್ವಹಿಸಿದ ಹಣ ನೀಡುವಂತೆ ಗುತ್ತಿಗೆದಾರರ ಧರಣಿ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ಜೂ. 09.– ಎನ್ ಡಿ ವಡ್ಡರ್ ಕಂಪನಿಯಲ್ಲಿ ಕಾಲುವೆ ಕಾಮಗಾರಿಯನ್ನು ಉಪಗುತ್ತಿಗೆ ಪಡೆದು ಕಾಮಗಾರಿ ನಿರ್ವಹಿಸಿದ ದೇವದುರ್ಗ ತಾಲೂಕಿನ ಗುತ್ತಿಗೆದಾರರಿಗೆ ನೀಡಬೇಕಾಗಿದ್ದ 20 ಕೋಟಿ ರೂಪಾಯಿಗೂ ಅಧಿಕ ಹಣ ನೀಡದೆ ಸತಾಯಿಸುತ್ತಿರುವ ಎನ್ ಡಿ ವಡ್ಡರ ಕಂಪನಿಗೆ ಸೇರಿದ ಲಿಂಗಸಗೂರಿನ ಕಾರ್ಯಾಲಯದ ಮುಂದೆ ಗುತ್ತಿಗೆದಾರರು ಧರಣಿ ನಡೆಸಿದರು. ಸುಮಾರು ಮೂರು ವರ್ಷಗಳ ಹಿಂದೆ ಎನ್ ಡಿ ವಡ್ಡರ್ ಕಂಪನಿ ಕಾಲುವೆಯ ಕಾಮಗಾರಿಗಳನ್ನು ಟೆಂಡರ್ ಪಡೆದುಕೊಂಡಿದ್ದು ಅದರಲ್ಲಿ ಡಿಸ್ಟ್ರಿಬ್ಯೂಟರ್ 17 18 ರಲ್ಲಿಯ ಉಪ ಕಾಲುವೆಗಳ ಕಾಮಗಾರಿಗಳನ್ನು ದೇವದುರ್ಗ ತಾಲೂಕಿನ ಸುಮಾರು 25ಕ್ಕೂ ಅಧಿಕ ಉಪ ಗುತ್ತಿಗೆದಾರರು ಅಗ್ರಿಮೆಂಟ್ ಮೂಲಕ ಕಾಮಗಾರಿ ಪಡೆದು ಕಾಮಗಾರಿ ನಿರ್ವಹಿಸಿದ್ದು ಈಗ ಕಾಮಗಾರಿಯ ಹಣ ನೀಡುವಂತೆ ಎನ್ ಡಿ ವಡ್ಡರ್ ಕಂಪನಿಯ ಮಾಲೀಕರಾದ ಕರಿಯಪ್ಪ ಅವರಿಗೆ ಎರಡು ವರ್ಷಗಳಿಂದ ಮನವಿ ಮಾಡಿಕೊಂಡರೂ ಇನ್ನು ಕಾಮಗಾರಿಯ ಬಿಲ್ ಆಗಿಲ್ಲ ಎಂದು ಉತ್ತರಿಸುತ್ತಿದ್ದು ಇದರಿಂದಾಗಿ ಅಲ್ಲಿ ಇಲ್ಲಿ ಸಾಲ ಪಡೆದು ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರಿಗೆ ತುಂಬಾ ತೊಂದರೆಯಾಗಿದ್ದು ಕೂಡಲೇ ನಾವು ಕಾಮಗಾರಿ ನಿರ್ವಹಿಸಿದ ಹಣ ನೀಡುವಂತೆ ಅವರು ಆಗ್ರಹಿಸಿದರು.

ನಮಗೆ ಬರಬೇಕಾಗಿದ್ದ ಕಾಮಗಾರಿ ನಿರ್ವಹಿಸಿದ ಹಣಕ್ಕಾಗಿ ಈ ಹಿಂದೆಯೇ ಧರಣಿ ನಡೆಸಿದ್ದೆವು. ಆದರೆ ಬಿಜೆಪಿಯ ನಾಯಕರೊಬ್ಬರ ಮಧ್ಯಸ್ಥಿಕೆಯಿಂದಾಗಿ ಹಣ ಕೊಡಿಸುವ ಭರವಸೆ ನೀಡಿದ್ದರಿಂದಾಗಿ ಪ್ರತಿಭಟನೆಯನ್ನು ಕೈ ಬಿಟ್ಟಿದ್ದೆವು. ಆದರೆ ಇಲ್ಲಿಯವರೆಗೂ ನಮಗೆ ಬರಬೇಕಾದ ಹಣ ಬಾರದೆ ಇರುವುದರಿಂದಾಗಿ ಧರಣಿಗೆ ಮುಂದಾಗಿದ್ದೇವೆ. ನಮಗೆ ಬರಬೇಕಾದ ಕಾಮಗಾರಿ ನಿರ್ವಹಿಸಿದ ಹಣ ಬರುವವರೆಗೂ ಧರಣಿ ಮುಂದುವರಿಸುತ್ತೇವೆಂದು ಗುತ್ತಿಗೆದಾರರು ತಿಳಿಸಿದರು.

ಈ ಸಂದರ್ಭದಲ್ಲಿ ಗುತ್ತಿಗೆದಾರರಾದ ಮಲ್ಲಿಕಾರ್ಜುನ ಪಾಟೀಲ್, ಗುರುನಾಥ ರೆಡ್ಡಿ ಮಲದಕಲ್, ಶರಣಗೌಡ ಸಂಕೇಶ್ವರ ಹಾಳ, ತುಕಾರಾಂ ಜಿನ್ನಾಪುರ್, ಮರಿಯಪ್ಪ ಮಲದಕಲ್, ವೀರೇಶ್ ನಾಯಕ್, ಚಂದ್ರಕಾಂತ ಸ್ವಾಮಿ ಮಸರಕಲ್, ಪರಮಾನಂದ ಸಂಕೇಶ್ವರ ಹಾಳ್, ಆಂಜನೇಯ ಚಲವಾದಿ, ಶಿವಕುಮಾರ ಅಮರಾಪುರ, ರಂಗಪ್ಪ ಮುಸ್ತೂರು, ರವಿಚಂದ್ರ ಮಲದಕಲ್, ಶರಣಗೌಡ ಯರಮರಸ್, ರೆಡ್ಡಿ ರಾಮದುರ್ಗ, ವೀರನಗೌಡ ರಾಮದುರ್ಗ, ಶಫಿ ಮಲದಕಲ್, ಭೀಮಣ್ಣ ಮಲದಕಲ್, ಅಮರೇಶ ಇಟಗಿ, ಇನ್ನು ಹಲವಾರು ಗುತ್ತಿಗೆದಾರರು ಇದ್ದರು.

# ಜಮೀರ್ ಅಹ್ಮದ್ ರಿಗೆ ಸಚಿವ ಸ್ಥಾನ ನೀಡದಿದ್ದರೆ ಕಾಂಗ್ರೇಸ್ ಗೆ ತಕ್ಕ ಪಾಠ :ಹುಸೇನ್ ಬಾಷಾ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ




ಜೂ. 09.– ಮುಸ್ಲಿಂ ಸಮಾಜದ ಪ್ರಭಾವಿ ಪ್ರಶ್ನಾತೀತ ನಾಯಕರು ಚಾಮರಾಜಪೇಟೆ ಶಾಸಕರಾದ ಜಮೀರ್ ಅಹ್ಮದ್ ಖಾನ್ ಅವರಿಗೆ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಸಚಿವ ಸಂಪುಟದಲ್ಲಿ ಉಪಮುಖ್ಯಮಂತ್ರಿ ಸ್ಥಾನದ ಜೊತೆಗೆ ಸಚಿವ ಸ್ಥಾನ ನೀಡಬೇಕೆಂದು ಅಂಜುಮನ್–ಎ ಮುಸ್ಲಿಮೀನ್ ತಾಲೂಕ ಕಮಿಟಿಯ ಅಧ್ಯಕ್ಷ ಹುಸೇನ್ ಭಾಷಾ ಒತ್ತಾಯಿಸಿದ್ದಾರೆ. ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಕರ್ನಾಟಕದ ಪ್ರಭಾವಿ ನಾಯಕ ಹಿಂದುಳಿದ ವರ್ಗ ದೀನದಲಿತರ ಹಾಗೂ ಅಲ್ಪಸಂಖ್ಯಾತರ ಧ್ವನಿಯಾಗಿ ಸದಾ ಕಾಲ ಸಮಾಜ ಸೇವೆಯಲ್ಲಿ ತೊಡಗಿರುವ ಶಾಸಕ ಜಮೀರ್ ಅಹ್ಮದ್ ಖಾನ್ ಅವರಿಗೆ ಸಂಪುಟದಲ್ಲಿ ಸಚಿವ ಸ್ಥಾನ ತಪ್ಪಿರುವುದು ಮುಸ್ಲಿಂ ಸಮಾಜಕ್ಕೆ ತೀವ್ರ ನೋವಿನ ಸಂಗತಿಯಾಗಿದೆ.ಮುತ್ಸದ್ದಿ ರಾಜಕಾರಣಿಯಾಗಿ ಸಾಮಾಜಿಕ ಕಳಕಳಿಯುಳ್ಳ ಮುಸ್ಲಿಂ ಸಮಾಜದ ಹಿರಿಯ ನಾಯಕನನ್ನು ಕ್ಷುಲ್ಲಕ ಕಾರಣಗಳ ನೆಪವೊಡ್ಡಿ ರಾಜಕೀಯ ದ್ವೇಷಕ್ಕೆ ಸಚಿವ ಸ್ಥಾನದ ಮೊದಲ ಪಟ್ಟಿಯಿಂದ ಅವರನ್ನು ಕೈ ಬಿಟ್ಟಿರುವುದು ಆಘಾತಕಾರಿ ಸಂಗತಿಯಾಗಿದೆ. ಮೊನ್ನೆ ನಡೆದ ಕೇರಳದ ಸಾರ್ವತ್ರಿಕ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ನೇತೃತ್ವದ ಯುಡಿಎಫ್ ಪಕ್ಷ ಅಧಿಕಾರಕ್ಕೆ ಬರಲು ಜಮೀರ್ ಅಹ್ಮದವರ ಶ್ರಮವೇ ಕಾರಣ.

ಬಾಗಲಕೋಟ ಹಾಗೂ ದಾವಣಗೆರೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಜಮೀರ್ ಅಹ್ಮದವರ ಸಂಘಟನಾತ್ಮಕ ಪ್ರಮಾಣಿಕ ಪಕ್ಷ ಸಂಘಟನೆ ಕಾರಣವಾಗಿದೆ. ಇತಿಹಾಸದಿಂದಲೂ ಮುಸ್ಲಿಂ ಸಮಾಜವು ಪ್ರತಿಯೊಂದು ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲವಾಗಿ ನಿಲ್ಲುತ್ತಿದ್ದು ಮುಸ್ಲಿಂ ಸಮುದಾಯವನ್ನು ಕಾಂಗ್ರೆಸ್ ಪಕ್ಷ ಕಡೆಗಣಿಸುತ್ತಾ ಬಂದಿದೆ.


ಕಾಂಗ್ರೆಸ್ ಪಕ್ಷಕ್ಕೆ ಮುಸ್ಲಿಂ ಸಮುದಾಯ ಅನಿವಾರ್ಯವೇ ಹೊರತು ಮುಸ್ಲಿಂ ಸಮುದಾಯಕ್ಕೆ ಕಾಂಗ್ರೆಸ್ ಪಕ್ಷ ಅನಿವಾರ್ಯವಲ್ಲ. ಅಧಿಕಾರಕ್ಕೆ ಬರುವವರೆಗೂ ಒಂದು ತರಹ, ಅಧಿಕಾರಕ್ಕೆ ಬಂದ ಮೇಲೆ ಮತ್ತೊಂದು ತರಹ ನಡೆದುಕೊಳ್ಳುವ ಕಾಂಗ್ರೆಸ್ ಪಕ್ಷದ ತನ್ನ ಮಲತಾಯಿ ಧೋರಣೆಗಳು ಹೀಗೆ ಮುಂದುವರೆದರೆ ಮುಂಬರುವ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸಮಾಜದ ವತಿಯಿಂದ ತಕ್ಕ ಪಾಠ ಕಲಿಸಬೇಕಾಗುತ್ತದೆ ಎಂದು ಅವರು ಎಚ್ಚರಿಸಿದರು.

ಕೂಡಲೇ ಕಾಂಗ್ರೆಸ್ ಹೈಕಮಾಂಡ್ ಎಚ್ಚೆತ್ತುಕೊಂಡು ಮುಸ್ಲಿಂ ಸಮುದಾಯದ ನಾಯಕರಾದ ಜಮೀರ್ ಅಹ್ಮದ್ ಖಾನ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ಜೊತೆಗೆ ಸಚಿವ ಸ್ಥಾನ ನೀಡಿ ಸಮುದಾಯಕ್ಕಾಗಿರುವ ಅನ್ಯಾಯವನ್ನು ಸರಿಪಡಿಸಬೇಕು. ಇಲ್ಲದಿದ್ದರೆ ಮುಂಬರುವ ದಿನಗಳಲ್ಲಿ ನಮ್ಮ ಸಮುದಾಯ ರಸ್ತೆಗಿಳಿದು ಉಗ್ರವಾದ ಪ್ರತಿಭಟನೆಯನ್ನು ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಅವರು ಎಚ್ಚರಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜೆ ಬಾಬು ಹಟ್ಟಿ, ರಹಿಮಾನ್ ಸಾಬ್ ಮುಲ್ಲಾ ಚಿತ್ತಾಪುರ, ಆನ್ಸರುದ್ದೀನ್, ಮಹಮ್ಮದ್ ಮುಸ್ತಫಾ, ನೂರು ಸಾಬ್ ಮಡಗಂಟನಾಳ, ಮಹಮ್ಮದ್ ರಸೂಲ್, ಮಹಮ್ಮದ್ ಯೂಸೂಫ್ ಗೌಳಿ, ಅಮೀನ್ ಸಾಬ್ ಗೌಳಿ, ಸಲೀಂ, ಜಾವೇದ್, ಖಾಜಾ ಅಲಿ, ಅಬ್ಬಾಸ್ ಸೇರಿದಂತೆ ಇತರರು ಉಪಸಿತರಿದ್ದರು.

# ಪುರುಷರ ಹಿತರಕ್ಷಣಾ ಜಿಲ್ಲಾ ಸಮಿತಿ ರಚನೆ; ರಾಮಕೃಷ್ಣ ಅಧ್ಯಕ್ಷರಾಗಿ ನೇಮಕ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಸಮಾಜದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯಗಳ ವಿರುದ್ಧ ಕಾನೂನು ಹಾಗೂ ವಿವಿಧ ಸಂಘ–ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿರು ವಂತೆಯೇ, ಕಾನೂನುಗಳ ದುರ್ಬಳಕೆ ಅಥವಾ ಇತರೆ ಕಾರಣಗಳಿಂದ ಸಂಕಷ್ಟಕ್ಕೆ ಸಿಲುಕುವ ಪುರುಷರಿಗೂ ಸೂಕ್ತ ರಕ್ಷಣೆ ಹಾಗೂ ಕಾನೂನು ನೆರವು ದೊರೆಯಬೇಕೆಂಬ ಉದ್ದೇಶದಿಂದ ರಾಷ್ಟ್ರೀಯ ಮಾನವ ಹಕ್ಕುಗಳ ಪುರುಷರ ಹಿತರಕ್ಷಣಾ ಸಮಿತಿಯ ಬಳ್ಳಾರಿ ಜಿಲ್ಲಾ ಘಟಕವನ್ನು ರಚಿಸಲಾಗಿದೆ ಎಂದು ಸಮಿತಿಯ ರಾಜ್ಯದ ಅಧ್ಯಕ್ಷೆ ರಜಿನಿ ರಾಜ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸೋಮವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೆಲ ಸಂದರ್ಭಗಳಲ್ಲಿ ಕೌಟುಂಬಿಕ ಕಲಹ, ಸುಳ್ಳು ದೂರುಗಳು ಹಾಗೂ ಕಾನೂನುಗಳ ದುರ್ಬಳಕೆಯಿಂದ ಪುರುಷರು ಮಾನಸಿಕ ಮತ್ತು ಸಾಮಾಜಿಕವಾಗಿ ತೊಂದರೆ ಅನುಭವಿಸುತ್ತಾರೆ. ಇಂತಹ ಸಂದರ್ಭಗಳಲ್ಲಿ ಅವರಿಗೆ ಕಾನೂನು ಸಲಹೆ, ಸಮಾಲೋಚನೆ ಹಾಗೂ ಅಗತ್ಯ ಮಾರ್ಗದರ್ಶನ ನೀಡುವ ನಿಟ್ಟಿನಲ್ಲಿ ಸಮಿತಿ ಕಾರ್ಯನಿರ್ವಹಿಸಲಿದೆ ಎಂದು ಹೇಳಿದರು.

ದೌರ್ಜನ್ಯ ಅಥವಾ ಕಿರುಕುಳಕ್ಕೆ ಒಳಗಾಗಿರುವ ಪುರುಷರ ಅಹವಾಲುಗಳನ್ನು ಆಲಿಸಿ, ಸಂಬಂಧಪಟ್ಟ ಕಾನೂನುಗಳ ಅಡಿಯಲ್ಲಿ ನ್ಯಾಯ ದೊರಕಿಸಿಕೊಡುವ ಪ್ರಯತ್ನ ಮಾಡಲಾಗುವುದು. ಕುಟುಂಬ ವ್ಯವಸ್ಥೆಯನ್ನು ಬಲಪಡಿಸುವುದು ಮತ್ತು ಪರಸ್ಪರ ಗೌರವದ ಮನೋಭಾವ ಬೆಳೆಸುವುದೂ ಸಮಿತಿಯ ಉದ್ದೇಶವಾಗಿದೆ ಎಂದು ತಿಳಿಸಿದರು.

ಸಮಿತಿಯ ಬಳ್ಳಾರಿ ಜಿಲ್ಲಾ ಅಧ್ಯಕ್ಷರಾಗಿ ಬ್ಯಾಂಕ್‌ನ ನಿವೃತ್ತ ಉದ್ಯೋಗಿ ರಾಮಕೃಷ್ಣ ಅವರನ್ನು ನೇಮಕ ಮಾಡಲಾಗಿದೆ. ಅವರು ಜಿಲ್ಲೆಯ ವಿವಿಧ ಭಾಗಗಳಲ್ಲಿ ಸಮಿತಿಯ ಸಂಘಟನೆಯನ್ನು ಬಲಪಡಿಸಿ, ಸದಸ್ಯತ್ವ ಅಭಿಯಾನ ನಡೆಸಲಿದ್ದಾರೆ ಎಂದು ಹೇಳಿದರು.

ಅಜೀವ ಸದಸ್ಯತ್ವಕ್ಕಾಗಿ 2 ಸಾವಿರ ಶುಲ್ಕ ನಿಗದಿಪಡಿಸಲಾಗಿದ್ದು, ಬಳ್ಳಾರಿ ಜಿಲ್ಲೆಯಲ್ಲಿ ಈಗಾಗಲೇ ಏಳು ಮಂದಿ ಸದಸ್ಯತ್ವ ಪಡೆದಿದ್ದಾರೆ. ಮುಂದಿನ ದಿನಗಳಲ್ಲಿ ತಾಲೂಕು ಹಾಗೂ ಗ್ರಾಮ ಮಟ್ಟದಲ್ಲಿಯೂ ಸಮಿತಿಯ ಚಟುವಟಿಕೆಗಳನ್ನು ವಿಸ್ತರಿಸುವ ಯೋಜನೆ ಇದೆ ಎಂದು ತಿಳಿಸಿದರು.

ಬಳ್ಳಾರಿ ನಗರದಲ್ಲಿ ಮಹಿಳೆಯರಿಂದ ದೌರ್ಜನ್ಯಕ್ಕೆ ಒಳಗಾದ ವ್ಯಕ್ತಿಯೊಬ್ಬರಿಗೆ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಸಮಿತಿ ಮಧ್ಯಪ್ರವೇಶಿಸಿ ನೆರವು ನೀಡುತ್ತಿದೆ ಎಂದು ಅವರು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಸಮಿತಿಯ ಖಜಾಂಚಿ ವೇದಾ, ಮ್ಯಾನೇಜಿಂಗ್ ಟ್ರಸ್ಟಿ ಶಕುಂತಲಾ, ಜಿಲ್ಲಾ ಅಧ್ಯಕ್ಷ ರಾಮಕೃಷ್ಣ ಸೇರಿದಂತೆ ಇತರ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಪತ್ರಕರ್ತರ ಬೇಡಿಕೆಗಳಿಗೆ ಸದಾ ಸ್ಪಂಧನೆ: ಸಿದ್ದರಾಮಯ್ಯಗೆ ಕೆಯುಡಬ್ಲ್ಯೂಜೆ ಕೃತಜ್ಞತೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ತಮ್ಮ ಅಧಿಕಾರವಧಿಯಲ್ಲಿ ಪತ್ರಕರ್ತರ ಬೇಡಿಕೆಗಳಿಗೆ ಸದಾ ಸ್ಪಂಧಿಸುತ್ತಿದ್ದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಧನ್ಯವಾದಗಳನ್ನು ತಿಳಿಸಿದೆ. ಗೃಹ ಕಚೇರಿ ಕಾವೇರಿಯಲ್ಲಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದ ಕೆಯುಡಬ್ಲ್ಯೂಜೆ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು, ಸಿದ್ದರಾಮಯ್ಯ ಅವರಿಗೆ ಹೂಬೊಕ್ಕೆ ನೀಡಿ ಕೆಯುಡಬ್ಲೂಜೆ ಕೃತಜ್ಞತೆ ಸಲ್ಲಿಸಿದರು.ತಾವು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಪತ್ರಕರ್ತರ ಬೇಡಿಕೆಗಳನ್ನು ಸಂಯಮದಿಂದ ಆಲಿಸಿ ನಿಮ್ಮ ಸಲಹೆಗಾರರಾಗಿದ್ದ ಕೆ.ವಿ.ಪ್ರಭಾಕರ್ ಮೂಲಕ ಈಡೇರಿಸುವ ಪ್ರಯತ್ನ ಮಾಡಿರುವುದನ್ನು ಸಂಘ ಮರೆಯುವುದಿಲ್ಲ ಎಂದು ಅವರಿಗೆ ತಿಳಿಸಿದರು.38ನೇ ದಾವಣಗೆರೆ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಘೋಷಿಸಿದ್ದೀರಿ. ತುಮಕೂರಿನಲ್ಲಿ ನಡೆದ 39ನೇ ರಾಜ್ಯ ಸಮ್ಮೇಳನದಲ್ಲಿ ಪತ್ರಕರ್ತರಿಗಾಗಿ ಮುಖ್ಯಮಂತ್ರಿಗಳ ಆರೋಗ್ಯ ಸಂಜೀವಿನಿ ಯೋಜನೆಯನ್ನು ?ಷಿಸಿ ಜಾರಿಗೆ ನೀಡಿದ್ದೀರಿ ಎನ್ನುವುದನ್ನು ಅವರಿಗೆ ನೆನಪಿಸಿದಾಗ, ನನ್ನ ಜವಬ್ದಾರಿ ಇದ್ದುದ–ರಿಂದ ಮಾಡಿದ್ದೇನೆ. ನಿಮಗೆಲ್ಲ ಒಳ್ಳೆಯದಾಗಲಿ ಎಂದು ಸಿದ್ದರಾಮಯ್ಯ ಹೇಳಿದರು. ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಯೋಜನೆ ಜಾರಿಗೆ ಅಡ್ಡಿಯಾಗಿದ್ದ ಕಠಿಣ ಷರತ್ತುಗಳನ್ನು ತೆಗೆದು, ನಿಯಮಾವಳಿ ಸರಳೀಕರಣಮಾಡಬೇಕುಎಂದು ಬೀದರನಲ್ಲಿ ನಡೆದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ಒತ್ತಾಯಕ್ಕೆ ಸ್ಪಂಧಿಸಿದ್ದ ತಾವು, ಅದೇ ವೇದಿಕೆಯಲ್ಲಿ ಕಠಿಣ ಷರತ್ತುಗಳನ್ನು ಕೈಬಿಡುವುದಾಗಿ ಭರವಸೆ ನೀಡಿದ್ದೀರಿ. ಹಾಗೆಯೇ ನಿಮ್ಮ ಅಧಿಕಾರವಧಿ ಕೊನೆಯಲ್ಲಿ ಆದೇಶ ಮಾಡಿದ್ದು, ಈಗ ನಿಯಮಾವಳಿ ಸರಳೀಕರಣವಾಗಿದೆ ಎಂದು ತಿಳಿಸಿ ಶಿವಾನಂದ ತಗಡೂರು ಧನ್ಯವಾದಗಳನ್ನು ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಹಾಜರಿದ್ದ ಹೈಕೋರ್ಟ್ ನಿವೃತ್ತ ನ್ಯಾಯಾಧೀಶರಾದ ಎಚ್.ಎನ್.ನಾಗಮೋಹನದಾಸ್ ಅವರು, ಲೇಬರ್ ಯೂನಿಯನ್ ಆಗಿರುವ ಕೆಯುಡಬ್ಲೂಜೆ ಉತ್ತಮವಾಗಿ ಕೆಲಸ ಮಾಡುತ್ತಿದೆ ಎಂದು ಸಿದ್ದರಾಮಯ್ಯ ಅವರಿಗೂ ತಿಳಿಸಿ ಪ್ರಶಂಸೆ ವ್ಯಕ್ತಪಡಿಸಿದರು.

## ತರಬೇತಿಗಾಗಿ ಕ್ಯಾಂಪಸ್ ಸಂದರ್ಶನ

**ಕಲಬುರಗಿ:** ಬೆಂಗಳೂರಿನ ಮೆ॥ ಭಾರತ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ವತಿಯಿಂದ ಇದೇ ಜೂನ್ 10 ರಂದು ಬೆಳಿಗ್ಗೆ 9 ಗಂಟೆಗೆ ಎಲೆಕ್ಟ್ರಿಶಿಯನ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್ ಆಂಡ್ ಕೋಪಾ/ಪಾಸಾ ಹಾಗೂ ಇದೇ ಜೂನ್ 11 ರಂದು ಬೆಳಿಗ್ಗೆ 9 ಗಂಟೆಗೆ ರಂದು ಫಿಟ್ಟ ರ್, ಟರ್ನರ್, ಮಶಿನಿಸ್ಟ, ಎಮ್‌ಆರ್‌ಎಸಿ, ಡಿಎಮ್‌ಎಮ್, ವೆಲ್ಡರ್ ಮತ್ತು ಎಲೆಕ್ಟ್ರೋಪ್ಲೇಟರ್ ವೃತ್ತಿಗಳಿಗೆ ಕಲಬುರಗಿ ನಗರದ ಎಂ.ಎಸ್.ಕೆ.ಮಿಲ್ ರಸ್ತೆಯಲ್ಲಿರುವ ಕಲಬುರಗಿ (ಪುರುಷ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಶಿಶಿಕ್ಷು (ಅಪ್ರೆಂಟಿಶಿಫ್) ತರಬೇತಿಗಾಗಿ ಕ್ಯಾಂಪಸ್ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ (ಪುರುಷ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ದಿನಾಂಕ: 01–01–2022 ನಂತರ ಐ.ಟಿ.ಐ. ಪಾಸಾದ ಮತ್ತು ಕೊನೆಯ ವರ್ಷದಲ್ಲಿ ಅಭ್ಯಸಿಸುತ್ತಿರುವ 21 ವರ್ಷದೊಳಗಿನ (ಎಸಿ/ಎಸ್ಟಿ ಅಭ್ಯರ್ಥಿಗಳಿಗೆ 5 ವರ್ಷ ಹಾಗೂ ಓಬಿಸಿ ಅಭ್ಯರ್ಥಿಗಳಿಗೆ 3 ವರ್ಷ ವಯೋಮಿತಿಯಲ್ಲಿ ವಿನಾಯತಿ ಇರುತ್ತದೆ) ಅಭ್ಯರ್ಥಿಗಳು ಕ್ಯಾಂಪಸ್ ಸಂದರ್ಶನಕ್ಕೆ ಹಾಜರಾಗಬೇಕು.

ಅಭ್ಯರ್ಥಿಗಳು ಮೇಲ್ಕಂಡ ದಿನದಂದು ನಡೆಯುವ ಸಂದರ್ಶನಕ್ಕೆ ತಮ್ಮ ವೈಯಕ್ತಿಕ ವಿವರ (ಬಯೋಡೆಟಾ) ಎಸ್.ಎಸ್.ಎಲ್.ಸಿ ಮತ್ತು ಐಟಿಐ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣಪತ್ರ, ಭಾವಚಿತ್ರಗಳು, ಆಧಾರ್ ಕಾರ್ಡ್ ಹಾಗೂ ಇತರೆ ದಾಖಲಾತಿಗಳೊಂದಿಗೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಕಲಬುರಗಿ (ಪುರುಷ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಸೂಚನಾ ಫಲಕದಲ್ಲಿ ವಿವರ ನೋಡಲು ಹಾಗೂ ಸಂಸ್ಥೆಯ ಮೊಬೈಲ್ ಸಂಖ್ಯೆ 9844778565, 9481539511 ಹಾಗೂ 9740524743ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

## ಕನಿಷ್ಠ ವೇತನ ಹೆಚ್ಚಳಕ್ಕೆ ಆಗ್ರಹ



**ಬೆಂಗಳೂರು:** ಪ್ರಸಕ್ತ ಬೆಲೆ ಏರಿಕೆ ಸರಿದೂಗಿಸಲು ಕಾರ್ಮಿಕರ ರಾಜ್ಯ ಸರ್ಕಾರ ಕನಿಷ್ಠ ವೇತನವನ್ನು ಹೆಚ್ಚಿಸಲು ತೀರ್ಮಾನಿಸಿದ್ದು, ಈ ಹಿಂದಿನ ಮನ್ರೇಗಾದ ಹೊಸ ರೂಪವಾದ ವಿಕ್ಷಿತ್ ಭಾರತ್–ಜಿ ರಾಮ್ ಜಿ ಯ ಕನಿಷ್ಠ ವೇತನವನ್ನು ಹೆಚ್ಚಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಕೇಂದ್ರ ಸಚಿವರನ್ನು ಆಗ್ರಹಿಸಿದ್ದಾರೆ. ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚವ್ಹಾಣ್ ಅಧ್ಯಕ್ಷತೆಯಲ್ಲಿ ಎಲ್ಲ ರಾಜ್ಯಗಳ ಗ್ರಾಮೀಣಾಭಿವೃದ್ಧಿ ಸಚಿವರೊಂದಿಗೆ ಇಂದು ನಡೆದ ವಿಡಿಯೋ ಕಾನ್ಫರೆನ್ಸ್‌ನಲ್ಲಿ ಭಾಗಿಯಾಗಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಈಗಾಗಲೇ ಕಾರ್ಮಿಕರ ಕನಿಷ್ಠ ವೇತನ ಹೆಚ್ಚಳಕ್ಕೆ ಅನುಮೋದನೆ ನೀಡಿದ್ದು, ಇದೇ ಪ್ರಕಾರವಾಗಿ ಕೇಂದ್ರ ಸರ್ಕಾರವೂ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಹಣ ಹೆಚ್ಚಿಸಬೇಕು ಎಂದು ಆಗ್ರಹಿಸಿದರು. ಈ ವರ್ಷ ಜುಲೈ 1ರಿಂದ ಜಾರಿಯಾಗಬೇಕಿರುವ ಮನ್ರೇಗಾ– ವಿಕ್ಷಿತ್ ಭಾರತ್–ಜಿ ರಾಮ್ ಜಿ ಅಡಿಯಲ್ಲಿ ಕರ್ನಾಟಕಕ್ಕೆಕೇಂದ್ರ ಸರ್ಕಾರ 60:40ರ ಅನುಪಾತದಲ್ಲಿ 5709.90 ಕೋಟಿ ರೂ. ಮಧ್ಯಂತರ ಹಂಚಿಕೆ ಮಾಡಿದ್ದು, ಇದಕ್ಕೆ ರಾಜ್ಯ ಸರ್ಕಾರ 40ರ ಅನುಪಾತದಲ್ಲಿ 3806.60 ಕೋಟಿ ನೀಡಬೇಕಾಗಿದೆ, ಈ ಯೋಜನೆ ಅನುಷ್ಠಾನಕ್ಕಾಗಿ ಹಣಕಾಸು ಸಚಿವರೂ ಆದ ಮಾನ್ಯ ಮುಖ್ಯಮಂತ್ರಿಗಳಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದರು.

## ಸಮಯಕ್ಕೆ ಸಿಗದ ಬಸ್: ಸಾರ್ವಜನಿಕರ ಪರದಾಟ: ಸಿಬ್ಬಂದಿ ಜೊತೆ ವಾಕ್ಸಮರ




**ಗಂಗಾವತಿ:** ಸ್ಥಳೀಯ ಬಸ್ ನಿಲ್ದಾಣದಲ್ಲಿ ಸಮಯಕ್ಕೆ ಸರಿಯಾಗಿ ಬಸ್‌ಗಳು ಸಂಚರಿಸದ ಕಾರಣ ಶಾಲಾ–ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ನಿತ್ಯ ಪರದಾಡುವಂತಾಗಿದ್ದು, ಇಂದು ಆಕ್ರೋಶಗೊಂಡ ಪ್ರಯಾಣಿಕರು ಮತ್ತು ಬಸ್ ಸಿಬ್ಬಂದಿ ನಡುವೆ ತೀವ್ರ ಮಾತಿನ ಚಕಮಕಿ ನಡೆದಿದೆ.

**ಸಮಯ ಪ್ರಜ್ಞೆಯಿಲ್ಲದ ಸಾರಿಗೆ ವ್ಯವಸ್ಥೆ**

ಬಸ್ ನಿಲ್ದಾಣದಲ್ಲಿ ಜಮಾಯಿಸಿದ ವಿದ್ಯಾರ್ಥಿಗಳು ಸಾರಿಗೆ ಸಂಸ್ಥೆಯ ಬೇಜವಾಬ್ದಾರಿತನದ ವಿರುದ್ಧ ತೀವ್ರ ಅಸಮಾಧಾನ ಹೊರಹಾಕಿದ್ದಾರೆ. "ಬೆಳಗ್ಗೆ 8 ಗಂಟೆಗೆ ಬರಬೇಕಾದ ಬಸ್‌ಗಳು 8:45 ಅಥವಾ 8:50ರ ವೇಳೆಗೆ ಬರುತ್ತವೆ. ಕೆಲವು ಬಸ್‌ಗಳು ನಿಲ್ದಾಣಕ್ಕೆ ಬಂದರೂ ವಿದ್ಯಾರ್ಥಿಗಳನ್ನು ಹತ್ತಿಸಿಕೊಳ್ಳದೆ ನಿರ್ಲಕ್ಷ್ಯ ತೋರುತ್ತಾರೆ. ಇದರಿಂದ ನಮಗೆ ವಾರ್ಷಿಕ ಹಾಗೂ ಸೆಮಿಸ್ಟರ್ ಪರೀಕ್ಷೆಗಳಿಗೆ ಸಮಯಕ್ಕೆ ಸರಿಯಾಗಿ ಹಾಜರಾಗಲು ಸಾಧ್ಯವಾಗುತ್ತಿಲ್ಲ," ಎಂದು ವಿದ್ಯಾರ್ಥಿಯೊಬ್ಬರು ಅಳಲು ತೋಡಿಕೊಂಡಿದ್ದಾರೆ.

**ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಆಕ್ರೋಶ**

ಈ ಕುರಿತು ಈಗಾಗಲೇ ಸಂಬಂಧಪಟ್ಟ ಸಾರಿಗೆ ನಿಯಂತ್ರಕರು (Controller) ಹಾಗೂ ಡಿಪೋ ವ್ಯವಸ್ಥಾಪಕರಿಗೆ (Depot Manager) ಲಿಖಿತ ದೂರನ್ನು ನೀಡಿ ಮನವಿ ಮಾಡಲಾಗಿದ್ದರೂ, ಇದುವರೆಗೆ ಯಾವುದೇ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ನಿಲ್ದಾಣದಲ್ಲಿ ಹೈಡ್ರಾಮಾ: ವಾಕ್ಸಮರ**

ಇಂದು ಬಸ್ ನಿಲ್ದಾಣಕ್ಕೆ ಬಂದ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ (KKRTC) ಬಸ್ಸು ಸಂಖ್ಯೆ KA37 F0853 (ಕುಷ್ಟಗಿ–ಗಂಗಾವತಿ–ಕುಷ್ಟಗಿ ಮಾರ್ಗ) ಚಾಲಕ, ನಿರ್ವಾಹಕ ಹಾಗೂ ನಿಯಂತ್ರಣಾಧಿಕಾರಿಗಳೊಂದಿಗೆ ಪ್ರಯಾಣಿಕರು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು. ಈ ವೇಳೆ ಸಾರಿಗೆ ಸಿಬ್ಬಂದಿ ಹಾಗೂ ಸಾರ್ವಜನಿಕರ ನಡುವೆ ಕೆಲಕಾಲ ನೂಕಾಟ ಮತ್ತು ತೀವ್ರ ಮಾತಿನ ಚಕಮಕಿ ನಡೆದು, ಪರಿಸ್ಥಿತಿ ಉದ್ವಿಗ್ನಗೊಂಡಿತ್ತು. ಬಸ್‌ಗಳಲ್ಲಿ ಜಾಗವಿಲ್ಲದಿದ್ದರೂ ಕಿಕ್ಕಿರಿದು ತುಂಬಿಕೊಂಡು, ಬಾಗಿಲಲ್ಲಿ ಜೋತಾಡುತ್ತಾ ಪ್ರಾಣದ ಹಂಗು ತೊರೆದು ವಿದ್ಯಾರ್ಥಿಗಳು ಪ್ರಯಾಣಿಸುತ್ತಿರುವ ದೃಶ್ಯಗಳು ಇಲ್ಲಿನ ಸಾರಿಗೆ ವ್ಯವಸ್ಥೆಯ ದುಸ್ಥಿತಿಗೆ ಕೈಗನ್ನಡಿಯಾಗಿದೆ. ಇನ್ನಾದರೂ ಸಾರಿಗೆ ಇಲಾಖೆಯ ಉನ್ನತ ಅಧಿಕಾರಿಗಳು ಎಚ್ಚೆತ್ತುಕೊಂಡು ಗ್ರಾಮೀಣ ಹಾಗೂ ಶಾಲಾ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹೆಚ್ಚುವರಿ ಮತ್ತು ಸಮಯಕ್ಕೆ ಸರಿಯಾಗಿ ಬಸ್‌ಗಳ ಸೌಕರ್ಯ ಕಲ್ಪಿಸಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಪ್ರತಿ ವಿದ್ಯಾರ್ಥಿಗೆ ಒಂದು ಸಸಿ: ಶಾಸಕ ಕಂದಕೂರ

• **ಮಲ್ಲಮ್ಮ ನುಡಿ ವಾರ್ತೆ ಗುರಮಠಕಲ್**

"ಪ್ರಕೃತಿಯಿಂದ ಪ್ರೇರಿತರಾಗಿ, ಹವಾಮಾನಕ್ಕಾಗಿ ನಮ್ಮ ಭವಿಷ್ಯಕ್ಕಾಗಿ" ಎಂಬ ಧ್ಯೇಯವಾಕ್ಯದೊಂದಿಗೆ ಅರಣ್ಯ ಇಲಾಖೆಯ ವತಿಯಿಂದ ಗುರಮಠಕಲ್ ಸರ್ಕಾರಿ ಪ್ರೌಢ ಶಾಲೆಯಲ್ಲಿ ಮಂಗಳವಾರ ವಿಶ್ವ ಪರಿಸರ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.



ಕಾರ್ಯಕ್ರಮದಲ್ಲಿ ಭಾಗವಹಿಸಿದ ಶಾಸಕ ಶರಣಗೌಡ ಕಂದಕೂರ ಸಸಿ ನೆಟ್ಟು ಪರಿಸರ ಸಂರಕ್ಷಣೆಯ ಸಂದೇಶ ನೀಡಿದರು. ಬಳಿಕ ಮಾತನಾಡಿದ ಅವರು, ಪರಿಸರ ರಕ್ಷಣೆ ಕೇವಲ ವರ್ಷಕ್ಕೊಮ್ಮೆ ಆಚರಿಸುವ ಕಾರ್ಯಕ್ರಮಕ್ಕೆ ಸೀಮಿತವಾಗಬಾರದು. ಪರಿಸರ ಸಂರಕ್ಷಣೆ ಕುರಿತ ಅರಿವು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದ್ದು, ಹಸಿರು ಪರಿಸರ ನಿರ್ಮಾಣಕ್ಕಾಗಿ ಪ್ರತಿಯೊಬ್ಬರೂ ಕನಿಷ್ಠ ಒಂದು ಸಸಿಯಾದರೂ ನೆಟ್ಟು ಪೋಷಿಸಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳಲ್ಲಿ ಪರಿಸರದ ಬಗ್ಗೆ ಜಾಗೃತಿ ಮೂಡಿಸುವುದು ಅತ್ಯಂತ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಕ್ಷೇತ್ರದ ಎಲ್ಲಾ ಶಾಲೆಗಳ ವಿದ್ಯಾರ್ಥಿಗಳಿಗೆ ಅರಣ್ಯ ಇಲಾಖೆಯ ಸಹಯೋಗದೊಂದಿಗೆ ಮಾಜಿ ಶಾಸಕರಾದ ದಿವಂಗತ ನಾಗಣ್ಣಗೌಡ ಕಂದಕೂರು ಅವರ ಹೆಸರಿನ ಎನ್‌ಜಿಒ ಮೂಲಕ ಸಸಿಗಳನ್ನು ವಿತರಿಸುವ ಆಶಯವಿದೆ ಎಂದು ತಿಳಿಸಿದರು.

ಪ್ರತಿಯೊಬ್ಬ ವಿದ್ಯಾರ್ಥಿಯೂ ಒಂದು ಸಸಿಯನ್ನು ನೆಟ್ಟು ಬೆಳೆಸುವ ಮೂಲಕ ಪರಿಸರ ಸಂರಕ್ಷಣೆಯಲ್ಲಿ ಪಾಲುದಾರರಾಗಬೇಕು ಈಗಾಗಲೇ ಕೇಂದ್ರ ಸರ್ಕಾರದ ಏಕ್ ಪೆಡ್ ಮಾ ಕೆ– ನಾಮ್ ಎನ್ನುವ ಅಭಿಯಾನ ಶಾಲೆಗಳಲ್ಲಿ ಮಕ್ಕಳಲ್ಲಿ ಪರಿಸರ ಕುರಿತಾದ ಜಾಗೃತಿ ಮೂಡಿಸುವ ಪ್ರಯತ್ನ ನಡೆಯುತ್ತಿದೆ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸುವ ಕೆಲಸ ಆಗಬೇಕಾಗಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಶಾಸಕರು ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದ ಎರಡು ಮಹತ್ವದ ಘೋಷಣೆಗಳನ್ನು ಮಾಡಿದರು. ಬಹುಕಾಲದ ಬೇಡಿಕೆಯಾಗಿದ್ದ ಗಾಜರಕೋಟ–ಪುಟಪಾಕ ರಸ್ತೆ ನಿರ್ಮಾಣ ಕಾಮಗಾರಿಗಾಗಿ ₹15 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಶೀಘ್ರದಲ್ಲಿಯೇ ಕಾಮಗಾರಿ ಆರಂಭವಾಗಲಿದೆ ಎಂದು ತಿಳಿಸಿದರು. ಜೊತೆಗೆ ಗುರಮಠಕಲ್ ಸರ್ಕಾರಿ ಪ್ರೌಢ ಶಾಲೆಗೆ ನೂತನ ಕಟ್ಟಡ ನಿರ್ಮಾಣಕ್ಕಾಗಿ ಸಲ್ಲಿಸಿದ್ದ ಪ್ರಸ್ತಾವನೆಗೆ ಸ್ಪಂದನೆ ದೊರೆತಿದ್ದು, ಬೇಡಿಕೆಯಂತೆ 8 ಕೊಠಡಿಗಳ ಬದಲು ಮೊದಲ ಹಂತದಲ್ಲಿ 6 ಕೊಠಡಿಗಳ ನಿರ್ಮಾಣಕ್ಕೆ ಅನುದಾನ ಮಂಜೂರಾಗಿದೆ ಎಂದು ಸಿಹಿ ಸುದ್ದಿ ನೀಡಿದರು.

ಕಾರ್ಯಕ್ರಮದಲ್ಲಿ ಅರಣ್ಯ ಇಲಾಖೆಯ ಎಬಿ ಪಾಟೀಲ್, ತಹಸೀಲ್ದಾರ್ ಚನ್ನ ಮಲ್ಲಪ್ಪ ಘಂಟಿ ,ವಲಯ ಅಧಿಕಾರಿ ರಾಹುಲ್, ಜಿಲ್ಲಾ ಶಿಕ್ಷಣ ಸಂಯೋಜಕ ವೀರಣ್ಣ ಕನ್ನಳ್ಳಿ, ಅಂಬರೀಶ್ ಪಾಟೀಲ್, ಶಾಲಾ ಶಿಕ್ಷಕರಾದ ಕೃಷ್ಣಾರೆಡ್ಡಿ, ಶ್ರೀಮತಿ ಇಂದಿರಾ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ವಿವಿಧ ಬೇಡಿಕೆ ಈಡೇರಿಕೆಗಾಗಿ ಒತ್ತಾಯಿಸಿ ಪ್ರತಿಭಟನೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ಕರ್ನಾಟಕ ರಾಜ್ಯ ಸರ್ವ ಕಲಾವಿದರ ಒಕ್ಕೂಟ ಅವರ ವತಿಯಿಂದ ಇಂದು ಜಾನಪದ ಕಲಾವಿದರ ಕುಂದು ಕೊರತೆ ಹಾಗೂ ಮಾಸಾಶನ ಕುರಿತು ಪ್ರತಿಭಟನೆ ಹಮ್ಮಿಕೊಳ್ಳಲಾಗಿತ್ತು.

ಈ ಪ್ರತಿಭಟನೆಯಲ್ಲಿ ಜಿಲ್ಲೆಯ ಎಲ್ಲ ತಾಲೂಕಿನಿಂದ ಮೂಲ ಕಲಾವಿದರು ಭಾಗವಹಿಸಿದ್ದರು .ಹಳ್ಳಿಗಳಿಂದ ಮಾತೆಯರು ಇದರಲ್ಲಿ ತಮ್ಮ ಮಾಸಾಶನ ಪಡೆಯಲು ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬರುವಂತ ಪ್ರಸಂಗ ಬಂದಿದೆ. ಈ ಎಲ್ಲಾ ಕಲಾವಿದರ ಪರವಾಗಿ ಕರ್ನಾಟಕ ರಕ್ಷಣಾ ವೇದಿಕೆ ಶ್ರೀ ಪ್ರವೀಣ್ ಕುಮಾರ್ ಶೆಟ್ಟಿ ಬಣ ಬಾಗಲಕೋಟೆ ಜಿಲ್ಲಾ ಅಧ್ಯಕ್ಷರು ಮುತ್ತುರಾಜ್ ಅರಗಿನಶೆಟ್ಟಿ ಅವರು ಹಾಗೂ ಕಲಾವಿದರ ಸಂಘದ ಅಧ್ಯಕ್ಷರು ನೇರವಾಗಿ ಸರಕಾರಕ್ಕೆ ಹಾಗೂ ಜಿಲ್ಲಾಧಿಕಾರಿಗೆ ಕೊಡಲೇ ಕಲಾವಿದರ ಕಷ್ಟಕ್ಕೆ ಸ್ಪಂದಿಸಬೇಕು ಹಾಗೂ ಕನ್ನಡ ಮತ್ತು



ಸಂಸ್ಕೃತಿ ಇಲಾಖೆಯಲ್ಲಿ ಖಾಯಂ ಸಹಾಯಕ ನಿರ್ದೇಶಕರನ್ನು ನೇಮಿಸಬೇಕು,ಕಲಾವಿದರಿಗೆ ಮಾಸಾಶನ ಹೆಚ್ಚಾಗಬೇಕು ಮತ್ತು ಅವರ ವಯಸ್ಸು ಕೂಡ 58 ರಿಂದ 50 ಕ್ಕೆ ಇಳಿಕೆಯಾಗಬೇಕು ಮತ್ತು ಸ್ಥಳೀಯ ಕಲಾವಿದರ ಪ್ರಯೋಜನೆ ಮೊತ್ತವನ್ನು ದ್ವಿಗುಣ(30000 ರಿಂದ 50000) ಗೊಳಿಸಬೇಕು ಮತ್ತು ಅರ್ಜಿ ಹಾಕುವ ಕಲಾವಿದರಿಗೆ ವೃದ್ಧಾಪ ವೇತನ ಅಥವಾ ವಿಧವಾ ವೇತನ ಕಡಿತಗೊಳಿಸದೆ ಅರ್ಜಿ ಪಾರಂ ನೀಡಬೇಕು ಹಾಗೂ ಕಲಾವಿದರ ವೇತನ ಮಂಜೂರು ಆದಮೇಲೆ ಇತರೇ ವೇತನ ನಿಲ್ಲಿಸಬೇಕು ಎಂದು ಮನವಿ ಮಾಡಿಕೊಂಡರು. ಒಂದು ವೇಳೆ ಈ ಎಲ್ಲಾ ಕಲಾವಿದರ ಬೇಡಿಕೆಗಳು ಈಡೇರದೆ ಹೋದರೆ ಉಗ್ರಹೋರಾಟ ಮಾಡುವದಾಗಿ ಈ ಪ್ರತಿಭಟನೆ ವೇದಿಕೆ ಮುಖಾಂತರ ಹೇಳಿದರು.

ಈ ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ಕಲಾವಿದರ ಒಕ್ಕೂಟದ ಅಧ್ಯಕ್ಷರು ಶ್ರೀ ಶರಣಬಸವ ಶಾಸ್ತ್ರಿಗಳು ಹಾಗೂ ಶ್ರೀಮತಿ ಪವಿತ್ರಾ ಜಕ್ಕಪ್ಪನವರ ಕಲಾವಿದರ ಒಕ್ಕೂಟದ ಕಾರ್ಯದರ್ಶಿಗಳು ಮತ್ತು ಕರವೇ ಗೌರವ ಅಧ್ಯಕ್ಷರು ಶ್ರೀ ಆಯುಬಖಾನ ಬಾಗೇವಾಡಿ ಮತ್ತು ಎಲ್ಲಪ್ಪ ಡಿ ಪೂಜಾರ, ಶಂಕರ ಲಮಾಣಿ, ಶಂಕ್ರಪ್ಪ ತಂಬಾಕದ, ಚನ್ನಪ್ಪಗೌಡ ನಾಗಪ್ಪ ಗಿಡ್ಡಪ್ಪಗೊಳ, ಪಾರ್ವತೆವ್ವ ಬ ಮಾದರ, ನಾಗವ್ವ ಜೋಗಿ, ನೀಲವ್ವ ಮಾದರ, ಲಕ್ಕವ್ವ ದ್ಯಾವನಗೌಡ್ರು, ಕಲಾವತಿ ಮಾದರ, ರಂಗಪ್ಪ ತಳವಾರ ಹಾಗೂ ಕಲಾವಿದರ ಸಂಘದ ಎಲ್ಲಾ ಸರ್ವ ಸದಸ್ಯರು ಉಪಸ್ಥಿತರಿದ್ದರು.

# ಸಿಎಂ ನೇತೃತ್ವದಲ್ಲಿ ಕಾಮಗಾರಿಗಳ ಉದ್ಘಾಟನೆ: ಶಾಸಕ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ನಗರದಲ್ಲಿ ಈಗಾಗಲೇ ಪೂರ್ಣಗೊಂಡಿರುವ ಕಾಮಗಾರಿಗಳನ್ನು ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ನೇತೃತ್ವದಲ್ಲಿ ಶೀಘ್ರ ಉದ್ಘಾಟಿಸಲಾಗುವುದು ಎಂದು ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಮಂಗಳವಾರ ಬಳ್ಳಾರಿಯ 14ನೇ ವಾರ್ಡಿನಲ್ಲಿ ಸಲಾಂ ಬಳ್ಳಾರಿ ಹಾಗೂ ಕಿಚನ್ ಕಿಟ್ ವಿತರಣೆಗೆ ಚಾಲನೆ ನೀಡಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು. ಗಡಿಗಿ ಚನ್ನಪ್ಪ ವೃತ್ತ, ಮಹರ್ಷಿ ವಾಲ್ಮೀಕಿಯವರ ಪುತ್ಥಳಿ ಸೇರಿದಂತೆ ಈವರೆಗೆ ಪೂರ್ಣಗೊಂಡಿರುವ ರಸ್ತೆ ಮತ್ತಿತರ ಕಾಮಗಾರಿಗಳನ್ನು ಲೋಕಾರ್ಪಣೆ ಮಾಡಲಾಗುವುದು ಎಂದರು.

ಅಲ್ಲದೇ ಶಾಶ್ವತ ಕುಡಿಯುವ ನೀರಿನ ಯೋಜನೆಯ 270 ಕೋಟಿ ರೂ.ಗಳ ವೆಚ್ಚದಲ್ಲಿ ಪ್ರಾಥಮಿಕ ಕಾಮಗಾರಿಗೆ



ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ಹೇಳಿದ ಅವರು, ಪ್ರತಿ ವಾರ್ಡಿಗೆ ತಲಾ 2.50 ಕೋಟಿ ರೂ.ಗಳ ಅನುದಾನ ಮಂಜೂರಾಗಿದ್ದು, ಬಳ್ಳಾರಿಯ ಒಳ ಪ್ರದೇಶಗಳನ್ನು ಅಭಿವೃದ್ಧಿಪಡಿಸಲಾಗುವುದು ಎಂದರು. ಅಂಡರ್'ಪಾಸ್ ನಿರ್ಮಾಣ ಆಗಿ ಒಂದು ವರ್ಷದಲ್ಲಿ ಬಹಳ ಸಲ ಮಳೆ ಆಗಿದೆ, ಆಗ ಅಂಡರ್'ಪಾಸಿನಲ್ಲಿ ನೀರು ನಿಂತಿರಲಿಲ್ಲ, ಅದನ್ನು ಯಾರೂ ಹೇಳಲಿಲ್ಲ, ಆದರೆ ಮೊನ್ನೆ ಬಂದ ಮಳೆ ಭೀಕರವಾಗಿತ್ತು, ಆದಾಗ್ಯೂ ನೀರು ನಿಲ್ಲಬಾರದು;ನಿಂತವು, ಅದನ್ನೇ ವಿರೋಧ ಪಕ್ಷದವರು ದೊಡ್ಡದು ಮಾಡಿದ್ದಾರೆ ಎಂದರು. ಮಳೆಯಿಂದ ಈ ಬಾರಿ ಭಾರೀ ಪ್ರಮಾಣದ ಹಾನಿಯಾಗಿದೆ, ಪಾಲಿಕೆಯ ಅಧಿಕಾರಿಗಳು, ಜೆಸ್ಕಾಂನ ಅಧಿಕಾರಿ ಹಾಗೂ ಸಿಬ್ಬಂದಿಗಳು ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದಾರೆ ಎಂದು ಹೇಳಿದ ಶಾಸಕ ನಾರಾ ಭರತ್ ರೆಡ್ಡಿ, ವಿದ್ಯುತ್ ಸಂಪರ್ಕದ ಮಾರ್ಗಗಳು, ಕಂಬಗಳು ಹಳತಾಗಿವೆ, ಶೀಘ್ರ ಬದಲಿಸಲಾಗುವುದು ಎಂದರು. ಈ ಸಂದರ್ಭ ಪಾಲಿಕೆಯ ಸದಸ್ಯ ನೂರ್ ಮೊಹಮ್ಮದ್, ಕಾಂಗ್ರೆಸ್ ಮುಖಂಡ ಬಿಆರೆಲ್ ಸೀನಾ, ಮಹಿಳಾ ಘಟಕದ ಮಂಜುಳಾ, ಪದ್ಮಾ, ಥಿಯೇಟರ್ ಶಿವು, ರಾಕಿ ಮತ್ತಿತರರು ಹಾಜರಿದ್ದರು.

# ಬಕ್ಕಚೋಡಿ ಗ್ರಾಮದಲ್ಲಿ 12ರಂದು ಡಾ. ಅಂಬೇಡ್ಕರ್ ಮೂರ್ತಿ ಅನಾವರಣ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ತಾಲೂಕಿನ ಬಕ್ಕಚೋಡಿ ಗ್ರಾಮದಲ್ಲಿ ಇದೇ ಜೂನ್ 12, ರಂದು ಬೆಳಗ್ಗೆ 11.30 ಗಂಟೆಗೆ 'ವಿಶ್ವಶಾಂತಿ ತಥಾಗತ ಗೌತಮ ಬುದ್ಧ ಮಹಾದ್ವಾರ' ಹಾಗೂ 'ವಿಶ್ವರತ್ನ ಸಂವಿಧಾನ ಶಿಲ್ಪಿ ಡಾ. ಭೀಮರಾವ ರಾಮಜಿ ಅಂಬೇಡ್ಕರ್' ರವರ ನೂತನ ಮೂರ್ತಿ ಅನಾವರಣ ಸಮಾರಂಭವನ್ನು ಅದ್ದೂರಿಯಾಗಿ ಆಯೋಜಿಸಲಾಗಿದೆ ಎಂದು ಅಲ್ಲಿಯ ಗ್ರಾಮದ ಮುಖಂಡರು ಹಾಗೂ ನ್ಯಾಯವಾದಿ ಪರಮೇಶ್ವರ ಗುಬ್ಬೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಮಂಗಳವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ರಾಜ್ಯದ ಸಮಾಜ ಕಲ್ಯಾಣ ಇಲಾಖೆಯ ಮಾಜಿ ಸಚಿವರಾದ ಡಾ.ಹೆಚ್.ಸಿ.ಮಹಾದೇವಪ್ಪ ಅವರು ಡಾ. ಬಿ.ಆರ್.ಅಂಬೇಡ್ಕರ್ ಅವರ ಮೂರ್ತಿ ಅನಾವರಣಗೊಳಿಸಲಿದ್ದಾರೆ. ನೂತನವಾಗಿ ನಿರ್ಮಿಸಲಾದ ಬುದ್ಧನ ಮಹಾದ್ವಾರವನ್ನು ಆಣದೂರಿನ ಪೂಜ್ಯ ಧಮ್ಮಾನಂದ ಭಂತೆ ಅವರು ಉದ್ಘಾಟಿಸುವರು. ಮೈಸೂರಿನ ಉರಿಲಿಂಗ ಪೆದ್ದಿ ಮಠದ ಪೂಜ್ಯ ಡಾ. ಜ್ಞಾನ ಪ್ರಕಾಶ ಸ್ವಾಮೀಜಿ ಹಾಗೂ ಬಸವಶ್ರೀ ಪ್ರಶಸ್ತಿ ಪುರಸ್ಕೃತರಾದ ಡಾ. ಸಿದ್ರಾಮೇಶ್ವರ ಬೆಲ್ದಾಳ ಶರಣರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ವಹಿಸಲಿದ್ದಾರೆ ಎಂದರು.

ಈ ಬೃಹತ್ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತರಾಜ್ ಖಾತೆ ಸಚಿವರಾದ ಈಶ್ವರ ಬಿ. ಖಂಡ್ರೆ, ಸ್ಥಳಿಯ ಶಾಸಕ ಹಾಗೂ ಮಾಜಿ ಮಂತ್ರಿ ರಹೀಂ ಖಾನ್, ಬೀದರ್ ಲೋಕಸಭಾ ಸದಸ್ಯ ಸಾಗರ್ ಈಶ್ವರ ಖಂಡ್ರೆ ಭಾಗವಹಿಸಲಿದ್ದಾರೆ. ಅತಿಥಿಗಳಾಗಿ ಮಾಜಿ ಸಚಿವ






ಬಂಡೆಪ್ಪ ಕಾಶೆಂಪೂರ್, ಮಾಜಿ ಶಾಸಕ ಅಶೋಕ ಖೇಣಿ, ವಿಧಾನ ಪರಿಷತ್ ಸದಸ್ಯ ಭೀಮರಾವ್ ಪಾಟೀಲ್, ಮಾಜಿ ವಿಧಾನ ಪರಿಷತ್ ಸದಸ್ಯ ಅರವಿಂದಕುಮಾರ ಅರಳಿ ಉಪಸ್ಥಿತರಿರುವರು. ದಲಿತ ಸಂಘರ್ಷ ಸಮಿತಿಯ ಪ್ರಮುಖರಾದ ಡಿ.ಜಿ. ಸಾಗರ್, ಮಾವಳ್ಳಿ ಶಂಕರ್, ಹೆಣ್ಣೂರು ಶ್ರೀನಿವಾಸ್ ಸೇರಿದಂತೆ ಹಲವು ಸ್ಥಳೀಯ ಜನಪ್ರತಿನಿಧಿಗಳು, ಕಾಂಗ್ರೆಸ್ ಮುಖಂಡರು ಹಾಗೂ ವಿವಿಧ ಸಂಘಟನೆಗಳ ನಾಯಕರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದವರು ಹೇಳಿದರು.

ಕಾರ್ಯಕ್ರಮದಲ್ಲಿ ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯರಾದ ಪ್ರೊ. ವಿಮಲದಾಸ್ ಪ್ಯಾಗೆ ಮತ್ತು ಅಕ್ಕ ಮಹಾದೇವಿ ಮಹಿಳಾ ಪದವಿ ಕಾಲೇಜಿನ ನಿವೃತ್ತ ಪ್ರಾಚಾರ್ಯ ಪ್ರೊ. ಶಿವಶರಣಪ್ಪ ಹುಗ್ಗೆ ಪಾಟೀಲ್ ಅವರು ವಿಶೇಷ ಭಾಷಣ ಮಾಡಲಿದ್ದಾರೆ.

ಕಾರ್ಯಕ್ರಮದ ನಿರೂಪಣೆಯನ್ನು ಕರ್ನಾಟಕ ದಲಿತ ರಕ್ಷಣಾ ವೇದಿಕೆಯ ಜಿಲ್ಲಾ ಅಧ್ಯಕ್ಷ ಅಂಬಾದಾಸ ಗಾಯಕವಾಡ ಮಾಡಲಿದ್ದು, ತಾನು ಸರ್ವರನ್ನು ಸ್ವಾಗತಿಸುವೆ. ಗ್ರಾಮ ಪಂಚಾಯತ್ ಮಾಜಿ ಅಧ್ಯಕ್ಷರು, ಸದಸ್ಯರು ಹಾಗೂ ಗಣ್ಯರ ಘನ ಉಪಸ್ಥಿತಿಯಲ್ಲಿ ನಡೆಯಲಿರುವ ಈ ಅರ್ಥಪೂರ್ಣ ಸಮಾರಂಭಕ್ಕೆ ಎಲ್ಲರು ಸಾಕ್ಷಿಗಳಾಗುವಂತೆ ಪರಮೇಶ್ವರ ಗುಬ್ಬೆ ಕರೆ ನೀಡಿದರು.

ದಲಿತ ಮುಖಂಡರಾದ ಅನಿಲಕುಮಾರ ಬೆಲ್ದಾರ್, ರಮೇಶ ಡಾಕುಳಗಿ, ಅಂಬಾದಾಸ ಗಾಯಕವಾಡ ಮಾತನಾಡಿದರು.

ಸಾಯಿ ಶಿಂಧೆ, ದಶರಥ ಗುಬ್ಬೆ, ರಾಜಕುಮಾರ ಭಾವಿಕಟ್ಟಿ, ಸಂತೋಷ ಸಂಗಮ, ಅಂತಪ್ಪ ಗುಬ್ಬೆ, ಬಸವರಾಜ ಸಂಗಮ, ಬುದ್ಧರಾಜ ಸಂಗಮ, ಪ್ರೇಮಕುಮಾರ ಕಾಂಬಳೆ, ಮಲ್ಲಿಕಾರ್ಜುನ್ ಗುಬ್ಬೆ ಸೇರಿದಂತೆ ಗ್ರಾಮದ ಇತರೆ ಪ್ರಮುಖರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಅಲ್ಪಸಂಖ್ಯಾತ ಸಮುದಾಯಕ್ಕೆ ವಿಧಾನ ಪರಿಷತ್ ಸ್ಥಾನಕ್ಕೆ ಆಗ್ರಹ



**ವಿಜಯಪುರ:** ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಅಲ್ಪಸಂಖ್ಯಾತ ಸಮುದಾಯದ ಜನರು ಕಾರಣ, ಇದರಿಂದಾಗಿ ರಾಜ್ಯದಲ್ಲಿ ಸ್ಪಷ್ಟ ಬಹುಮತದ ಕಾಂಗ್ರೆಸ್ ಸರ್ಕಾರ ರಚನೆಯಾಗಲು ಸಾಧ್ಯವಾಗಿದೆ. ಆದರೆ, ವಿಜಯಪುರ ಜಿಲ್ಲೆಯಲ್ಲಿ ಕಳೆದ ಹತ್ತು ವರ್ಷಗಳಿಂದ ಈ ಸಮುದಾಯವು ರಾಜಕೀಯ ಅಧಿಕಾರದ ಅಸ್ಪೃಶ್ಯತೆಯನ್ನು ಅನುಭವಿಸುತ್ತಿದೆ. ಇದನ್ನು ಗಮನದಲ್ಲಿಟ್ಟುಕೊಂಡು ಮುಂಬರುವ ವಿಧಾನಪರಿಷತ್ ಸ್ಥಾನಗಳ ಆಯ್ಕೆಯಲ್ಲಿ ಜಿಲ್ಲೆಯ ಅಲ್ಪಸಂಖ್ಯಾತ ಸಮುದಾಯದ ನಾಯಕರಿಗೆ ಸೂಕ್ತ ಪ್ರಾತಿನಿಧ್ಯ ಹಾಗೂ ಅವಕಾಶ ಮಾಡಿಕೊಡಬೇಕು ಎಂದು ನ್ಯಾಯವಾದಿ ಶ್ರೀನಾಥ ಪೂಜಾರಿ ಅವರು ಕಾಂಗ್ರೆಸ್ ಹೈಕಮಾಂಡ್ ಅನ್ನು ಆಗ್ರಹಿಸಿದರು.

ನಗರದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, "ರಾಜ್ಯದಲ್ಲಿ ಬಹುಸಂಖ್ಯಾತರಾಗಿ ಕಾಂಗ್ರೆಸ್ ಪಕ್ಷದ ಬೆನ್ನೆಲುಬಾಗಿ ನಿಂತಿರುವ ಅಲ್ಪಸಂಖ್ಯಾತ, ದಲಿತ ಮತ್ತು ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಸಿಗಬೇಕು. ಅದರಲ್ಲೂ ವಿಶೇಷವಾಗಿ ಅವಿಭಜಿತ ವಿಜಯಪುರ ಹಾಗೂ ಬಾಗಲಕೋಟೆ ಜಿಲ್ಲೆಗಳ ನಾಯಕರಿಗೆ ಈ ಬಾರಿ ಮನ್ನಣೆ ನೀಡಬೇಕು" ಎಂದು ಒತ್ತಾಯಿಸಿದರು.

ಒಂದು ವೇಳೆ ಈ ಪ್ರಮುಖ ವರ್ಗಗಳ ಜನರು ಕಾಂಗ್ರೆಸ್ ಪಕ್ಷದ ಮೇಲೆ ಮುನಿಸಿಕೊಂಡರೆ, ಮುಂಬರುವ ದಿನಗಳಲ್ಲಿ ಪಕ್ಷವು ಬಹಳಷ್ಟು ರಾಜಕೀಯ ನಷ್ಟವನ್ನು ಅನುಭವಿಸಬೇಕಾಗುತ್ತದೆ ಎಂದು ಅವರು ಇದೇ ವೇಳೆ ಎಚ್ಚರಿಸಿದರು ಪತ್ರಿಕಾಗೋಷ್ಠಿಯಲ್ಲಿ ಲಿಂಗಾಯತ ಸಮುದಾಯದ ಮುಖಂಡರಾದ ಡಾ. ಬಸವರಾಜ ಬಿರಾದಾರ, ದಲಿತ ಮುಖಂಡರಾದ ಮಲ್ಲು ಜಾಲಗೇರಿ, ದಲಿತ ವಿದ್ಯಾರ್ಥಿ ಪರಿಷತ್ ಜಿಲ್ಲಾ ಅಧ್ಯಕ್ಷರಾದ ಮಹಾದೇವ ಚಲವಾದಿ ಉಪಸ್ಥಿತರಿದ್ದರು.

# ಬೀಜ ವಿತರಣೆ ವಿಳಂಬ: ಇಲಾಖೆಗೆ ದೂರು, ಹೋರಾಟದ ಎಚ್ಚರಿಕೆ



**ಬೀದರ್:** ಔರಾದ್ (ಬಿ) ತಾಲೂಕಿನ ಕೌಠಾ (ಬಿ) ಹಾಗೂ ಸಂತಪೂರ ಬೀಜ ವಿತರಣಾ ಕೇಂದ್ರಗಳಲ್ಲಿ ರೈತರಿಗೆ ಸಕಾಲದಲ್ಲಿ ಬೀಜ ವಿತರಣೆ ಮಾಡದಿರುವುದನ್ನು ಖಂಡಿಸಿ ಕಲ್ಯಾಣ ಕರ್ನಾಟಕ ನಿರ್ಮಾಣ ಸೇನೆ ಇಂದು ಕೌಠಾ ಬೀಜ ವಿತರಣಾ ಕೇಂದ್ರದಲ್ಲಿ ಪ್ರತಿಭಟನೆ ಮಾಡಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಿಗೆ ದೂರು ಸಲ್ಲಿಸಿದ್ದಾರೆ.

ರೈತ ಸಂಪರ್ಕ ಕೇಂದ್ರ ಹಾಗೂ ಕೃಷಿ ಇಲಾಖೆ ಅಧಿಕಾರಿಗಳ ನಿರ್ಲಕ್ಷ್ಯದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಜೂನ್ 10ರಂದು ಎರಡೂ ಕೇಂದ್ರಗಳಲ್ಲಿ ಬೀಜ ವಿತರಣೆ ಖಚಿತಪಡಿಸಬೇಕು ಎಂದು ಸಂಘಟನೆ ಆಗ್ರಹಿಸಿದ್ದಾರೆ.

ಜತೆಗೆ ಬೀಜ ವಿತರಣೆಯಲ್ಲಿ ವಿಫಲರಾದ ಅಧಿಕಾರಿಗಳನ್ನು ಕೂಡಲೇ ವರ್ಗಾವಣೆ ಮಾಡಬೇಕು. ಇಲ್ಲವಾದಲ್ಲಿ ಕಲ್ಯಾಣ ಕರ್ನಾಟಕ ನಿರ್ಮಾಣ ಸೇನೆ ವತಿಯಿಂದ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಸಂಘದ ಜಿಲ್ಲಾಧ್ಯಕ್ಷ ಜೇಮ್ಸ್ ಇಸ್ಲಾಂಪೂರ, ಬೀಚಪ್ಪ ಆಲೂರ, ಸುರೇಶ್ ಎನ್. ದೊಡ್ಡಿ, ಕಮಲಹಾಸನ್ ಭಾವಿದೊಡ್ಡಿ ಎಚ್ಚರಿಕೆ ನೀಡಿದ್ದಾರೆ.

## ಪಿಕೆಪಿಎಸ್ ಅಷ್ಟೂರ್‌ನಲ್ಲಿ ಅಕ್ರಮ ಆರೋಪ:
# ಉನ್ನತ ಮಟ್ಟದ ತನಿಖೆಗೆ ಆಗ್ರಹ



**ಬೀದರ್:** ಅಷ್ಟೂರ್ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ (ಪಿಕೆಪಿಎಸ್) ಆಡಳಿತ ಮಂಡಳಿ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ವಿರುದ್ಧ ಅಕ್ರಮ ಭೂ ಖರೀದಿ ಮತ್ತು ಭ್ರಷ್ಟಾಚಾರದ ಆರೋಪ ಕೇಳಿಬಂದಿದ್ದು, ಉನ್ನತ ಮಟ್ಟದ ತನಿಖೆ ನಡೆಸುವಂತೆ ಬಸವರಾಜ ಬೆಳ್ಳೂರೆ ಅವರು ಸಹಕಾರ ಸಂಘಗಳ ಜಂಟಿ ನಿಬಂಧಕರಿಗೆ ಮನವಿ ಸಲ್ಲಿಸಿದ್ದಾರೆ.

ಸಂಘವು ಸರ್ಕಾರ ನಿಗದಿಪಡಿಸಿದ ದರಕ್ಕಿಂತ ಹೆಚ್ಚಿನ ಬೆಲೆಗೆ ಭೂಮಿ ಖರೀದಿಸಿದ್ದು, ಖರೀದಿ ಪ್ರಕ್ರಿಯೆ ಬಳಿಕ ಮೌಲ್ಯಮಾಪನ ಪ್ರಮಾಣ ಪತ್ರಗಳನ್ನು ಪಡೆದು ಅಕ್ರಮಗಳನ್ನು ಮುಚ್ಚಿಹಾಕುವ ಪ್ರಯತ್ನ ನಡೆದಿದೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ. ಅಲ್ಲದೆ, ಉಪನಿಬಂಧಕರ ವರದಿ ಏಕಪಕ್ಷೀಯವಾಗಿದ್ದು, ಪ್ರಕರಣದಲ್ಲಿ ಪಾರದರ್ಶಕ ತನಿಖೆ ನಡೆದಿಲ್ಲ ಎಂದು ಅವರು ತಿಳಿಸಿದ್ದಾರೆ.

ಖರೀದಿಸಿದ ಜಮೀನನ್ನು ನೀರಾವರಿ ಭೂಮಿ ಎಂದು ತಪ್ಪಾಗಿ ಮೌಲ್ಯಮಾಪನ ಮಾಡಿರುವ ಖಾಸಗಿ ಇಂಜಿನಿಯರ್‌ಗಳ ವಿರುದ್ಧ ಕ್ರಮ ಕೈಗೊಳ್ಳಬೇಕು, ಅವರ ಪರವಾನಗಿ ರದ್ದುಪಡಿಸಬೇಕು ಹಾಗೂ ಪಿಕೆಪಿಎಸ್ ಅಷ್ಟೂರ್ ಆಡಳಿತ ಮಂಡಳಿಯನ್ನು ವಿಸರ್ಜಿಸಿ ಮುಖ್ಯ ಕಾರ್ಯನಿರ್ವಾಹಕರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಬಸವರಾಜ ಬೆಳ್ಳೂರೆ ಆಗ್ರಹಿಸಿದ್ದಾರೆ.

# ಸಾರ್ವಜನಿಕರ ಸೇವೆಯೇ ಮೊದಲ ಆದ್ಯತೆ

- ಮಲ್ಲಮ್ಮ ನುಡಿ ವಾರ್ತೆ ಔರಾದ್



ಪಟ್ಟಣದಲ್ಲಿ ಮಂಗಳವಾರ ಎಂಎಲ್ಸಿ ಭೀಮರಾವ ಪಾಟೀಲ್ ಅವರು ತಮ್ಮ ಕಚೇರಿಯಲ್ಲಿ ಸಾರ್ವಜನಿಕರ ಅಹವಾಲು ಸ್ವೀಕರಿಸಿದರು. ತಾಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ ನಾಗರಿಕರು ತಮ್ಮ ಸಮಸ್ಯೆಗಳ ಕುರಿತು ಮನವಿಪತ್ರಗಳನ್ನು ಸಲ್ಲಿಸಿ ಪರಿಹಾರ ಕೋರಿದರು.

ಈ ವೇಳೆ ಮಾತನಾಡಿದ ಪಾಟೀಲ್ ಅವರು, "ನಮ್ಮೆಲ್ಲರ ಆಶೀರ್ವಾದದಿಂದ ನಾನು ಗೆಲುವು ಸಾಧಿಸಿದ್ದೇನೆ. ನಿಮ್ಮ ಸೇವೆಯೇ ನನ್ನ ಮೊದಲ ಆದ್ಯತೆಯಾಗಿದ್ದು, ಸಾರ್ವಜನಿಕರ ಸಮಸ್ಯೆಗಳನ್ನು ಪ್ರಾಮಾಣಿಕವಾಗಿ ಬಗೆಹರಿಸಲು ಪ್ರಯತ್ನಿಸುತ್ತೇನೆ" ಎಂದರು. ಪ್ರತಿ ತಿಂಗಳು ಔರಾದ್ ತಾಲೂಕಿಗೆ ಭೇಟಿ ನೀಡುವುದಾಗಿ ತಿಳಿಸಿದ ಅವರು, ಕಾಂಗ್ರೆಸ್ ಕಾರ್ಯಕರ್ತರು ಈ ಕುರಿತು ಜನರಿಗೆ ಮಾಹಿತಿ ನೀಡಬೇಕು ಎಂದು ಸೂಚಿಸಿದರು.

ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಸಾರ್ವಜನಿಕರ ಅಡೆತಡೆಗಳನ್ನು ನಿವಾರಿಸಲು ಕ್ರಮ ಕೈಗೊಳ್ಳಲಾಗುವುದು ಎಂದ ಅವರು, ಪಕ್ಷದ ಬಲವರ್ಧನೆ ಮತ್ತು ಸರ್ಕಾರದ ಯೋಜನೆಗಳು ಬಡವರ ಮನೆಗಳಿಗೆ ತಲುಪುವಂತೆ ಎಲ್ಲರೂ ಸೇರಿ ಕೆಲಸ ಮಾಡಬೇಕು ಎಂದು ಕಿವಿಮಾತು ಹೇಳಿದರು. ಈ ಸಂದರ್ಭದಲ್ಲಿ ವಿದ್ಯಾರ್ಥಿ ಬಂಧುತ್ವ ವೇದಿಕೆಯ ಜಿಲ್ಲಾ ಸಂಚಾಲಕ ರತ್ನದೀಪ ಕಸ್ತೂರೆ ಮಾತನಾಡಿ, ಪಟ್ಟಣ ಪಂಚಾಯಿತಿಯಲ್ಲಿ ನೇಮಕಗೊಂಡಿರುವ ಪೌರಕಾರ್ಮಿಕರನ್ನು ಕಚೇರಿ ಕೆಲಸಗಳಿಗೆ ನಿಯೋಜಿಸಿರುವುದರಿಂದ ಪಟ್ಟಣದಲ್ಲಿ ಸ್ವಚ್ಛತೆ ಸಮಸ್ಯೆ ಉಂಟಾಗಿದೆ ಎಂದು ಗಮನ ಸೆಳೆದರು. ಅವರನ್ನು ಮೂಲ ಕರ್ತವ್ಯಗಳಿಗೆ ನಿಯೋಜಿಸಬೇಕು ಎಂದು ಒತ್ತಾಯಿಸಿದರು.

ಏಕಂಬಾ ಗ್ರಾಮದಲ್ಲಿ ವಿದ್ಯುತ್ ಸಮಸ್ಯೆ ನಿತ್ಯ ಕಾಡುತ್ತಿರುವುದಾಗಿ ಗ್ರಾಮಸ್ಥರು ದೂರು ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಪಾಟೀಲ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ದೂರವಾಣಿ ಮೂಲಕ ಸೂಚನೆ ನೀಡಿ ತಕ್ಷಣ ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಇದಲ್ಲದೆ, ಔರಾದ್ ಪಟ್ಟಣದ ಕ್ರೀಡಾಂಗಣಕ್ಕೆ ಹೋಗುವ ರಸ್ತೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸರ್ವೆ ವಿಚಾರದಲ್ಲಿ ಸಮಸ್ಯೆ ಎದುರಾಗಿರುವುದಾಗಿ ಯುವಕ ಶಿವು ನಿರ್ಮಳೆ ತಿಳಿಸಿದ್ದಾರೆ. ಈ ಕುರಿತು ತಹಸೀಲ್ದಾರ್ ಮಹೇಶ್ ಪಾಟೀಲ್ ಅವರಿಗೆ ಜಂಟಿ ಸರ್ವೆ ನಡೆಸಿ ನಿಯಮಾನುಸಾರ ಕಾಮಗಾರಿ ಕೈಗೊಳ್ಳುವಂತೆ ಸೂಚಿಸಿದರು.

ಜಂಬಗಿ ಶಾಲೆಯ ಹಳೆಯ ಕಟ್ಟಡವನ್ನು ತೆರವುಗೊಳಿಸದಿರುವುದರಿಂದ ವಿದ್ಯಾರ್ಥಿಗಳಿಗೆ ಭಯ ಉಂಟಾಗುತ್ತಿದೆ ಎಂದು ಗ್ರಾಮಸ್ಥರು ತಿಳಿಸಿದರು. ಈ ಬಗ್ಗೆ ಲೋಕೋಪಯೋಗಿ ಇಲಾಖೆಯ ಎಇಇ ಪ್ರೇಮಸಾಗರ ಪ್ರತಿಕ್ರಿಯಿಸಿ, ಈಗಾಗಲೇ ವರದಿ ಸಿದ್ಧವಾಗಿದ್ದು ಶೀಘ್ರದಲ್ಲೇ ಕಟ್ಟಡವನ್ನು ತೆರವುಗೊಳಿಸಲಾಗುವುದು ಎಂದು ತಿಳಿಸಿದರು.

**ಜೆಜೆಎಂ ಹಣ ಲೂಟಿ ಆರೋಪ: ತನಿಖೆಗೆ ಒತ್ತಾಯ**

ತಾಲೂಕಿನ ಹಂಗರಗಾ ತಾಂಡವೇ ಇಲ್ಲದಿದ್ದರೂ, ಅದೇ ಹೆಸರಿನಲ್ಲಿ ಜೆಜೆಎಂ ಕಾಮಗಾರಿ ನಡೆಸಿದಂತೆ ತೋರಿಸಿ 24.14 ಲಕ್ಷ ಹಣ ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ಹಂಗರಗಾ ಗ್ರಾಮಸ್ಥರು ಎಂಎಲ್ಸಿ ಭೀಮರಾವ ಪಾಟೀಲ್ ಅವರ ಗಮನಕ್ಕೆ ತಂದಿದ್ದಾರೆ.

ಈ ಕುರಿತು ತಕ್ಷಣ ಸಮಗ್ರ ತನಿಖೆ ನಡೆಸಿ, ಅಕ್ರಮದಲ್ಲಿ ಭಾಗವಹಿಸಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಮನವಿ ಸಲ್ಲಿಸಿದ್ದಾರೆ. ಈ ವಿಷಯವನ್ನು ಮುಖ್ಯಮಂತ್ರಿ ಅವರ ಗಮನಕ್ಕೂ ತರುವ ಉದ್ದೇಶದಿಂದ ನಿಯೋಗವನ್ನು ಕಳುಹಿಸುವುದಾಗಿ ಸಂದೀಪ ಪಾಟೀಲ್ ತಿಳಿಸಿದ್ದಾರೆ.

**ಬಿತ್ತನೆ ಬೀಜ ಕೊರತೆಯಾಗದಂತೆ ಕ್ರಮಕ್ಕೆ ಸೂಚನೆ**

ತಾಲೂಕಿನ ರೈತರಿಗೆ ಬಿತ್ತನೆ ಬೀಜಗಳ ಕೊರತೆ ಉಂಟಾಗದಂತೆ ನೋಡಿಕೊಳ್ಳಬೇಕು ಎಂದು ಎಂಎಲ್ಸಿ ಭೀಮರಾವ ಪಾಟೀಲ್ ಅವರು ಕೃಷಿ ಇಲಾಖೆಯ ಜೆಡಿ ಅವರಿಗೆ ದೂರವಾಣಿ ಮೂಲಕ ಸೂಚಿಸಿದರು. ತಾಲೂಕಿನ ವಿವಿಧ ಭಾಗಗಳಿಂದ ರೈತರು ಬೀಜಗಳ ಕೊರತೆಯ ಬಗ್ಗೆ ದೂರು ನೀಡುತ್ತಿರುವ ಹಿನ್ನೆಲೆಯಲ್ಲಿ, ಇಲಾಖೆಯ ಅಧಿಕಾರಿಗಳು ಸಮರ್ಪಕವಾಗಿ ಬೀಜ ವಿತರಣೆ ಮಾಡುವಂತೆ ಸೂಚನೆ ನೀಡಿದರು.

ಈ ವೇಳೆ ರೈತರಿಗೆ ಧೈರ್ಯ ತುಂಬಿದ ಪಾಟೀಲ್ ಅವರು, "ಯಾವುದೇ ಕಾರಣಕ್ಕೂ ಹೆದರಬೇಡಿ, ನಿಮ್ಮೊಂದಿಗೆ ನಾನು ಇದ್ದೇನೆ" ಎಂದು ಭರವಸೆ ನೀಡಿದರು.

# ಯುವಕನ ಕೊಲೆ: ಮೃತದೇಹಕ್ಕೆ ಬೆಂಕಿ ಹಚ್ಚಿ ಸಾಕ್ಷ್ಯ ನಾಶಕ್ಕೆ ಯತ್ನ

- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಯುವಕನನ್ನು ಹತ್ಯೆಗೈದು ದುಷ್ಕರ್ಮಿಗಳು ಸಾಕ್ಷ್ಯನಾಶ ಮಾಡುವ ಉದ್ದೇಶದಿಂದ ಮೃತ ದೇಹವನ್ನು ಬರೋಬ್ಬರಿ 13 ಕಿಲೋಮೀಟ–ರ್ ದೂರದವರೆಗೆ ಕೊಂಡೊಯ್ದು ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾರೆ.

ಎಲ್‌ಎಲ್‌ಸಿ ಕಾಲುವೆ ಬಳಿ ಕೆಲಸ ಮಾಡುತ್ತಿದ್ದ ಸಿಬ್ಬಂದಿ, ಅರ್ಧ ಸುಟ್ಟು ಕರಕಲಾದ ಮೃತದೇಹದ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

**ಪ್ರಕರಣ ದಾಖಲು:**

ಕೂಡಲೇ ಕಾರ್ಯ ಪ್ರವೃತ್ತರಾದ ಪೊಲೀಸರು ಸುತ್ತಮುತ್ತಲಿನ ಪ್ರದೇಶದಲ್ಲಿ ಶೋಧ ನಡೆಸಿದಾಗ, ದೊರೆತ ಮೃತದೇಹ ಸ್ಥಳದಿಂದ 13 ಕಿಲೋಮೀಟರ್ ದೂರದಲ್ಲಿ ಮೃತ ಯುವಕನಿಗೆ ಸೇರಿದ ಪಲ್ಸರ್ ಬೈಕ್, ಚಪ್ಪಲಿಗಳು ದೊರಕಿವೆ. ಮೃತ ಯುವಕ ಬಳ್ಳಾರಿಯ ಖಾಸಗಿ ಡಯಾಗೋಸ್ಟಿಕ್ ಸೆಂಟರ್‌ನಲ್ಲಿ ಟೆಕ್ನಿಷಿಯನ್ ಆಗಿ ಕೆಲಸ ಮಾಡುತ್ತಿದ್ದ ಬಸವನಗೌಡ (27)ಅವರದ್ದು ಎಂದು ದೃಢಪಡಿಸಿದ್ದಾರೆ. ಈ ಕುರಿತು ಮೋಕಾ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆಯುತ್ತಿದೆ.

ಮೃತಪಟ್ಟ ಯುವಕ ಅನಂತಪುರ ಜಿಲ್ಲೆಯ ವ್ಯಾಪ್ತಿಯ ಬೊಲ್ಲನಗುಡ್ಡಂ ಪ್ರದೇಶದ ನಿವಾಸಿ ಬಸವನಗೌಡ (27) ಎಂದು ಗುರುತಿಸಿಲಾಗಿದೆ.

ಬೆಂಕಿ ಪಕ್ಕಾ ಪ್ಲಾನ್ ಮಾಡಿ ಮೃತದೇಹಕ್ಕೆ ಹಚ್ಚಿದ್ದರೂ ಶನಿವಾರ ಸುರಿದ ಮಳೆಯಿಂದಾಗಿ ಬೆಂಕಿ ನಂದಿಹೋಗಿದ್ದು, ಶವವು ಅರ್ಧಂಬರ್ಧ ಸುಟ್ಟುಹೋಗಿ ಘಟನೆ ಬೆಳಕಿಗೆ ಬಂದಿದೆ.

ಘಟನಾ ಸ್ಥಳದಲ್ಲಿ ದೊರೆತ ಸುಳಿವು ಹಾಗೂ ಹತ್ಯೆ ನಡೆದ ರೀತಿಯನ್ನು ಗಮನಿಸಿದರೆ ಇದು ಪ್ರೀತಿ ಪ್ರೇಮ ವಿಷಯಕ್ಕೆ ಸಂಬಂಧಿಸಿದ್ದು ಎಂದು ತಿಳಿದು ಬಂದಿದೆ.

# ಅಂಗನವಾಡಿ ಕೇಂದ್ರಗಳಿಗೆ ಅಧಿಕಾರಿಗಳ ಭೇಟಿ, ಪರಿಶೀಲನೆ

- ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ತಾಲೂಕಿನ ಗೋಪಾಳಪೂರ ಗ್ರಾಮದ ಅಂಗನವಾಡಿ ಕೇಂದ್ರ–2ರಲ್ಲಿ ಆಹಾರ ವಿತರಣೆ, ಹಾಜರಾತಿ ನಿರ್ವಹಣೆ ಹಾಗೂ ಮಕ್ಕಳಿಗೆ ಪಾಠ ಬೋಧನೆ ಸೇರಿದಂತೆ ವಿವಿಧ ಅವ್ಯವಹಾರಗಳು ನಡೆಯುತ್ತಿವೆ ಎಂದು ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಹಾಗೂ ಡಿಎಸ್‌ಎಸ್ ಕ್ರಾಂತಿಕಾರಿ ಬಣ ತಾಲೂಕ ಸಂಚಾಲಕ ಆನಂದ ಭಜಂತ್ರಿ ಸಲ್ಲಿಸಿದ್ದ ಮನವಿಗೆ ಸ್ಪಂದಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳು ಮಂಗಳವಾರ ಅಂಗನವಾಡಿ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಅಂಗನವಾಡಿ ಕೇಂದ್ರಗಳಲ್ಲಿ ಸರ್ಕಾರದಿಂದ ಸರಬರಾಜಾಗುವ ಪೌಷ್ಟಿಕ ಆಹಾರವನ್ನು ಫಲಾನುಭವಿಗಳಿಗೆ ಸಮರ್ಪಕವಾಗಿ ವಿತರಿಸಲಾಗುತ್ತಿಲ್ಲ, ಮಕ್ಕಳ ಹಾಗೂ ಬಾಣಂತಿಯರ ಸಂಖ್ಯೆಯಲ್ಲಿ ವ್ಯತ್ಯಾಸ ತೋರಿಸಲಾಗುತ್ತಿದೆ, ಕಾರ್ಯಕರ್ತೆಯರು ನಿಯಮಿತವಾಗಿ ಕರ್ತವ್ಯಕ್ಕೆ ಹಾಜರಾಗುತ್ತಿಲ್ಲ ಮತ್ತು ಮಕ್ಕಳಿಗೆ ಸಮರ್ಪಕವಾಗಿ ಪಾಠ ಬೋಧನೆ ನಡೆಯುತ್ತಿಲ್ಲ ಎಂಬ ಆರೋಪಗಳು ಮನವಿಯಲ್ಲಿ ಉಲ್ಲೇಖಿಸಲಾಗಿತ್ತು.

ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ಅಂಗನವಾಡಿ ಕೇಂದ್ರಗಳ ದಾಖಲೆಗಳು, ಹಾಜರಾತಿ ಪುಸ್ತಕ, ಆಹಾರ ಸಾಮಗ್ರಿಗಳ ದಾಸ್ತಾನು ಹಾಗೂ ಫಲಾನುಭವಿಗಳ ವಿವರಗಳನ್ನು ಪರಿಶೀಲಿಸಿದರು. ಪರಿಶೀಲನೆ ವೇಳೆ ಕಂಡುಬಂದ ಲೋಪದೋಷಗಳನ್ನು ಸರಿಪಡಿಸಿಕೊಳ್ಳುವಂತೆ ಸಂಬಂಧಿಸಿದ ಕಾರ್ಯಕರ್ತೆಯರಿಗೆ ಸೂಚನೆ ನೀಡಿದ ಅಧಿಕಾರಿಗಳು, ಮುಂದಿನ ದಿನಗಳಲ್ಲಿ ಇದೇ ರೀತಿಯ ನಿರ್ಲಕ್ಷ್ಯ ಅಥವಾ ಅವ್ಯವಹಾರಗಳು ಕಂಡುಬಂದಲ್ಲಿ ಇಲಾಖಾ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಪರಿಶೀಲನೆ ಸಂದರ್ಭದಲ್ಲಿ ಜಿಲ್ಲಾ ನಿರೂಪಣಾಧಿಕಾರಿ ಗುರುರಾಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ತಿಪ್ಪಣ್ಣ, ಸಿಡಿಪಿಒ ದೀಪಿಕಾ, ಶಿಶು ಅಭಿವೃದ್ಧಿ ಯೋಜನಾ ಇಲಾಖೆಯ ಅಧಿಕಾರಿಗಳು, ಆಶಾ ಕಾರ್ಯಕರ್ತೆ ಸಾಬಮ್ಮ, ಅಂಗನವಾಡಿ ಕೇಂದ್ರ–1ರ ಕಾರ್ಯಕರ್ತೆ ಸಾವಿತ್ರಮ್ಮ ಹಾಗೂ ಅಂಗನವಾಡಿ ಕೇಂದ್ರ–2ರ ಕಾರ್ಯಕರ್ತೆ ನಿರ್ಮಲ ಉಪಸ್ಥಿತರಿದ್ದರು.

# ಲೋನ್‌ಗಳ ಜಾಲಕ್ಕೆ ಯುವ ಪೀಳಿಗೆ ಬಲಿ



ವರ್ತಮಾನ–ವಿಜಯ

● ಮಧೂರ ತಿಳಗೂಳಕರ
ಜಿಲ್ಲಾ ವರದಿಗಾರರು

ಇಂದಿನ ತಾಂತ್ರಿಕ ಯುಗದಲ್ಲಿ ಎಲ್ಲವೂ ನಮ್ಮ ಬೆರಳ ತುದಿಯಲ್ಲೇ ಸಿಗುತ್ತಿದೆ. ಶಾಪಿಂಗ್‌ನಿಂದ ಹಿಡಿದು ಬ್ಯಾಂಕಿಂಗ್ ವ್ಯವಹಾರದವರೆಗೆ ಎಲ್ಲವೂ ಡಿಜಿಟಲ್ ಮಯ. ಆದರೆ ಇದೇ ಡಿಜಿಟಲ್ ಲೋಕದ ಒಂದು ಕರಾಳ ಮುಖ ಇಂದು ನಮ್ಮ ದೇಶದ ಭವಿಷ್ಯವಾಗಿರುವ ಯುವ ಸಮುದಾಯವನ್ನು ಅತ್ಯಂತ ಕ್ರೂರವಾಗಿ ಬೇಟೆಯಾಡುತ್ತಿದೆ. ಅದೇ ಸುಲಭವಾಗಿ ಸಿಗುವ ಆನ್‌ಲೈನ್ ಆ್ಯಪ್ ಲೋನ್‌ಗಳು (Instant Loan Apps)... ಕೇವಲ ಐದೇ ನಿಮಿಷದಲ್ಲಿ ಶೂನ್ಯ ದಾಖಲಾತಿಯೊಂದಿಗೆ ಸಾಲ ಪಡೆಯಿರಿ ಅದು ಯಾವುದೇ ಗ್ಯಾರಂಟಿ ಇಲ್ಲದೆ ತಕ್ಷಣ ಹಣ ಖಾತೆಗೆ ಜಮಾ–ಇಂತಹ ಆಕರ್ಷಕ ಜಾಹೀರಾತುಗಳು ಸಾಮಾಜಿಕ ಜಾಲತಾಣಗಳಲ್ಲಿ ಯುವಕರನ್ನು ಸುಲಭವಾಗಿ ಸೆಳೆಯುತ್ತಿವೆ. ಆದರೆ ಈ ಆಕರ್ಷಣೆಯ ಹಿಂದೆ ಅಡಗಿರುವುದು ಒಂದು ಅಪಾಯಕಾರಿ ಮರಣಶಾಸನ ಎಂಬುದು ಯುವಕರಿಗೆ ತಿಳಿಯುವಷ್ಟರಲ್ಲಿ ಕಾಲ ಮಿಂಚಿರುತ್ತದೆ...

**ಒಂದು ಕ್ಲಿಕ್‌ನಲ್ಲಿದೆ ಸುಲಭ ಸಾಲ –ಆಕರ್ಷಣೆಯ ಅಸಲಿ ಮುಖವಾಡ:** ಇಂದಿನ ಯುವ ಪೀಳಿಗೆಗೆ ತಮ್ಮ ಆಸೆ–ಆಕಾಂಕ್ಷೆಗಳನ್ನು ತಕ್ಷಣವೇ ಈಡೇರಿಸಿಕೊಳ್ಳಬೇಕು ಎಂಬ ಹಂಬಲ ಹೆಚ್ಚು. ದುಬಾರಿ ಮೊಬೈಲ್ ಕೊಳ್ಳಲು, ಸ್ನೇಹಿತರೊಂದಿಗೆ ಪಾರ್ಟಿ ಮಾಡಲು, ಅಥವಾ ಸಣ್ಣಪುಟ್ಟ ತುರ್ತು ಅಗತ್ಯಗಳಿಗಾಗಿ ಅವರು ಹೆತ್ತವರನ್ನು ಕೇಳಲು ಸಂಕೋಚಪಟ್ಟುಕೊಂಡು ಅಥವಾ ಇನ್ನಾವುದೋ ಕಾರಣಕ್ಕೆ ಲೋನ್ ಆ್ಯಪ್‌ಗಳ ಮೊರೆ ಹೋಗುತ್ತಾರೆ. ಯಾವುದೇ ಕಟ್ಟುನಿಟ್ಟಿನ ನಿಯಮಗಳಿಲ್ಲದೆ, ಕೇವಲ ಆಧಾರ್ ಮತ್ತು ಪ್ಯಾನ್ ಕಾರ್ಡ್ ನೀಡಿದರೆ ಸಾಕು, ತಕ್ಷಣ ಹಣ ಕೈ ಸೇರುತ್ತದೆ. ಈ ಸುಲಭ ಪ್ರಕ್ರಿಯೆಯೇ ಯುವಕರನ್ನು ಈ ಜಾಲದೊಳಗೆ ಬೀಳುವಂತೆ ಮಾಡುವ ಮೊದಲ ಪ್ರಮುಖ ಆಕರ್ಷಣೆಯಾಗಿದ್ದು ಉಚಿತವಾಗಿ ಅಥವಾ ಅತಿ ಸುಲಭವಾಗಿ ಸಿಗುವ ಯಾವುದೇ ವಸ್ತು ಅಥವಾ ಹಣದ ಹಿಂದೆ ದೊಡ್ಡದೊಂದು ಬೆಲೆ ತೆರಬೇಕಾಗಿರುವ ಅಸಲಿ ಕರಾಳತೆಯೆ ಬೇರೆಯಾಗಿರುತ್ತದೆ



ಸಾಲ ಕೊಡುವಾಗ ನಯವಾಗಿ ವರ್ತಿಸುವ ಈ ಆ್ಯಪ್‌ಗಳ ಅಸಲಿ ಮುಖವಾಡ ಕಳಚಿಕೊಳ್ಳುವುದು ಮರುಪಾವತಿಯ ಸಮಯ ಹತ್ತಿರ ಬಂದಾಗ ಅತಿ ಹೆಚ್ಚು ಬಡ್ಡಿ ಮತ್ತು ಗುಪ್ತ ಶುಲ್ಕಗಳು ರಕ್ತ ಹೀರುವವರಾಗಿ ಬಿಡುತ್ತಾರೆ ಶೇಕಡಾ 30 ರಿಂದ 100 ರವರೆಗೆ ಬಡ್ಡಿ ಮತ್ತು ಪ್ರೊಸೆಸಿಂಗ್ ಫೀಸ್ ಹೆಸರಿನಲ್ಲಿ ಹಣ ಲೂಟಿ ಮಾಡಲಾಗುತ್ತದೆ.

**ನಿಮ್ಮ ಮೊಬೈಲ್ ನಲ್ಲಿರುವ ಡಾಟಾ ದುರ್ಬಳಕೆ ನಿಶ್ಚಿತ:** ಲೋನ್ ಆ್ಯಪ್ ಇನ್‌ಸ್ಟಾಲ್ ಮಾಡುವಾಗ ಯುವಕರು ಯೋಚಿಸದೆ ತಮ್ಮ ಮೊಬೈಲ್‌ನಲ್ಲಿರುವ ಕಾಂಟ್ಯಾಕ್ಟ್‌ಗಳು, ಗ್ಯಾಲರಿ (ಫೋಟೋಗಳು) ಮತ್ತು ವೈಯಕ್ತಿಕ ಮಾಹಿತಿಯನ್ನು ಪ್ರವೇಶಿಸಲು (Permissions) ಅನುಮತಿ ನೀಡಿರುತ್ತಾರೆ. ಇದೇ ಮುಂದೆ ಬ್ಲ್ಯಾಕ್‌ಮೇಲ್ ಮಾಡಲು ಅಸ್ತ್ರವಾಗುತ್ತದೆ.

**ಮಾನಸಿಕ ಒತ್ತಡ ಮತ್ತು ಕಸಿದುಕೊಳ್ಳುವ ಜೀವಗಳು**

ನಿಗದಿತ ದಿನದಂದು ಸಾಲ ಮರುಪಾವತಿ ಮಾಡದಿದ್ದರೆ ಆರಂಭವಾಗುತ್ತದೆ ಅಸಲಿ ನರಕ ಯಾತನೆ. ಲೋನ್ ಕಂಪನಿಗಳ ಏಜೆಂಟರು ಯುವಕರ ಮೊಬೈಲ್‌ನಲ್ಲಿದ್ದ ಅವರ ಪೋಷಕರು, ಸ್ನೇಹಿತರು, ಮತ್ತು ಸಂಬಂಧಿಕರ ನಂಬರ್‌ಗಳಿಗೆ ಕರೆ ಮಾಡಿ ಅತ್ಯಂತ ಅಶ್ಲೀಲ ಭಾಷೆಯಲ್ಲಿ ನಿಂದಿಸಲು ಆರಂಭಿಸುತ್ತಾರೆ. ಅಷ್ಟೇ ಅಲ್ಲದೆ, ಯುವಕರ ಫೋಟೋಗಳನ್ನು ಅಶ್ಲೀಲವಾಗಿ ಮಾರ್ಫಿಂಗ್ ಮಾಡಿ ಅವರ ಕಾಂಟ್ಯಾಕ್ಟ್ ಲಿಸ್ಟ್‌ನಲ್ಲಿರುವ ಎಲ್ಲರಿಗೂ ಕಳುಹಿಸುವುದಾಗಿ ಬೆದರಿಕೆ ಹಾಕುತ್ತಾರೆ.

ಇತ್ತೀಚಿನ ದಿನಗಳಲ್ಲಿ ಇಂತಹ ಮಾನಸಿಕ ಕಿರುಕುಳ ತಾಳಲಾರದೆ, ಸಮಾಜದಲ್ಲಿ ಗೌರವ ಕಳೆದುಕೊಂಡೆವೆಂಬ ತೀವ್ರ ನಿರಾಶೆಯಿಂದ ಎಷ್ಟೋ ಪ್ರತಿಭಾವಂತ ವಿದ್ಯಾರ್ಥಿಗಳು, ಯುವ ಉದ್ಯೋಗಿಗಳು ಆತ್ಮಹತ್ಯೆಯಂತಹ ದಾರಿ ಹಿಡಿಯುತ್ತಿದ್ದಾರೆ. ಕ್ಷಣಿಕ ಸುಖಕ್ಕಾಗಿ ಮಾಡಿದ ಸಣ್ಣ ಸಾಲ, ಇಡೀ ಕುಟುಂಬವನ್ನೇ ಕಣ್ಣೀರಿನ ಕಡಲಲ್ಲಿ ಮುಳುಗಿಸುತ್ತಿದೆ.

**ಯುವ ಸಮುದಾಯವೇ ಎಚ್ಚೆತ್ತುಕೊಳ್ಳಿ:** ಈ ಮಾರಕ ಜಾಲದಿಂದ ಪಾರಾಗಲು ಯುವ ಪೀಳಿಗೆ ಮತ್ತು ಪೋಷಕರು ಜಂಟಿಯಾಗಿ ಎಚ್ಚೆತ್ತುಕೊಳ್ಳಬೇಕಾಗಿದೆ ಸಾಲ ಪಡೆಯುವ ಮುನ್ನ ಆರ್‌ಬಿಐ (ಖಃಖ) ಮಾನ್ಯತೆ ಪರಿಶೀಲಿಸಿ , ಯಾವುದೇ ಆ್ಯಪ್‌ನಿಂದ ಸಾಲ ಪಡೆಯುವ ಮುನ್ನ ಅದು ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ ನೊಂದಾಯಿತವಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳಿ, ವೈಯಕ್ತಿಕ ಮಾಹಿತಿಯನ್ನು ಹಂಚಿಕೊಳ್ಳಬೇಡಿ, ನಿಮ್ಮ ಕಾಂಟ್ಯಾಕ್ಟ್‌ಗಳು ಮತ್ತು ಗ್ಯಾಲರಿಯನ್ನು ಪ್ರವೇಶಿಸಲು ಯಾವುದೇ ಅಪರಿಚಿತ ಆ್ಯಪ್‌ಗಳಿಗೆ ಅನುಮತಿ ನೀಡಬೇಡಿ. ಆರ್ಥಿಕ ಸಂಕಷ್ಟ ಎದುರಾದಾಗ ಅಥವಾ ಲೋನ್ ಆ್ಯಪ್‌ನಿಂದ ಬೆದರಿಕೆ ಬಂದಾಗ ಹೆದರಿ ತಪ್ಪು ನಿರ್ಧಾರ ಕೈಗೊಳ್ಳಬೇಡಿ. ತಕ್ಷಣ ನಿಮ್ಮ ಪೋಷಕರು ಅಥವಾ ಆಪ್ತ ಸ್ನೇಹಿತರ ಬಳಿ ವಿಷಯ ಹಂಚಿಕೊಳ್ಳಿ ಇಂತಹ ಬೆದರಿಕೆಗಳು ಬಂದ ತಕ್ಷಣ ಹೆದರದೆ ರಾಷ್ಟ್ರೀಯ ಸೈಬರ್ ಕ್ರೈಂ ಹೆಲ್ಪ್‌ಲೈನ್ ಸಂಖ್ಯೆ 1930 ಗೆ ಕರೆ ಮಾಡಿ ಅಥವಾ ಹತ್ತಿರದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ.

ಜೀವನವು ಮೊಬೈಲ್ ಸ್ಕ್ರೀನ್ ಮೇಲಿನ ಒಂದು 'ಕ್ಲಿಕ್'ಗಿಂತ ಮತ್ತು ಕ್ಷಣಿಕ ಆಡಂಬರಕ್ಕಿಂತ ಅತ್ಯಂತ ಅಮೂಲ್ಯವಾದದ್ದು. ಸಾಲ ಮಾಡಿ ಸುಖ ಪಡುವುದಕ್ಕಿಂತ, ಇದ್ದುದರಲ್ಲೇ ನೆಮ್ಮದಿಯಿಂದ ಬದುಕುವುದನ್ನು ಕಲಿಯಬೇಕಿದೆ. ಯುವ ಸಮುದಾಯವೇ ಈ ಡಿಜಿಟಲ್ ಜಾಲದ ಬಗ್ಗೆ ಜಾಗೃತರಾಗಿರಿ, ನಿಮ್ಮ ಜೀವ ಮತ್ತು ಭವಿಷ್ಯವನ್ನು ಸಣ್ಣ ಮೊತ್ತದ ಸಾಲಕ್ಕಾಗಿ ಬಲಿ ಕೊಡಬೇಡಿ ಎಂಬುದೇ ನಮ್ಮ ಆಶಯ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)